ಸಂಪುಟ: 13 Volume | ಸಂಚಿಕೆ: 297 Issue | ಪುಟಗಳು 08 Pages | ಬುಧವಾರ 14 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಪ್ರಾಣಿ ಸಹಜ ವ್ಯಕ್ತಿಯನ್ನು ಮನುಷ್ಯನನ್ನಾಗಿಸಿ, ಮನುಷ್ಯನನ್ನು ದೇವರನ್ನಾಗಿಸುವ ಭಾವನೆಯೇ ಧರ್ಮ.

–ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

ನಮ್ಮ ಪರಂಪರೆ ನಮ್ಮ ಹೆಮ್ಮೆಯಾಗಬೇಕು 6
ವಿದ್ಯಾರ್ಥಿಗಳ ಯಶಸ್ಸಿಗೆ ಜ್ಞಾನವೇ ಸಾಧನ 7
ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವ ಯಶಸ್ವಿ 8



ಬೀದರ್, ಮಾಜಿ ಕೆಎಂಎಫ್ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ. ಪರಿಹಾರ ಪತ್ರಿಕೆ ಸಂಪಾದಕರಿಗೆ. ಮಲ್ಲಮ್ಮ ನುಡಿ ಕ್ಯಾಲೆಂಡರ್ ನೀಡಿ ಗೌರವಿಸಲಾಯಿತು.

## ಶತಾಯುಷಿ ಖಂಡ್ರೆ ಆರೋಗ್ಯ ಸ್ಥಿರ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಶತಾಯುಷಿ ಡಾ.ಭೀಮಣ್ಣ ಖಂಡ್ರೆ ಅವರ ಸ್ಥಿರವಾಗಿದ್ದು, ಅವರನ್ನು ಕಾಣಲು ಅಭಿಮಾನಿಗಳ ದಂಡು ಪಟ್ಟಣಕ್ಕೆ ಹರಿದು ಬರುತ್ತಿದೆ. ವಯೋಸಹಜ ಕಾಯಿಲೆ ಮತ್ತು ರಕ್ತದೊತ್ತಡ, ಉಸಿರಾಟದ ಸಮಸ್ಯೆ ಇರುವ ಹಿನ್ನೆಲೆಯಲ್ಲಿ ಅವರನ್ನು ಬೀದರ್ ನಗರದ ಅವರ ಸಂಬಂಧಿಕರ ಗುದಗೆ ಮಲ್ಟಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಈ ಬಗ್ಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಮಾತನಾಡಿದ್ದು, ಶತಾಯುಷಿ ಭೀಮಣ್ಣ ಖಂಡ್ರೆ ಅವರ ಆರೋಗ್ಯ ಸ್ಥಿರವಾಗಿದ್ದು, ಯಾವುದೇ ವದಂತಿಗಳಿಗೆ ಕಿವಿಗೊಡದಂತೆ ಮನವಿ ಮಾಡಿಕೊಂಡಿದ್ದಾರೆ.



## ಕ್ರೀಡಾಂಗಣಕ್ಕೆ ಪರಂ ಹೆಸರು: ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೇವಲ ರಾಜಕೀಯ ಲಾಭಕ್ಕಾಗಿ ಕಾಂಗ್ರೆಸ್ ನವರಿಗೆ ಮಹಾತ್ಮಾ ಗಾಂಧಿ ಬೇಕು, ಗಾಂಧಿ ರಾಜಕೀಯಕ್ಕೆ, ಪರಮೇಶ್ವರ್ (ಪರಂ) ಅಧಿಕಾರಕ್ಕೆ ಇದು ಕಾಂಗ್ರೆಸ್ ಸಿದ್ಧಾಂತ ಎಂದು ನಿಖಿಲ್ ಕುಮಾರಸ್ವಾಮಿ ಅವರು ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಅವರು, ತುಮಕೂರು ಮಹಾತ್ಮಾ ಗಾಂಧಿ ಕ್ರೀಡಾಂಗಣಕ್ಕೆ ಪರಮೇಶ್ವರ್ ಹೆಸರು ನೇಮಕ ಮಾಡಿರುವುದನ್ನ ಖಂಡಿಸಿದ್ದಾರೆ. ನರೇಗಾಕ್ಕೆ ಒಂದು ನ್ಯಾಯ, ಸ್ಟೇಡಿಯಂಗೆ ಒಂದು ನ್ಯಾಯವೇ? ಇದೇ ಕಾಂಗ್ರೆಸ್ ಯೋಜನೆಯನ್ನು ಎಂದು ಮರುನಾಮಕರಣ ಮಾಡಿದ ಬಗ್ಗೆ ದೇಶಾದ್ಯಂತ



ಆಕ್ರೋಶ ವ್ಯಕ್ತಪಡಿಸುತ್ತಿದೆ ಎಂದು ಕಿಡಿಕಾರಿದ್ದಾರೆ. ಕೇವಲ ರಾಜಕೀಯ ಲಾಭಕ್ಕಾಗಿ ಮಾತ್ರ ಕಾಂಗ್ರೆಸ್ ನವರಿಗೆ ಗಾಂಧಿ ಬೇಕು, ಅಧಿಕಾರದಲ್ಲಿ ಇದ್ದಾಗ ಗಾಂಧೀಜಿ ಬೇಡ ಎಂದು ಸರ್ಕಾರದ ವಿರುದ್ಧ ನಿಖಿಲ್ ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

## ಯಾವುದೇ ಕ್ಷಣ ಇರಾನ್-ಅಮೆರಿಕ ಯುದ್ಧ

**ಇರಾನ್:** ಇರಾನ್ನಲ್ಲಿನ ನಾಗರಿಕ ಅಶಾಂತಿಯ ಹಿನ್ನೆಲೆಯಲ್ಲಿ ಯಾವುದೇ ಕ್ಷಣ ಯುದ್ಧವಾಗಬಹುದು ಎಂದು ಅಮೆರಿಕ ತಿಳಿಸಿದೆ. ಈ ಹಿನ್ನೆಲೆಯಲ್ಲಿ ತನ್ನ ದೇಶದ ಪ್ರಜೆಗಳು ಅಮೆರಿಕಕ್ಕೆ ಹಿಂದಿರುಗುವಂತೆ ಸೂಚಿಸಿದೆ. ಇದೇ ಕಾರಣಕ್ಕೆ ಭಾರತಕ್ಕೆ ಬಾಸ್ಮತಿ ಅಕ್ಕಿ ರಫ್ತಿನ ಮೇಲೆ ಪರಿಣಾಮ ಬೀರಲು ಪ್ರಾರಂಭಿಸಿದೆ. ಇದು ದೇಶೀಯ ಬೆಲೆಗಳಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿದೆ, ಏಕೆಂದರೆ ರಫ್ತುದಾರರು ಪಾವತಿ ವಿಳಂಬ ಮತ್ತು ಹೆಚ್ಚುತ್ತಿರುವ ಅನಿಶ್ಚಿತತೆಗಳನ್ನು ಎದುರಿಸುತ್ತಿದ್ದಾರೆ ಎಂದು ಕೈಗಾರಿಕಾ ಸಂಸ್ಥೆ ತಿಳಿಸಿದೆ.

## ಜನ ನಾಯಗನ್ ಬಿಡುಗಡೆಗೆ ಅಡ್ಡಿ

**ಹೊಸದಿಲ್ಲಿ :** ಕೇಂದ್ರ ಸರ್ಕಾರ ತಮಿಳು ಚಿತ್ರ ಜನ ನಾಯಗನ್ ಬಿಡುಗಡೆಗೆ ಅಡ್ಡಿಪಡಿಸಲು ಮುಂದಾಗಿದೆ ಎಂಬ ವರದಿಗಳ ಬೆನ್ನಲ್ಲೇ ರಾಜಕೀಯ ಬಿರುಗಾಳಿ ಎದ್ದಿದೆ.ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು




ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಈ ಕ್ರಮವನ್ನು ತಮಿಳು ಸಂಸ್ಕೃತಿಯ ಮೇಲಿನ ದಾಳಿ ಎಂದು ಖಂಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಚ್ಚರಿಕೆ ನೀಡಿದ ಗಾಂಧಿ, ತಮಿಳು ಜನರ ಧ್ವನಿಯನ್ನು ಹತ್ತಿಕ್ಕಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

## ಬಾಂಗ್ಲಾ ಪರ ಘೋಷಣೆ, ಸೆರೆ

**ಬೆಂಗಳೂರು:** ಬೆಂಗಳೂರಿನಲ್ಲಿ ಜೈ ಬಾಂಗ್ಲಾ ಎಂದು ಘೋಷಣೆ ಕೂಗಿದ್ದ ಮಹಿಳೆಯನ್ನ ಹೆಬ್ಬಗೋಡಿ ಪೊಲೀಸರು ಮಂಗಳವಾರ ಬಂಧನಕ್ಕೊಳಪಡಿಸಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ ಹುಲಿಮಂಗಲದಲ್ಲಿ ಅಕ್ರಮವಾಗಿ ನೆಲೆಸಿದ್ದ ವಲಸಿಗರನ್ನ ತೆರವು ಕಾರ್ಯಾಚರಣೆ ಮಾಡುತ್ತಿದ್ದ ವೇಳೆ ಶರ್ಬಾನು ಖತನ್ ಜೈ ಬಾಂಗ್ಲಾ ಎಂದು ಘೋಷಣೆ ಕೂಗಿದ್ದಳು. ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮಹಿಳೆಯನ್ನ ಬಂಧಿಸಿದ್ದಾರೆ. ಬಂಧಿತ ಮಹಿಳೆಯನ್ನು ಸರ್ಬಾನು ಖಾತುನ್ ಎಂದು ಗುರ್ತಿಸಲಾಗಿದೆ. ಸದ್ಯ ಮಹಿಳೆಯನ್ನು ಬಂಧಿಸಿರುವ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

# ರಾಗಾ ಮಂತ್ರ ಶಾಂತಿ ತಂತ್ರ?

## ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಜೊತೆ ರಾಹುಲ್ ಗಾಂಧಿ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ರಾಜ್ಯ ಕಾಂಗ್ರೆಸ್ ನಲ್ಲಿ ಮತ್ತೆ ನಾಯಕತ್ವ ಬದಲಾವಣೆಯ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ಸಿಎಂ ಕುರ್ಚಿ ಕಾಳಗದ ನಡುವೆಯೇ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಅವರು ಮೈಸೂರಿನ ಮಂಡಕಳ್ಳಿಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿಯನ್ನ ಅವರನ್ನು ಜಂಟಿಯಾಗಿ ಸ್ವಾಗತಿಸಿದ್ದು, ಕುತೂಹಲಕ್ಕೆ ಕಾರಣವಾಗಿದೆ.

**ಅದೇ ರಾಗ ಅದೇ ಹಾಡು:** ಒಂದು ಕಡೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕೊಟ್ಟ ಮಾತು ನೆನಪಿಸುತ್ತಿದ್ದರೆ ಮತ್ತೊಂದು ಕಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೈಕಮಾಂಡ್ ನಾಯಕರ ಮಾತೇ ಅಂತಿಮ ಎನ್ನುತ್ತಿದ್ದಾರೆ.

ಇದಕ್ಕೆ ಹೈಕಮಾಂಡ್ ಸೂಕ್ತ ರೀತಿ ಪ್ರತಿಕ್ರಿಯೆ ಕೊಡದೇ ಇರುವುದು, ಪ್ರತಿದಿನ ಕುರ್ಚಿ ಕದನ ಆಗುತ್ತಿರುವುದು ಅದೇ ರಾಗ ಅದೇ ಹಾಡು ಎನ್ನುವಂತಾಗಿದೆ.

**ಮಹತ್ವದ ಮಾತು:** ತಮಿಳುನಾಡಿಗೆ ತೆರಳಲು ದೆಹಲಿಯಿಂದ ವಿಶೇಷ ವಿಮಾನದ ಮೂಲಕ ಮೈಸೂರಿಗೆ ಆಗಮಿಸಿದ ರಾಹುಲ್ ಗಾಂಧಿ ಅವರಿಗೆ ಸಿಎಂ ಸಿದ್ದರಾಮಯ್ಯ ಅವರು ಪುಷ್ಪಗುಚ್ಛ ನೀಡಿ ಸ್ವಾಗತಿಸಿ, ಮೈಸೂರು ಅರಮನೆ ಮಾದರಿಯನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ವೇಳೆ ಸಿಎಂ ಹಾಗೂ ಡಿಸಿಎಂ ಕೆಲ ನಿಮಿಷಗಳ ಕಾಲ ರಾಹುಲ್ ಗಾಂಧಿ ಜತೆ ಮಹತ್ವದ ಚರ್ಚೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.



ಮೈಸೂರಲ್ಲಿ ನಡೆದದ್ದು ಸೌಹಾರ್ದಯುತ ಭೇಟಿ ಆಗಿರುತ್ತದೆ. ರಾಜ್ಯದಲ್ಲಿ ಪಕ್ಷದ ನಾಯಕತ್ವವು ರಾಷ್ಟ್ರಮಟ್ಟದ ಹಿರಿಯ ನಾಯಕರೊಂದಿಗೆ ನಿಯಮಿತ ಸಂಪರ್ಕದಲ್ಲಿರುತ್ತದೆ. ಅವರ ಜೊತೆ ಭೇಟಿ ಅವಶ್ಯಕತೆಯನ್ನು ಅವಲಂಬಿಸಿರುತ್ತದೆ. ಅಗತ್ಯವಿದ್ದರೆ ನಾನು ಹೋಗುತ್ತೇನೆ. ಇಲ್ಲದಿದ್ದರೆ, ನಾನು ಅನಗತ್ಯವಾಗಿ ಏಕೆ ಹೋಗಬೇಕು?

–ಜಿ ಪರಮೇಶ್ವರ, ಗೃಹ ಸಚಿವ

### ಎಲ್ಲಾ ಊಹಾಪೋಹ: ಸಿಎಂ

ಮಾಧ್ಯಮಗಳೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ನಮ್ಮಲ್ಲಿ ಯಾವ ಗೊಂದಲ ಇಲ್ಲ, ಯಾವ ಸಮಸ್ಯೆಯೂ ಇಲ್ಲ. ಊಹಾಪೋಹ ಬಗ್ಗೆ ಚರ್ಚೆ ಮಾಡ್ತಿರುವುದು ಮಾಧ್ಯಮದವರು. ಯಾರೋ ಎಂಎಲ್ಎ ಏನೂ ಗೊತ್ತಿಲ್ಲದೆ ಏನೋ ಹೇಳುತ್ತಾರೆ. ಅವರಿಗೆ ಏನು ಗೊತ್ತು? ಮಾತನಾಡಬೇಕಿರುವುದು ನಾನು ಮತ್ತು ಡಿ.ಕೆ.ಶಿವಕುಮಾರ್. ಡಿಸಿಎಂ ಏನಾದರೂ ಮಾತನಾಡಿದ್ದಾರಾ ಎಂದಿದ್ದಾರೆ.

### ಹೈ ನಿರ್ಧಾರ ಅಂತಿಮ

ನಮ್ಮಲ್ಲಿ ಯಾವ ಗೊಂದಲ ಇಲ್ಲ. ಯಾವ ಚರ್ಚೆಯೂ ಇಲ್ಲ. ಖರ್ಗೆ, ಡಿ.ಕೆ.ಶಿವಕುಮಾರ್ ಜೊತೆ ಮಾತನಾಡಿದ್ದೇನೆ. ಯಾರ ಅಪಸ್ವರವೂ ಇಲ್ಲ, ಯಾವ ಸಮಸ್ಯೆಯೂ ಇಲ್ಲ. ಏನೇ ತೀರ್ಮಾನಗಳಿದ್ದರೂ ಹೈಕಮಾಂಡ್ ಮಾಡುತ್ತೆ. ಅದರ ನಿರ್ಧಾರಕ್ಕೆ ಬದ್ಧವೆಂದು ನಾನು, ಡಿಕೆ ಹೇಳಿದ್ದೇವೆ. ಸದ್ಯಕ್ಕೆ ನಾನೇನು ದೆಹಲಿಗೆ ಹೋಗುತ್ತಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.

### ಪ್ರತ್ಯೇಕ ಚರ್ಚೆಯ ರಹಸ್ಯ

ತಮಿಳುನಾಡಿಗೆ ತೆರಳುವ ಮಾರ್ಗಮಧ್ಯೆ ಮೈಸೂರಿನಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬಂದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಚರ್ಚಿಸಿದ್ದಾರೆ. ಅದು ಯಾವ ವಿಷಯ ಎನ್ನುವುದೇ ಕುತೂಹಲಕ್ಕೆ ಕಾರಣವಾಗಿದೆ. ಅದು ಕುರ್ಚಿ ವಿಷಯ ಸಮಯ ಬಂದಾಗ ಬಹಿರಂಗವಾಗಲಿದೆ ಎನ್ನುತ್ತವೆ ಮೂಲಗಳು.

### ದೇವರು ಅವಕಾಶ ಕೊಡುವ

ಕುರ್ಚಿ ಕದನಕ್ಕೆ ಬೇಸತ್ತಂತೆ ಕಾಣುವ ಡಿಸಿಎಂ ಡಿಕೆ ಶಿವಕುಮಾರ್ ಅವರು ಮೈಸೂರಿನಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಬಂದ ಬಳಿಕ ಮಾಧ್ಯಮದವರ ಜೊತೆ ಮಾತನಾಡಿ, ದೇವರು ವರ ಕೊಡುವುದಿಲ್ಲ. ಆದರೆ ಅದರ ಬದಲಿಗೆ ಒಂದು ಅವಕಾಶವನ್ನು ಮಾತ್ರ ಕೊಡುತ್ತಾನೆ ಎಂದು ಮಾರ್ಮಿಕವಾಗಿ ನುಡಿದಿರುವುದು ಹಲವು ಅರ್ಥಗಳಿಗೂ ಕಾರಣವಾಗಿದೆ.

## ಆನೆ ದಾಳಿಗೆ ಮಹಿಳೆ ಸಾವು: ಪರಿಹಾರ ಶೀಘ್ರ

**ಭಾಲ್ಕಿ:** ಹಾಸನ ಜಿಲ್ಲೆ ಸಕಲೇಶಪುರ ತಾಲೂಕು ಮೂಗಲಿ ಗ್ರಾಮದಲ್ಲಿಂದು ಕಾಡಾನೆ ದಾಳಿಗೆ 40 ವರ್ಷದ ಮಹಿಳೆ ಮೃತಪಟ್ಟಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕೂಡಲೇ ಸ್ಥಳಕ್ಕೆ ಧಾವಿಸಿ ಆನೆಯನ್ನು ಮರಳಿ ಕಾಡಿಗೆ ಮರಳಿಸಲು ಅಥವಾ ಆನೆ ಸೆರೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ವನ್ಯಜೀವಿ ವಿಭಾಗದ ಹಿರಿಯ ಅಧಿಕಾರಿಗಳಿಗೆ ಸೂಚಿಸಿರುವ ಅವರು, ಕೂಡಲೇ ಸ್ಥಳಕ್ಕೆ ತೆರಳಿ, ಪರಿಸ್ಥಿತಿ ನಿಭಾಯಿಸುವಂತೆ ಹಾಸನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪ್ರತಿಯೊಂದು ಜೀವವೂ ಅಮೂಲ್ಯ, ಹೋದ ಜೀವವನ್ನು ಮರಳಿ ತರಲು ಸಾಧ್ಯವಿಲ್ಲ. ಆದರೆ ಆಕಸ್ಮಿಕವಾಗಿ ವನ್ಯಜೀವಿ ದಾಳಿಯಿಂದ ಮೃತಪಟ್ಟವರ ಕುಟುಂಬಕ್ಕೆ ಆಸರೆಯಾಗಲು ನಿಯಮಾನುಸಾರ ಪರಿಹಾರ ನೀಡುವಂತೆಯೂ ತಿಳಿಸಿದ್ದಾರೆ. ಆನೆಗಳ ಸಂಚಾರದ ಬಗ್ಗೆ ಸ್ಥಳೀಯರಿಗೆ ಎಚ್ಚರಿಕೆ ಸಂದೇಶ ರವಾನಿಸಲು ಈಶ್ವರ ಖಂಡ್ರೆ ಸೂಚಿಸಿದ್ದಾರೆ.

## ಬೆಂಗಳೂರು ಭೇಟಿಗಾಗಿ ಆಗಮಿಸಿದ ಫೆಡ್ರಿಕ್ ಮೆರ್ಜ್

**ಬೆಂಗಳೂರು:** ಬೆಂಗಳೂರು ಭೇಟಿ ಸಂಬಂಧ ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಚಾನ್ಸಲರ್ ಫೆಡ್ರಿಕ್ ಮೆರ್ಜ್ ಅವರು ತಮ್ಮ ನಿಯೋಗದೊಂದಿಗೆ ಇಂದು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

ಫೆಡರಲ್ ರಿಪಬ್ಲಿಕ್ ಆಫ್ ಜರ್ಮನಿಯ ಚಾನ್ಸಲರ್ ಮತ್ತು ಅವರ ನಿಯೋಗದವರನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ.ಪಾಟೀಲ ಅವರು ಆತ್ಮೀಯವಾಗಿ ಸ್ವಾಗತಿಸಿದರು.

ಈ ಸಮಯದಲ್ಲಿ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಕೆ.ಜಿ ಜಗದೀಶ, ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಿ. ಜಗದೀಶ್, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್, ಬೆಂಗಳೂರು ಪ್ರಾದೇಶಿಕ ಪಾಸ್ ಪೋರ್ಟ್ ಅಧಿಕಾರಿಗಳು ಹಾಗೂ ಜರ್ಮನಿ ಕಾನ್ಸೂಲೇಟ್ ಜನರಲ್ ನವದೆಹಲಿ ಕಚೇರಿಯ ಅಧಿಕಾರಿಗಳು ಸೇರಿದಂತೆ ಇತರೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಾರದರ್ಶಕ ಆಡಳಿತಕ್ಕೆ ಹೆಸರು ಬದಲು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸರ್ಕಾರದ ಆಡಳಿತಾತ್ಮಕ ಹಿತದೃಷ್ಟಿಯಿಂದ ಮತ್ತು ಕಾಲಕಾಲಕ್ಕೆ ಯೋಜನೆಗಳಲ್ಲಿ ಪಾರದರ್ಶಕತೆ ಮತ್ತು ಪರಿಣಾಮ ತರುವ ನಿಟ್ಟಿನಲ್ಲಿ ಕೆಲ ಯೋಜನೆಗಳಲ್ಲಿ ಅಗತ್ಯ ಪರಿಷ್ಕರಣೆ ತರುವುದು ಅವಶ್ಯವಾಗಿರುವುದನ್ನು ಅರಿತು ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ (ವಿಬಿ–ಜಿ–ರಾಮ್) ಜಾರಿಗೆ ತರಲಾಗಿದೆ ಎಂದು ಮಾಜಿ ವಿಧಾನಪರಿಷತ್ ಸದಸ್ಯ ಅಮರನಾಥ ಪಾಟೀಲ ತಿಳಿಸಿದ್ದಾರೆ. ಕಲ್ಯಾಣ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ಇವೆರಡನ್ನೂ ಒಟ್ಟಾಗಿ ತೆಗೆದುಕೊಂಡು ಹೋಗಬೇಕಿದೆ. ಏಕೆಂದರೆ ಇವರೆಡೂ ಒಂದಕ್ಕೊಂದು ಪೂರಕ ಅನಿವಾರ್ಯ ಎಂದು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದ್ದಾರೆ. ಈ ಯೋಜನೆ ಪಾರದರ್ಶಕ ಮತ್ತು ಸಮರ್ಥವಾಗಿ ಜಾರಿಯಾಗುವುದನ್ನು ಸಹಿಸದ ಪ್ರತಿಪಕ್ಷಗಳು ಈ ಯೋಜನೆ ಗ್ರಾಮೀಣ ಜನರ ಉದ್ಯೋಗದ ಹಕ್ಕನ್ನು ಕಸಿದುಕೊಳ್ಳುತ್ತದೆ, ರಾಜ್ಯದ ಆರ್ಥಿಕತೆಯ ಮೇಲೆ ಹೊಡೆತ ಬೀಳುತ್ತದೆ, ಕೃಷಿ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಸುಳ್ಳು ವದಂತಿ ಹರಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸರ್ಕಾರ 30 ಯೋಜನೆಗಳನ್ನು ಬದಲಾಯಿಸಿದೆ. ಮೇಲಾಗಿ ರಸ್ತೆ, ಸ್ಥಳ, ಕ್ರೀಡಾಂಗಣ, ವೈದ್ಯಕೀಯ ಸಂಸ್ಥೆ, ರಾಷ್ಟ್ರೀಯ ಉದ್ಯಾನವನ, ವಿಮಾನ ನಿಲ್ದಾಣ ಸೇರಿದಂತೆ ಅನೇಕ ಹೆಸರುಗಳು ಗಾಂಧಿ ಕುಟುಂಬಗಳದ್ದೇ ಆಗಿವೆ ಎಂದು ಆರೋಪಿಸಿದ್ದಾರೆ. ಶಾಸಕರಾದ ಬಸವರಾಜ ಮತ್ತಿಮಡು, ಬಿ.ಜಿ. ಪಾಟೀಲ, ಡಾ. ಅವಿನಾಶ ಜಾಧವ, ಲಿಂಗರಾಜ ಬಿರಾದಾರ, ಸಂತೋಷ ಹಾದಿಮನಿ ಇತರರಿದ್ದರು.

ನರೇಗಾ ಯೋಜನೆಯು ಕ್ವಾಲಿಟಿಗಿಂತ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡುವುದಕ್ಕಾಗಿ ಜಾರಿ ತರಲಾಗಿದೆ. 20 ವರ್ಷಗಳ ಹಿಂದಿನ ಈ ಯೋಜನೆಯ ಬದಲಾವಣೆಯ ಮುಖ್ಯ ಉದ್ದೇಶ ಜೀವನೋಪಾಯವನ್ನು ಬಲಪಡಿಸುವುದು.

–ಅಮರನಾಥ ಪಾಟೀಲ್

## ಜಾತ್ರೆಯ ಪೂರ್ವಭಾವಿ ಸಭೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ಸಮೀಪದ ಕುದರಿಮೋತಿ ಶ್ರೀವಿಜಯ ಮಹಾಂತೇಶ್ವರ ಜಾತ್ರಾ ಪ್ರಯುಕ್ತ ಪ್ರತಿ ವರ್ಷದಂತೆ ನಡೆಯುವ ಶ್ರೀಕರಿಸಿದ್ದೇಶ್ವರ ಮಠದ ಜಾತ್ರೆಯನ್ನು ಅದ್ದೂರಿಯಾಗಿ ಆಚರಿಸಬೇಕು, ಎಂದು ಕುದರಿಮೋತಿಯ ವಿಜಯಮಹಾಂತ ಸ್ವಾಮೀಜಿ ತಿಳಿಸಿದ್ದಾರೆ. ಗ್ರಾಮದ ಶ್ರೀ ವಿಜಯಮಹಾಂತೇಶ್ವರ ಮಠದಲ್ಲಿ ನಡೆದ ಜಾತ್ರೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಜ.26 ರಿಂದ ಒಂದು ತಿಂಗಳು ಪುರಾಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಫೆಬ್ರವರಿ 15 ಉಚ್ಚಾಯ ನೆರವೇರಿಸಲಾಗುತ್ತದೆ. ಸಂಜೆ 6 ರಥೋತ್ಸವ, ಫೆ.14 ಗ್ರಾಮದ ಪ್ರಮುಖ ಬೀದಿಗಳಲ್ಲಿ ಅಡ್ಡಪಲ್ಲಕ್ಕಿ ಉತ್ಸವ ನಡೆಯುತ್ತದೆ. ಇಷ್ಟಲಿಂಗಾರ್ಚನೆ, ಸಾಮೂಹಿಕ ವಿವಾಹ ಸೇರಿ ನಾನಾ ರೀತಿಯ ನೆರವೇರಲಿದೆ ಎಂದಿದ್ದಾರೆ. ನಂತರ ಇತ್ತೀಚೆಗೆ ಡಾಕ್ಟರೇಟ್ ಅವಾರ್ಡ್ ಸ್ವೀಕರಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಜಿಲ್ಲಾ ಕಾರ್ಯಕಾರಣಿ ಸದಸ್ಯ ಕೆ.ಎಂ.ಶರಣಯ್ಯಸ್ವಾಮಿ ಇವರನ್ನು ಶ್ರೀಗಳ ಆಶೀರ್ವಾದದಿಂದ ಗ್ರಾಮದ ಗುರು ಹಿರಿಯರು ಸನ್ಮಾನಿಸಿ ಗೌರವಿಸಿದ್ದು, ಹಿರಿಯರಾದ ಬಸಪ್ಪ ದೊಡ್ಡಮನಿ, ಮುದಕಪ್ಪ ರಾವಣಿಕಿ, ಸುಭಾಷ್ ಈಡಿಗೇರ್,ನಾಗಪ್ಪ ತಲ್ಲೂರು,ರಾಮಣ್ಣ ಹನ್ಮಟ್ಟಿ,ಮಹಾಂತಪ್ಪ ಶಿಡ್ನಹಳ್ಳಿ, ಬಸವರಾಜ ಗಟ್ಟೆಪ್ಪನವರ್,ಮಂಜುನಾಥ ಗಟ್ಟೆಪ್ಪನವರ್, ಅಮರೇಶ ತಲ್ಲೂರು,ಆಸೀಮ್ ಸಾಬ ಮಕಾಂದರ್,ಪಂಪಾಪತಿ ವಣಗೇರಿ ಶ್ರೀಮಠದ ಭಕ್ತರು ಇದ್ದರು.

## ಡ್ರಗ್ಸ್ ಜಾಲ ವಿರುದ್ಧ ಖಡಕ್ ಹೋರಾಟ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಸ್ತೃತ ಮಾದಕವಸ್ತು ಜಾಲದ ಕುರಿತು ಗಮನ ಸೆಳೆಯಲು ಮೈಸೂರಿನಲ್ಲಿ ಹೋರಾಟ ರೂಪಿಸಲಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿ, ಪ್ರಶ್ನೆಗೆ ಉತ್ತರ ಕೊಟ್ಟರು. ಮೈಸೂರು ಮುಖ್ಯಮಂತ್ರಿಗಳ ತವರು ಜಿಲ್ಲೆ. ಅಲ್ಲಿದ್ದ





ಮಾದಕವಸ್ತು ಕಾರ್ಖಾನೆಯನ್ನು ಮಹಾರಾಷ್ಟ್ರದ ಪೊಲೀಸರು ಬಂದು ಮುಚ್ಚಿಸಬೇಕಾಯಿತು. ಮೈಸೂರು ಒಳಗೊಂಡಂತೆ ರಾಜ್ಯಾದ್ಯಂತ ಡ್ರಗ್ ಮಾಫಿಯ ಹರಡಿದೆ. ಇವನ್ನು ಪರಿಗಣಿಸಿ ಮೈಸೂರಿನಲ್ಲಿ ಹೋರಾಟ ಮಾಡಲು ತೀರ್ಮಾನ ಆಗಿದೆ ಎಂದು ತಿಳಿಸಿದರು. ಬಳ್ಳಾರಿ ಪಾದಯಾತ್ರೆ ಕುರಿತು ವರಿಷ್ಠರು ತೀರ್ಮಾನ ಕೈಗೊಳ್ಳುತ್ತಾರೆ ಎಂದು ಹೇಳಿದ್ದಾರೆ. ಇನ್ನೊಂದು ಪ್ರಶ್ನೆಗೆ ಉತ್ತರಿಸಿದ ಅವರು, ನಿನ್ನೆ ನಮ್ಮ ಹಿರಿಯ ಶಾಸಕ ವಿಶ್ವನಾಥ್ ಅವರ ತಂಡವು ಕೋಗಿಲು ಸತ್ಯಶೋಧನೆ ಕುರಿತು ಪತ್ರಿಕಾಗೋಷ್ಠಿ ಮಾಡಿದೆ ಎಂದರು. ಧರ್ಮಸ್ಥಳದ ವಿಚಾರದಲ್ಲಿ ಮುಖ್ಯಮಂತ್ರಿಗಳೇ ಮುತುವರ್ಜಿ ವಹಿಸಿ ಕೆಲವು ನಗರ ನಕ್ಸಲರ ಮಾತು ಕೇಳಿ ಎಸ್ಐಟಿ ರಚಿಸಿದ್ದರು. ಧರ್ಮಸ್ಥಳದ ಶ್ರೀ ಕ್ಷೇತ್ರಕ್ಕೆ ಅಪಚಾರ ಎಸಗುವ ಕೆಲಸ ಮಾಡಿದ್ದರು ಎಂದು ಆಕ್ಷೇಪಿಸಿದ್ದಾರೆ. ಬಸವರಾಜ ಬೊಮ್ಮಾಯಿ ಖಂಡನೆ: ತುಮಕೂರಿನಲ್ಲಿ ಮಹಾತ್ಮ ಗಾಂಧಿ ಕ್ರಿಡಾಂಗಣ ಹೆಸರು ಬದಲಿಸುವ ದುಸ್ಸಾಹಸಕ್ಕೆ ಕೈ ಹಾಕಿ ರಾಜ್ಯ ಸರ್ಕಾರ ಪರಮೇಶ್ವರ ಹೆಸರು ಇಡುತ್ತಿರುವುದು ಅಕ್ಷಮ್ಯ ಅಪರಾಧ ಕಾಂಗ್ರೆಸ್ ನ ಒಂದು ಮುಖವಾಡ ಕಳಚಿ ಬಿದ್ದಿದೆ. ಕರ್ನಾಟಕದಲ್ಲಿ ರಾಜಿವ್ ಗಾಂಧಿ ಯುನಿವರ್ಸಿಟಿ, ಸಂಜಯ ಗಾಂಧಿ ಆಸ್ಪತ್ರೆಗೆ ಮಹಾತ್ಮಾಗಾಂಧಿ ಹೆಸರಿಡಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

## ಸರ್ಕಾರದ ಖಜಾನೆ ಖಾಲಿಯಾಗಿದೆ; ಸಿದ್ದರಾಮಯ್ಯ ಡಮ್ಮಿ ಸಿಎಂ: ಕೇಂದ್ರ ಸಚಿವ ಸೋಮಣ್ಣ



ಕಲಬುರಗಿ: ಸಂಕ್ರಾತಿಯ ಹಬ್ಬದ ನಿಮಿತ್ಯಾ ಜನರು ಸಂಕ್ರಾತಿಯ ಸಾಮಾನು ಖರಿದಿಯಲ್ಲಿ ತೊಡಗಿದ್ದು ಹಾಗೂ ಕಲಬುರಗಿ ಸುಪರ ಮಾರ್ಕೆಟನಲ್ಲಿ ಜನವು ಜನ ಎಳ್ಳು ಘಾಣದ ಲಡ್ಡು ಇನ್ನಿತರ ಸಿಹಿ ಖರಿದಿಯಲ್ಲಿ ತೊಡಗಿದ್ದರು. ಮಲ್ಲಮ್ಮ ನುಡಿ ಚಿತ್ರ.

## ಬೇಳೆ ಕಾಳು ಅಭಿವೃದ್ಧಿ ಸಂಸ್ಥೆ ಸ್ಥಾಪಿಸಿ:

# ಮುಖ್ಯಮಂತ್ರಿಗೆ ಡಾ. ಪಾಟೀಲ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ಜಿಲ್ಲೆಯ ಒಟ್ಟಾರೆ ಬೇಳೆ ಕಾಳು ಉತ್ಪಾದನೆಯಲ್ಲಿ ಶೇ.50 ರಷ್ಟು ಬೆಳೆಯುವ ಸೇಡಂ ಉಪ ವಿಭಾಗದಲ್ಲಿ ಕಳೆದ ಕೆಲವು ವರ್ಷಗಳಿಂದ ಮಳೆ ಬೀಳುವ ಕ್ರಮದಲ್ಲಿನ ಬದಲಾವಣೆಯಿಂದಾಗಿ ಬೇಳೆಕಾಳು ಬೆಳೆಗಳ ಉತ್ಪಾದಕತೆಯು ನಿರಂತರವಾಗಿ ಕುಸಿಯುತ್ತಿದ್ದು, ಇದನ್ನು ಸುಧಾರಿಸುವ ನಿಟ್ಟಿನಲ್ಲಿ ಬೆಳೆ ಸುಧಾರಣೆ, ಉತ್ಪಾದನೆ, ಕೊಯೊತ್ತರ ನಿರ್ವಹಣೆ ಮತ್ತು ದಾಲ್ ಸಂಸ್ಕರಣಾ ಅಂಶಗಳ ಕುರಿತು ಸಂಶೋಧನೆ ನಡೆಸಲು ಸೇಡಂನಲ್ಲಿ ಬೇಳೆಕಾಳು ಅಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸಬೇಕೆಂದು ಸೇಡಂ ಶಾಸಕರಾಗಿರುವ ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಲಶ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬೇಡಿಕೆ ಸಲ್ಲಿಸಿದರು.

ಸೋಮವಾರ ಸೇಡಂ ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಂಯುಕ್ತಾಶ್ರಯದಲ್ಲಿ ನಡೆದ ಸುಮಾರು 688 ಕೋಟಿ ರೂ. ಕಾಮಗಾರಿಗಳ ಚಾಲನಾ ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದ ಅವರು, ಸೇಡಂ ಉಪವಿಭಾಗದ ವ್ಯಾಪ್ತಿಗೆ ಬರುವ ಸೇಡಂ, ಚಿತ್ತಾಪುರ, ಚಿಂಚೋಳಿ, ಕಾಳಗಿ ಮತ್ತು ಶಹಾಬಾದ್ ಪ್ರದೇಶಗಳು ಅತಿ ಹೆಚ್ಚು ಬೇಳೆಕಾಳು ಬೆಳೆಯುವ ಪ್ರಮುಖ ಪ್ರದೇಶಗಳಾಗಿವೆ. ಈ ಉಪವಿಭಾಗದ ಮಣ್ಣಿನ ವಿಧ ಮತ್ತು ಸಂಯೋಜನೆಯು ಬಹಳ ವಿಶಿಷ್ಟವಾಗಿದ್ದು ಇದರಲ್ಲಿ ಕ್ಯಾಲ್ಸಿಯಂ ಮತ್ತು ಪೊಟ್ಯಾಶ್ ಅಂಶ ಹೆಚ್ಚಾಗಿದೆ ಅಲ್ಲದೆ, ಈ ಮಣ್ಣು ಅತಿ ಹೆಚ್ಚು ನೀರನ್ನು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯವನ್ನು ಹೊಂದಿದೆ.

ಜಿಲ್ಲೆಯ ಶೇ.60 ರಷ್ಟು ಸರಾಸರಿ ನಡುವೆ ಸೇಡಂ ಉಪವಿಭಾಗದ ಒಟ್ಟು ಸಾಗುವಳಿ ಪ್ರದೇಶದ ಶೇ. 85 ರಷ್ಟು ಭಾಗದಲ್ಲಿ ಬೇಳೆಕಾಳುಗಳನ್ನು ಮಾತ್ರ ಬೆಳೆಯಲಾಗುತ್ತಿದೆ. ಇಡೀ ರಾಜ್ಯಕ್ಕೆ ಶೇ.45 ರಷ್ಟು ತೊಗರಿ ಬೆಳೆಯುವ ಕಲಬುರಗಿ ಜಿಲ್ಲೆಯಲ್ಲಿ ಶೇ.50ರಷ್ಟು ಬೇಳೆ ಕಾಲುಗಳನ್ನು ಬೆಳೆಯುವ ಈ ಉಪ ವಿಭಾಗದಲ್ಲಿಯೆ ಸಂಶೋಧನೆ ಮಾಡುವುದು ಅಗತ್ಯವಾಗಿದ್ದು, ಬೆಳಗಾವಿಯ ಸಕ್ಕರೆ ಸಂಸ್ಥೆಯ ಮಾದರಿಯಲ್ಲಿಯೆ ಸೇಡಂ ಕೇಂದ್ರಸ್ಥಾವನ್ನಾಗಿಸಿ ಬೇಳೆಕಾಳು ಅಭಿವೃದ್ಧಿ ಸಂಸ್ಥೆ ಸ್ಥಾಪಿಸಿದಲ್ಲಿ ರೈತಾಪಿ ಜನರಿಗೆ ತುಂಬಾ ಅನುಕೂಲವಾಗಲಿದೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿ ಸಿ.ಎಂ. ಅವರಿಗೆ ಮನವಿ ಸಲ್ಲಿಸಿದರು.

# ಪಡಿತರ ಚೀಟಿ ಅನುಮೋದನೆ:
## ಮಧ್ಯವರ್ತಿಗಳಿಗೆ ಹಣ ನೀಡದಿರಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಬಡತನ ರೇಖೆಗಿಂತ ಕೆಳಗಿರುವ ಅರ್ಹ ಹೊಸ ಆದ್ಯತಾ ಪಡಿತರ ಚೀಟಿ ಅರ್ಜಿದಾರರಿಗೆ ಹೊಸ ಆದ್ಯತಾ (ಬಿಪಿಎಲ್) ಪಡಿತರ ಚೀಟಿ ವಿತರಣೆ ಮಾಡುವ ಕಾರ್ಯವು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ. ಆದರೆ ಜಿಲ್ಲೆಯಲ್ಲಿ ಕೆಲವು ಮಧ್ಯವರ್ತಿಗಳು ಮತ್ತು ಆನ್‌ಲೈನ್ ಇಂಟರ್‌ನೆಟ್ ಕೇಂದ್ರದವರು ಪಡಿತರ ಚೀಟಿ ಮಂಜೂರು ಮಾಡಿಸಿಕೊಡುತ್ತೇವೆ ಎಂದು ಹೇಳಿ ಪಡಿತರ ಚೀಟಿ ಅರ್ಜಿದಾರರಿಂದ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಬಹಳಷ್ಟು ದೂರುಗಳು ಸ್ವೀಕೃತವಾಗುತ್ತಿವೆ ಎಂದು ಕಲಬುರಗಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಆದ್ದರಿಂದ ಜಿಲ್ಲೆಯ ಸಾರ್ವಜನಿಕರು ಪಡಿತರ ಚೀಟಿ ಅನುಮೋದನೆಗಾಗಿ ಮಧ್ಯವರ್ತಿಗಳು ಹಾಗೂ ಆನ್‌ಲೈನ್ ಇಂಟರ್ನೆಟ್ ಕೇಂದ್ರದವರ ಮಾತಿಗೆ ನಂಬದೇ ಅವರನ್ನು ಸಂಪರ್ಕಿಸದೇ ಸಂಬಂಧಪಟ್ಟ ಆಯಾ ತಾಲ್ಲೂಕಿನ ತಹಸೀಲ್ದಾರರ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ಶಿರಸ್ತೇದಾರರು, ಆಹಾರ ನಿರೀಕ್ಷಕರಿಗೆ ಹಾಗೂ ಕಲಬುರಗಿ ಪಡಿತರ ಪ್ರದೇಶ (ನಗರ ಪ್ರದೇಶ) ಮತ್ತು ಶಹಬಾದ-ವಾಡಿ ಪಡಿತರ ಪ್ರದೇಶ (ನಗರ ಪ್ರದೇಶ) ಕ್ಕೆ ಸಂಬಂಧಿಸಿದಂತೆ ಸಹಾಯಕ ನಿರ್ದೇಶಕರು (ಪ) ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆ ಕಲಬುರಗಿ/ಪಡಿತರ ಪ್ರದೇಶದ ಆಹಾರ ನಿರೀಕ್ಷಕರನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳನ್ನು ನೀಡಿ ಪಡಿತರ ಚೀಟಿ ಪಡೆಯಬೇಕು.

ಸರ್ಕಾರ ಆದೇಶದಂತೆ ಪ್ರಸ್ತುತ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಅದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (ಬಿಪಿಎಲ್) ಬಡತನ ರೇಖೆಗಿಂತ ಕೆಳಗಿರುವ ಅರ್ಹ ಹೊಸ ಆದ್ಯತಾ ಪಡಿತರ ಚೀಟಿ ಅರ್ಜಿದಾರರಿಗೆ ಹೊಸ ಆದ್ಯತಾ (ಬಿಪಿಎಲ್) ಪಡಿತರ ಚೀಟಿ ವಿತರಣೆ ಮಾಡುವ ಕಾರ್ಯವು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜೈಲಿನೊಳಗೆ ನಿಷೇಧಿತ ವಸ್ತು ಎಸೆಯಲು ಯತ್ನ ಸಿಬ್ಬಂದಿಗಳ ತ್ವರಿತ ಕಾರ್ಯಾಚರಣೆ.

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ದಿನಾಂಕ 11-01-2026 ರಂದು ಕೆ.ಎಸ್.ಐ.ಎಸ್.ಎಫ್ ಕೇಂದ್ರ ಕಾರಾಗೃಹ ಕಲಬುರಗಿ ಘಟಕದ ಸಿಬ್ಬಂದಿಗಳು ಜೈಲಿನ ಭದ್ರತೆಗಾಗಿ ರಾತ್ರಿ ಪಾಳೆಯಲ್ಲಿ ಪೆಟ್ರೋಲಿಂಗ್ ಕರ್ತವ್ಯ ನಿರ್ವಹಿಸುತ್ತಿರುವ ವೇಳೆ, ಜೈಲಿನೊಳಗೆ ನಿಷೇಧಿತ ವಸ್ತುಗಳನ್ನು ಎಸೆಯಲು ಯತ್ನಿಸಿದ ಘಟನೆ ಕುರಿತಾಗಿ ಪಿ.ಐ ಕೆ.ಎಸ್.ಐ.ಎಸ್.ಎಫ್ ಕೇಂದ್ರ ಕಾರಾಗೃಹ ಕಲಬುರಗಿ ಘಟಕದವರು ವರದಿ ನೀಡಿದ್ದಾರೆ.

ರಾತ್ರಿ ಸುಮಾರು 10.50 ಗಂಟೆಗೆ ಎ ಮತ್ತು ಬಿ ಮಿಡಲ್ ಪಾಯಿಂಟ್ ಪ್ರದೇಶದಲ್ಲಿ ಪೆಟ್ರೋಲಿಂಗ್ ಮಾಡುತ್ತಿದ್ದ ಸಿಬ್ಬಂದಿಗಳು ಅನುಮಾನಾಸ್ಪದ ವ್ಯಕ್ತಿಗಳನ್ನು ಗಮನಿಸಿದ್ದು, ತಕ್ಷಣ ಟಾರ್ಚ್ ಲೈಟ್ ಮೂಲಕ ಪರಿಶೀಲನೆ ನಡೆಸಿದಾಗ ಅವರು ಸ್ಥಳದಿಂದ ಪರಾರಿಯಾಗಿದ್ದಾರೆ. ಪರಿಶೀಲನೆ ವೇಳೆ 01 ಔಕಕಔ ಕಂಪನಿಯ ಮೊಬೈಲ್ ಫೋನ್ ಹಾಗೂ 02 ದಪ್ಪ ದೊಣ್ಣೆಗಳು ಪತ್ತೆಯಾಗಿವೆ. ಮೊಬೈಲ್ ಪರಿಶೀಲನೆಯ ಸಂದರ್ಭದಲ್ಲಿ ಆಧಾರ್ ಕಾರ್ಡ್ ದೊರೆತಿದ್ದು, ಸದರಿ ಟಾರ್ಚ್ ಲೈಟ್ ಹಾಕಿದಾಗ ಕಂಡ ವ್ಯಕ್ತಿಗೆ ಮತ್ತು ಸ್ಥಳದಲ್ಲಿ ದೊರೆತ ಆಧಾರ ಕಾರ್ಡನಲ್ಲಿರುವ ವ್ಯಕ್ತಿಗೆ ಹೋಲಿಕೆಯಾಗಿರುತ್ತದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಮುಂದಿನ ಕಾನೂನು ಕ್ರಮಕ್ಕಾಗಿ ಕೋರಲಾಗಿದೆ ಎಂದು ಶ್ರೀ ಶರಣ ಬಸವ ಪಿ ಐ ಕೆ.ಎಸ್.ಐ.ಎಸ್.ಎಫ್ ಕೇಂದ್ರ ಕಾರಾಗೃಹ ಕಲಬುರಗಿ ಘಟಕದ ವರದಿ ನೀಡಿರುತ್ತಾರೆ.

ಜೈಲಿನ ಭದ್ರತೆ ಮತ್ತು ಸಾರ್ವಜನಿಕ ಸುರಕ್ಷತೆ ಕಾಪಾಡುವಲ್ಲಿ ಸಿಬ್ಬಂದಿಗಳ ಸಮಯಪ್ರಜ್ಞೆ ಹಾಗೂ ಕರ್ತವ್ಯನಿಷ್ಠೆ ಶ್ಲಾಘನೀಯವಾಗಿದೆ. ಈ ಕಾರ್ಯಕ್ಕಾಗಿ. ಶ್ರಮಿಸಿದ ಅಧಿಕಾರಿ/ಸಿಬ್ಬಂದಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸನ್ಮಾನ್ಯ ಶ್ರೀ ಅಲೋಕ್‌ಕುಮಾರ್ ಐ.ಪಿ.ಎಸ್, ಮಾನ್ಯ ಮಹಾನಿರ್ದೇಶಕರು, ಕಾರಾಗೃಹ ಮತ್ತು ಸುಧಾರಣಾ ಸೇವೆ ಕರ್ನಾಟಕ ರಾಜ್ಯ, ಬೆಂಗಳೂರುರವರು ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಸಿಬ್ಬಂದಿಗಳಿಗೆ ರೂ. 5000/- ನಗದು ಬಹುಮಾನ ಹಾಗೂ ಅಧಿಕಾರಿಗಳಿಗೆ ಗುಡ್ ಸರ್ವೀಸ್ ಎಂಟ್ರಿ ನೀಡಿರುವುದಾಗಿ ಘೋಷಿಸಿರುತ್ತಾರೆ.

# ಮೂವರು ಆರೋಪಿಗಳ ಬಂಧನ.

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಪ್ರಕರಣದ ವಿವರ: ದಿನಾಂಕ 12.01.2026 ರಂದು ಮಧ್ಯಾಹ್ನ 03:00 ಗಂಟೆ ಸುಮಾರಿಗೆ, ಕಲಬುರಗಿ ಕೇಂದ್ರ ಕಾರಾಗೃಹದ ಹೊರವಲಯದಲ್ಲಿರುವ "ಎ" ಮತ್ತು "ಬಿ" ಪಾಯಿಂಟ್ ಮಧ್ಯದಲ್ಲಿ ಕರ್ತವ್ಯಕ್ಕೆ ನೇಮಕಗೊಂಡಿದ್ದ ಶ್ರೀ. ಭೀಮಾಶಂಕರ ಜೋಗುರ, ಪಿಸಿ-183 ರವರು ಜೈಲಿನ ಒಳಗಡೆ ನಿಷೇಧಿತ ವಸ್ತುಗಳನ್ನು ಎಸೆಯಲು ಯತ್ನಿಸುತ್ತಿದ್ದ ಕೆಲ ವ್ಯಕ್ತಿಗಳನ್ನು ಗಮನಿಸಿ, ವಾಕಿ ಮೂಲಕ ಪೊಲೀಸರಿಗೆ ಮಾಹಿತಿ ನೀಡಿದರು.

ತಕ್ಷಣವೇ ಪೊಲೀಸ್ ನಿರೀಕ್ಷಕರು, ಕೆಎಸ್‌ಐಎಸ್‌ಎಫ್ ಘಟಕ, ಕಲಬುರಗಿ, ಹಾಗೂ ಶ್ರೀ. ಜಗನ್ನಾಥ ಎ.ಸಿ., ಶ್ರೀ. ಶಂಭುಲಿಂಗ ಎ.ಎಸ್.ಐ ಶ್ರೀ. ಪ್ರಭುಲಿಂಗ ಹೆಚ್ಸಿ-203, ಶ್ರೀ. ಮಹಾಂತೇಶ ಕೋಳಕಾರ ಪಿಸಿ-244, ಶ್ರೀ. ನಿಂಗಣ್ಣ ಘಾಣಗೇರ್ ಪಿಸಿ-514 ಮತ್ತು ಶ್ರೀ. ಸಂಜಯಕುಮಾರ ಪಿಸಿ-483 ರವರುಗಳೊಂದಿಗೆ "ಎ-ಬಿ ಮೀಡಲ್ ಪಾಯಿಂಟ್"ಗೆ ತೆರಳಿ ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ, ಒಬ್ಬ ವ್ಯಕ್ತಿ ನಿಷೇಧಿತ ವಸ್ತುಗಳನ್ನು ಉಂಡೆ ಆಕಾರದ ಬಾಲ್‌ನಲ್ಲಿ ಜೈಲಿನ ಒಳಗಡೆ ಎಸೆಯಲು ಪ್ರಯತ್ನಿಸುತ್ತಿರುವುದು ಕಂಡುಬಂದಿತು. ಈ ವೇಳೆ ಸಿಬ್ಬಂದಿ ಕೂಗಿದಾಗ, ಆತ ತಪ್ಪಿಸಿಕೊಳ್ಳಲು ಯತ್ನಿಸಿದ್ದು, ಶ್ರೀ ಮಹಾಂತೇಶ ಕೋಳಕಾರ ಪಿಸಿ-244 ರವರು ಬೆನ್ನಟ್ಟಿ ಹಿಡಿದುಕೊಂಡರು. ವಿಚಾರಣೆ ವೇಳೆ ಆತನ ಹೆಸರು ಪಿಂಟು ತಂದೆ ಶಿವಯೋಗಿ, ವಯಸ್ಸು ಸುಮಾರು 28 ವರ್ಷ, ವಿಳಾಸ ಬಸವನಗರ, ಕಲಬುರಗಿ, ಉದ್ಯೋಗ ಧಾಬಾದಲ್ಲಿ ಕೆಲಸ ಎಂದು ತಿಳಿಸಿದ್ದಾನೆ. ಇದಲ್ಲದೆ ಸದರಿ ವ್ಯಕ್ತಿಗೆ ಸಹಕಾರ ನೀಡುತ್ತಿದ್ದ ಇನ್ನಿಬ್ಬರನ್ನು ಶ್ರೀ. ಜಗನ್ನಾಥ ಎ.ಸಿ. ರವರ ನೇತೃತ್ವದಲ್ಲಿ ಸಿಬ್ಬಂದಿಯವರು ಬಂಧಿಸಿದ್ದು, ಅವರ ವಿವರಗಳು ಈ ಕೆಳಕಂಡಂತಿವೆ:ವಿಜಯಕುಮಾರ ತಂದೆ ಹವಳಪ್ಪ, ವಯಸ್ಸು ಸುಮಾರು 32 ವರ್ಷ ವಿಳಾಸ: ಬಸವನಗರ, ಕಲಬುರಗಿ.

ಅನಿಲ ಜಾಧವ ತಂದೆ ಸಿದ್ದಪ್ಪ, ವಯಸ್ಸು ಸುಮಾರು 35 ವರ್ಷ, ವಿಳಾಸ: ವಡ್ಡರ್ ಗಲ್ಲಿ, ಕಲಬುರಗಿ ನಗರ. ಬಂಧಿತ ಆರೋಪಿಗಳಿಂದ 02 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಂಧಿತ ಆರೋಪಿಗಳನ್ನು ಹಾಗೂ ವಶಪಡಿಸಿಕೊಂಡ ನಿಷೇಧಿತ ವಸ್ತುಗಳನ್ನು ಮುಂದಿನ ಕಾನೂನು ಕ್ರಮಕ್ಕಾಗಿ ಪರಹತಾಬಾದ್ ಪೊಲೀಸ್ ಠಾಣೆ, ಕಲಬುರಗಿ ನಗರರವರಿಗೆ ಹಸ್ತಾಂತರಿಸಿ, ಪೊಲೀಸ್ ನಿರೀಕ್ಷಕರು, ಪರಹತಾಬಾದ್ ಪೊಲೀಸ್ ಠಾಣೆ ಕಲಬುರಗಿ ನಗರ ರವರಲ್ಲಿ ದೂರು ದಾಖಲಿಸಲು ಕೋರಲಾಗಿರುತ್ತದೆ.

# ಕೇಂದ್ರ ನೆರೆ ಹಾನಿ ತಂಡದಿಂದ ಬೆಳೆ ಹಾನಿ ವೀಕ್ಷಣೆ: ರೈತರು ಅಳಲು ಆಲಿಸಿದ ತಂಡ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಳೆದ ಆಗಸ್ಟ್, ಸೆಪ್ಟೆಂಬರ್ ಮಾಹೆಯಲ್ಲಿ ಭೀಕರ ಮಳೆಯಿಂದ ಜಿಲ್ಲೆಯಲ್ಲಿ ಹಾಳಾದ ಬೆಳೆಗಳ ಹಾನಿಗಳ ಅಧ್ಯಯನಕ್ಕೆ ಆಗಮಿಸಿರುವ ಕೇಂದ್ರ ತಂಡವು ಮಂಗಳವಾರ ಜಿಲ್ಲೆಯ ಕಮಲಾಪುರ ತಾಲೂಕಿನ ಕಿಣ್ಣಿಸಡಕ್, ಡೊಂಗರಗಾಂವ, ಭೀಮನಾಳ, ಕಮಲಾಪೂರ ಗ್ರಾಮಗಳಿಗೆ ಭೇಟಿ ನೀಡಿ ನೆರೆಯಿಂದ ಹಾನಿಯಾದ ಬೆಳೆ, ರಸ್ತೆ, ಸೇತುವೆ ಹಾನಿ ವೀಕ್ಷಣೆ ಮಾಡಿತು.

ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಹೈದ್ರಾಬಾದಿನ ಎಣ್ಣೆ ಬೀಜ ಅಭಿವೃದ್ಧಿ ವಿಭಾಗದ ನಿರ್ದೇಶಕ ಡಾ.ಪೊನ್ನುಸ್ವಾಮಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯದ ಅಧೀನ ಕಾರ್ಯದರ್ಶಿ ಜಯಶ್ರೀ ಕಕ್ಕರ್ ಅವರು ಬೆಳೆ ಹಾನಿ, ಮೂಲಸೌಕರ್ಯ ಹಾನಿ ವೀಕ್ಷಿಸಿ ರೈತರ ಅಳಲು ಆಲಿಸಿದರು.

ಡೊಂಗರಗಾಂವ ಗ್ರಾಮದ ಸರ್ವೆ ನಂ. 20/3ರಲ್ಲಿ ಸುಮಾರು 4.32 ಎಕರೆ ಪ್ರದೇಶದಲ್ಲಿ ತೊಗರಿ ಬೆಳೆದು ಬೆಳೆ ಹಾನಿಗೊಳಗಾಗಿರುವ ರೈತ ಅಭಿಷೇಕ್ ಅವರ ಹೊಲಕ್ಕೆ ಭೇಟಿ ನೀಡಿ ಹಾಳಾದ ತೊಗರಿ ಬೆಳೆ ವೀಕ್ಷಿಸಿದರು. ಪ್ರತಿ ಎಕರೆ 30 ಸಾವಿರ ಖರ್ಚು ಮಾಡಿ ತೊಗರಿ ಬೆಳೆದಿದ್ದು, ವಿಪರೀತ ಮಳೆಯಿಂದ ಎಲ್ಲವು ಹಾಳಾಗಿದೆ. ಬಿತ್ತಿದ 5-6 ಕೆ.ಜಿ. ಬಾರದ ಸ್ಥಿತಿಯಲ್ಲಿದೆ ಎಂದು ತಂಡದ ಮುಂದೆ ರೈತ ಅಭಿಷೇಕ ತನ್ನ ಅಳಲು ತೋಡಿಕೊಂಡ.

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಜಿಲ್ಲೆಯಾದ್ಯಂತ ವಾಡಿಕೆಗ್ಗಿಂತ ಹೆಚ್ಚಿನ ಮಳೆಯಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗಿವೆ. ಇದಲ್ಲದೆ ಶಾಲೆ, ಅರೋಗ್ಯ ಕೇಂದ್ರ, ಅಂಗನವಾಡಿ, ರಸ್ತೆ, ಸೇತುವೆದಂತಹ ಮೂಲಸೌಕರ್ಯ ಸಹ ಹಾನಿಗೊಳಗಾಗಿವೆ. ಈಗಾಗಲೆ ಎನ್.ಡಿ.ಆರ್.ಎಫ್ ಮಾರ್ಗಸೂಚಿಯಂತೆ ಪರಿಹಾರ ಒದಗಿಸಿದೆ. ಮುಖ್ಯಮಂತ್ರಿಗಳು ಈ ಪ್ರದೇಶದಲ್ಲಿ ವೈಮಾನಿಕ ಸಮೀಕ್ಷೆ ನಡೆಸಿ ರಾಜ್ಯ ಸರ್ಕಾರದಿಂದ ಪರಿಹಾರ ಘೋಷಿಸಿದ್ದು, ಅದರಂತೆ ಪರಿಹಾರ ಸಹ ಪಾವತಿಸಿದೆ ಎಂದು ವಿವರಣೆ ನೀಡಿದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಕಮಲಾಪೂರ ತಾಲೂಕಿನಲ್ಲಿ 7,892 ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಬಿತ್ತಿದ್ದು, ಇದರಲ್ಲಿ ಶೇ.80ರಷ್ಟು ಬೆಳೆ ಹಾನಿಯಾಗಿದೆ. ಮಣ್ಣಿನಲ್ಲಿ ಇನ್ನು ತೇವಾಂಶ ಇದ್ದು, ಎರಡನೇ ಬೆಳೆ ಬೆಳೆಯುವಂತಿಲ್ಲ. ತೀರಾ ಕೆಟ್ಟ ಸ್ಥಿತಿಯಲ್ಲಿ ರೈತಾಪಿ ವರ್ಗವಿದೆ ಎಂದು ಅಧ್ಯಯನ ತಂಡಕ್ಕೆ ಮಾಹಿತಿ ನೀಡಿದರು.

ಕಮಲಾಪೂರದಲ್ಲಿ ಬೆಳೆ ಹಾನಿ ವೀಕ್ಷಣೆ: ಕಮಲಾಪೂರ ಗ್ರಾಮದ ಸರ್ವೆ ನಂ. 323 ರಲ್ಲಿ ಮಹಾದೇವಪ್ಪ ಬಸವಣಪ್ಪ ಸವರಿಗೆ ಸೇರಿದ 6.19 ಎಕರೆಯಲ್ಲಿ ಬೆಳೆದ ತೊಗರಿ ಬೆಳೆ ಹಾನಿ ಸಹ ತಂಡ ವೀಕ್ಷಿಸಿತು. ರೈತ ಪ್ರಶಾಂತ ಮಾತನಾಡಿ ಮೂರಕ್ಕಿಂತ ಹೆಚ್ಚಿನ ಎಕರೆ ಮಳೆಗೆ ಬೆಳೆ ಹಾಳಾಗಿದೆ. ಪ್ರತಿ ಎಕರೆಗೆ 25-30 ಸಾವಿರ ರೂ. ಖರ್ಚು ಮಾಡಿವೆ ಮಳೆ ಎಲ್ಲವನ್ನು ಕೊಚ್ಚಿಕೊಂಡು ಹೋಗಿದೆ. ತದನಂತರ ಕುಸಬಿ ಬೆಳೆದಿದ್ದು, ವ್ಯಾಪಕ ಮಳೆಯಿಂದ ಇದರ ಇಳುವರಿ ಬರೋದರ ಕುರಿತು ಅನುಮಾನ ವ್ಯಕ್ತಪಡಿಸಿದರು.

ಇದಕ್ಕೂ ಮುನ್ನ ತಂಡವು ಕಿಣ್ಣಿಸಡಕ್-ಡೋರ ಜಂಬಗಾ ನಡುವಿನ ಸೇತುವೆ, ಭೀಮನಾಳ ಗ್ರಾಮದಲ್ಲಿನ ರಸ್ತೆ ಹಾನಿ ವೀಕ್ಷಣೆ ಮಾಡಿತು. ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ತೋಟಗಾರಿಕೆ ಉಪನಿರ್ದೇಶಕ ಸಂತೋಷ ಇನಾಂದಾರ,

ತಹಶೀಲ್ದಾರ ಮೊಹಮ್ಮದ್ ಮೋಹಸೀನ್, ಕೃಷಿ ಉಪನಿರ್ದೇಶಕಿ ಅನುಸೂಯಾ ಹೂಗಾರ, ಸಹಾಯಕ ಕೃಷಿ ನಿರ್ದೇಶಕ ಡಾ.ಅರುಣಕುಮಾರ ಮೂಲಿಮನಿ ಇದ್ದರು.



# ಟೆಂಗು ಮಾರಾಟ ಮಾಡಲು ಬಹಿರಂಗ ಹರಾಜು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

-ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುವ ಕಾಳಗಿ ತಾಲೂಕಿನ ಅಧಿಸೂಚಿತ ದೇವಸ್ಥಾನವಾಗಿರುವ ಕೋರವಾರ ಗ್ರಾಮದ ಶ್ರೀ ಆಣಿವೀರಭದ್ರೇಶ್ವರ ದೇವಸ್ಥಾನದ 2025-26 ನೇ ಸಾಲಿನ ಜಾತ್ರಾ ಮಹೋತ್ಸವವು 2026ರ ಫೆಬ್ರವರಿ 16 ರಿಂದ 19 ರವರೆಗೆ ಜರುಗಲಿದೆ ಎಂದು ಕಾಳಗಿ ತಹಶೀಲ್ದಾರರು ಹಾಗೂ ಕೋರವಾರ ಶ್ರೀ ಅಣಿವೀರಭದ್ರೇಶ್ವರ ದೇವಸ್ಥಾನದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಾತ್ರಾ ಮಹೋತ್ಸವ ಅಂಗವಾಗಿ ಫೆಬ್ರವರಿ 16 ರಿಂದ 22ರ ಅವಧಿಗಾಗಿ ಟೆಂಗು ಮಾರಾಟ ಮಾಡಲು ಬಹಿರಂಗ ಹರಾಜು ಪ್ರಕ್ರಿಯೆ ಜರುಗಿಸಲು ಇದೇ ಜನವರಿ 22 ರಂದು ಮಧ್ಯಾಹ್ನ 3 ಗಂಟೆಗೆ ಕೋರವಾರ ಶ್ರೀ ಅಣಿವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಬಹಿರಂಗ ಹರಾಜು ಪ್ರಕ್ರಿಯ ಸಭೆ ಜರುಗಲಿದ್ದು, ಆಸಕ್ತಿಯುಳ್ಳ ಹೋಲ್‌ಸೇಲ್ ಅಂಗಡಿ ವ್ಯಾಪಾರಸ್ಥರು ಈ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬೇಕೆಂದು ಅವರು ತಿಳಿಸಿದ್ದಾರೆ.

# ಜನವರಿ 14 ರಂದು ಮಾಜಿ ಸೈನಿಕರು ಅಹವಾಲು ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

:ಬೆಂಗಳೂರು ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ ನಿರ್ದೇಶನಾಲಯದಿಂದ ಸಶಸ್ತ್ರ ಪಡೆಗಳ ಮಾಜಿ ಸೈನಿಕರ ದಿನ ಆಚರಣೆ (ARMED FORCESVETERAN'SDAY)ಅಂಗವಾಗಿ ಇದೇ ಜನವರಿ 14 ರಂದು ಮಾಜಿ ಸೈನಿಕರು ಹಾಗೂ ಅವಲಂಬಿತರಿಗಾಗಿ ದೂರವಾಣಿ ಮೂಲಕ ಕುಂದುಕೊರತೆ ಆಲಿಕೆ (ಅಹವಾಲು ಸ್ವೀಕಾರ) ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ನಿರ್ದೇಶಕರು (ಪ್ರಭಾರ) ಹಾಗೂ ಜಂಟಿ ನಿರ್ದೇಶಕರು ಇದೇ ಜನವರಿ 14 ರಂದು ಎಲ್ಲಾ ಮಾಜಿ ಸೈನಿಕರ ಹಾಗೂ ಅವರ ಅವಲಂಬಿತರಿಂದ ದೂರವಾಣಿ ಕರೆಗಳನ್ನು ಸ್ವೀಕರಿಸಿ, ಅವರ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಆದ್ದರಿಂದ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ತಮ್ಮ ಕುಂದುಕೊರತೆಗಳನ್ನು ಸ್ಥಿರ ದೂರವಾಣಿ ಸಂಖ್ಯೆ 080-25589459 ಹಾಗೂ ಮೊಬೈಲ್ ಸಂಖ್ಯೆ 8105233863, 9871103814, 7892289635 ಗಳಿಗೆ ಕರೆ ಮಾಡಿ ತಿಳಿಸಬಹುದಾಗಿದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-225003 ಗೆ ಸಂಪರ್ಕಿಸಲು ಕೋರಲಾಗಿದೆ

# 2.40 ಲಕ್ಷ ರೂ.ಕಳವು

ಮಲ್ಲಮ್ಮನುಡಿ ವಾರ್ತೆ ಕಲಬುರಗಿ:

ಮನೆ ಬೀಗ ಮುರಿದು 2.40 ಲಕ್ಷ ರೂಪಾಯಿ ಕಳವು ಮಾಡಿರುವ ಘಟನೆ ಜೆ.ಆರ್.ನಗರದಲ್ಲಿ ನಡೆದಿದೆ. ನಾಗರಾಜ ಮಾರುತಿ ತಾಂಡರಕರ್ ಎಂಬುವವರ ಮನೆ ಬೀಗ ಮುರಿದು ಕಳ್ಳರು ಹಣ ಕಳವು ಮಾಡಿದ್ದಾರೆ. ಇವರು ತಮ್ಮ ಚಿಕ್ಕಮ್ಮನ ಮಗಳ ಆರೋಗ್ಯ ವಿಚಾರಿಸಲೆಂದು ಮನೆಗೆ ಬೀಗ ಹಾಕಿಕೊಂಡು ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.ಈ ಸಂಬಂಧ ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.


**BEFORE TO WHOM SO EVER IT MAY CONCERN.**

**PROCLAMATION**

Where as it is hereby proclaimed that, the original sale deed

1. Bearing document No. 3364/1995-96 dated; 27-12-1995 executed by Sri. Sri Mirza Farooq Baig S/o Mirza Fakheer biag R/o Humnabad Dist Bidar, in favour of Sri. Shijauddin S/o Md Jaffar R/o toop galli Humanabad Tq Humnabad Dist Bidar

That, the above said plot was purchased by Sri Shijauddin S/o Md Jaffar Sab when he was travelling with the said document from gulberga to Humanbad the same was kept in the hand bag and the said document along with other documents are lost but could not be traced even after lot of search.

That, if the said document is traced out or found to any of the person then the same may kindly be handed over to the under mentioned person in person or through courier or through R.P.A.D. then the same will be rewarded with monitory benefit.

**Hence this proclamation.**

**Dated;13-01-2026**

**Sri. Nagesh S/o Bassanna Yadgir**

**R/o town Humanabad Tq. Humnabad**

**Dist Bidar.**

# ಕರುಣೇಶ್ವರ ಶ್ರೀಗಳಿಗೆ ಲಕ್ಷ ಪುಷ್ಪಾರ್ಚನೆ ಪಾದಪೂಜೆ.



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ವಡಗೇರಾ ತಾಲ್ಲೂಕಿನ ಸು-ಕ್ಷೇತ್ರ ಕೃಷ್ಣವೇಣಿ ಭೀಮಾ ಸಂಗಮದ ಶ್ರೀ ಸಂಗಮೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಹಮ್ಮಿಕೊಂಡಿರುವ ಕರ್ನಾಟಕ ರತ್ನ ತ್ರಿವಿಧ ದಾಸೋಹಿ ಡಾ.ಶಿವಕುಮಾರ ಮಹಾ ಶಿವಯೋಗಿಗಳವರ 8ನೇ ದಿನದ ಪುರಾಣ ಕಾರ್ಯಕ್ರಮದಲ್ಲಿ ಸಂಗಮೇಶ್ವರ ಮಠದ ಪೀಠಾಧಿಪತಿ ಪರಮ ಪೂಜ್ಯ ಶ್ರೀ ಕರುಣೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳಿಗೆ ನೆರೆಯ ತೆಲಂಗಾಣದ ಗುರ್ಜಲಾ ಗ್ರಾಮದ ಭಕ್ತರಾದ ಶ್ರೀಮತಿ ಶ್ರೀದೇವಿ ಶಿವರಾಜ್ ಪಾಟೀಲ್ ದಂಪತಿಗಳಿಂದ ಲಕ್ಷ ಪುಷ್ಪಾರ್ಚನೆ ಹಾಗೂ ಪಾದಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ವೇದಮೂರ್ತಿ ಶಿವರುದ್ರಯ್ಯ ಸ್ವಾಮಿ, ಶಿವಯ್ಯ ಸ್ವಾಮಿ ಸಾತಕೇಡ, ಬಸಯ್ಯಸ್ವಾಮಿ ಶಿವಪುರ, ಮಲ್ಲಯ್ಯ ಸ್ವಾಮಿ ಅರಿಶಿಣಗಿ, ಗುರುನಾಥ್ ರೆಡ್ಡಿ ಗೌಡ ಕದ್ರಾಪುರ, ಮರೇಪ್ಪ ತೋಟದ, ವೆಂಕಟರೆಡ್ಡಿ ಗೌಡ ಶಿವನೂರ, ರೆಡ್ಡಿ ಗೌಡ ಸೂಗುರ, ಸೈದಣ್ಣ ಶಿವಪುರ, ಗುರುರಾಜ, ಮಲ್ಲು ಶಿವಪುರ, ಶ್ರೀನಿವಾಸ ಕಲಾಲ, ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಪುರಾಣ ಪ್ರವಚನವನ್ನು ಶರಭಯ್ಯ ಶಾಸ್ತ್ರಿಗಳು ನೆರವೇರಿಸಿದರು. ಶಿವರುದ್ರಯ್ಯ ಶಾಸ್ತ್ರಿಗಳು ನಿರೂಪಿಸಿದರು, ಶಿಕ್ಷಕ ಮೌನೇಶ್ ಶಿವಪುರ ವಂದಿಸಿದರು.

# ಪೋಕ್ಸೋ ಕಾಯ್ದೆಯಡಿ ಸಂತ್ರಸ್ಥ ಮಕ್ಕಳ ಬೆಂಬಲ ವ್ಯಕ್ತಿಗಳಿಗೆ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ.

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಪೋಕ್ಸೋ ಕಾಯ್ದೆಯಡಿ ಸಂತ್ರಸ್ಥ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಿಗೆ ಸೇವೆ ಸಲ್ಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ಸಾವಿತ್ರಿ ಗುಗ್ಗರಿ ಅವರು ತಿಳಿಸಿದ್ದಾರೆ. ಅಭ್ಯರ್ಥಿಗಳು ಸಮಾಜ ಶ್ರಾಸ್ತ, ಮನೋವಿಜ್ಞಾನ, ಹಾಗೂ ಮಕ್ಕಳ ಅಭಿವೃದ್ಧಿ ಮಾಡುವಲ್ಲಿ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು. (ಪ್ರತಿ ಪ್ರಕರಣಕ್ಕೆ ಗೌರವಧನ ಸರಕಾರದ ನಿಯಮದಂತೆ ಪಾವತಿಸಲಾಗುವುದು) ಮಕ್ಕಳ ಆರೈಕೆ ಕೇಂದ್ರದಲ್ಲಿ ಮಕ್ಕಳದೊಂದಿಗೆ ಕೆಲಸ ಮಾಡುವ ಯಾವುದೇ ಸಂಸ್ಥೆಗಳಿಂದ ಕೂಡಾ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುತ್ತದೆ. ಅರ್ಜಿಸಲ್ಲಿಸಲು ಅರ್ಜಿದಾರರು ತಮ್ಮ ಅವಶ್ಯಕ ದಾಖಲಾತಿಗಳೊಂದಿಗೆ 2026ರ ಜನವರಿ 25ರ ಒಳಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಯಾದಗಿರಿ, ಕೋಣೆ ಸಂಖ್ಯೆ ಸಿ–17 ಚಿತ್ತಾಪೂರ ರಸ್ತೆ, ಜಿಲ್ಲಾಡಳಿತ ಭವನ ಯಾದಗಿರಿ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.08473 25334ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಣರಾಜ್ಯೋತ್ಸವ :ಪೂರ್ವ ಸಿದ್ಧತಾ ಸಭೆಗೆ ಸೂಚನೆ.

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

2026ರ ಜನವರಿ 26 ರಂದು ಗಣರಾಜ್ಯೋತ್ಸವ ದಿನಾಚರಣೆಯನ್ನು ಆಚರಿಸುವ ಹಿನ್ನೆಲೆ ಸಭೆಯನ್ನು 2026ರ ಜನವರಿ 16 ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವ ಸಿದ್ಧತಾ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ. ಗಣರಾಜ್ಯೋತ್ಸವ ದಿನಾಚರಣೆಯನ್ನು ಜಿಲ್ಲಾಡಳಿತ ವತಿಯಿಂದ ಆಚರಣೆ ಮಾಡಲಾಗುತ್ತಿದ್ದು, ಈ ದಿನಾಚರಣೆಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಪ್ರಮುಖ ಸಂಘ ಸಂಸ್ಥೆಯ ಮುಖಂಡರಿಗೆ, ಪ್ರತಿನಿಧಿಗಳನ್ನು ಮಾತ್ರ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.18ಕ್ಕೆ ಬೆಂಗಳೂರಿನಲ್ಲಿ ನಮ್ಮ ಕರ್ನಾಟಕ ಸೇನೆಯ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಬೆಂಗಳೂರಿನಲ್ಲಿ ಜ.18ಕ್ಕೆ ನಡೆಯಲಿರುವ ನಮ್ಮ ಕರ್ನಾಟಕ ಸೇನೆ ಸಂಘಟನೆಯ ಮೂರನೆಯ ವಾರ್ಷಿಕೋತ್ಸವ ಸಮಾರಂಭಕ್ಕೆ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರನ್ನು ಆಹ್ವಾನಿಸಲಾಯಿತು. ಪಟ್ಟಣದ ಹಿರೇಮಠ ಸಂಸ್ಥಾನಕ್ಕೆ ಮಂಗಳವಾರ ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಜ್ಯಾಂತಿ ನೇತೃತ್ವದಲ್ಲಿ ಪ್ರಮುಖರು, ಪದಾಧಿಕಾರಿಗಳು ಭೇಟಿ ನೀಡಿ ಉಭಯ ಪೂಜ್ಯರನ್ನು ಸನ್ಮಾನಿಸಿ, ಆಮಂತ್ರಣ ಪತ್ರಿಕೆ ನೀಡಿ ಸಮಾರಂಭಕ್ಕೆ ಆಹ್ವಾನಿಸಿದದರು. ನಮ್ಮ ಕರ್ನಾಟಕ ಸೇನೆ ರಾಜ್ಯಾಧ್ಯಕ್ಷ ಬಸವರಾಜ ಪಡುಕೋಟೆ ಅಧ್ಯಕ್ಷತೆಯಲ್ಲಿ ಸಂಘಟನೆಯ ವಾರ್ಷಿಕೋತ್ಸವ ಸಮಾರಂಭ ಆಯೋಜಿಸಲಾಗಿದೆ. ರಾಜ್ಯದ ನಾನಾ ಮಠಾಧೀಶರು, ಉಪಮುಖ್ಯಮಂತ್ರಿಗಳು, ಮಂತ್ರಿಗಳು, ಸಿನಿಮಾ ನಟ, ನಟಿಯರು, ಸಂಗೀತ ಕಲಾವಿದರು ಈ ಸಮಾರಂಭಕ್ಕೆ ಸಾಕ್ಷಿಯಾಗಲಿದ್ದಾರೆ. ತಾವುಗಳು ಕೂಡ ಆಗಮಿಸಿ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಎಲ್ಲ ಕನ್ನಡಾಭಿಮಾನಿಗಳನ್ನು ಆಶೀರ್ವದಿಸಿ, ಕಾಯಕಯೋಗಿ ಬಸವಣ್ಣ ಪ್ರಶಸ್ತಿ ಸ್ವೀಕರಿಸಬೇಕು ಎಂದು ಸಂಘಟನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಮನವಿ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ, ನಮ್ಮ ಕರ್ನಾಟಕ ಸೇನೆ ಯುವ ಘಟಕದ ಜಿಲ್ಲಾಧ್ಯಕ್ಷ ಸುದೀಪ ತೂಗಾವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಉಪಾಧ್ಯಕ್ಷ ಜಗದೀಶ ಪಾಟೀಲ್, ಪ್ರಮುಖರಾದ ಕಾಶಿನಾಥ ಚಳಕಾಪೂರೆ, ಉಮಾಕಾಂತ ಚಾಕೂರೆ, ಸಿದ್ದಪ್ಪ ಮುದಕಾ, ಬಾಲಾಜಿ ಮೇಗೆ ಸೇರಿದಂತೆ ಹಲವರು ಇದ್ದರು.



ಭಾಲ್ಕಿಯ ಹಿರೇಮಠ ಸಂಸ್ಥಾನಕ್ಕೆ ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಜ್ಯಾಂತಿ ನೇತೃತ್ವದಲ್ಲಿ ಭೇಟಿ ನೀಡಿ ಉಭಯ ಪೂಜ್ಯರನ್ನು ಸನ್ಮಾನಿಸಿ, ನಮ್ಮ ಕರ್ನಾಟಕ ಸೇನೆಯ ಮೂರನೇ ವಾರ್ಷಿಕೋತ್ಸವ ಸಮಾರಂಭಕ್ಕೆ ಆಮಂತ್ರಣ ಪತ್ರಿಕೆ ನೀಡಿ ಆಹ್ವಾನಿಸಿದರು.

# ಎರಡು ದಿನ ಮಹಾ ಪ್ರಸಾದ



• **ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ:**

ಮೈಲಾಪುರದ ಶ್ರೀ ಮೈಲಾರಲಿಂಗೇಶ್ವರ ಜಾತ್ರೆ ಅಂಗವಾಗಿ ಎರಡು ದಿನಗಳ ಕಾಲ ನಿರಂತರ ಮಹಾಪ್ರಸಾದ ವ್ಯವಸ್ಥೆಯನ್ನು ವರ್ಕ್ ನಳಿ ಮುಖ್ಯ ರಸ್ತೆಯ ಹಳಿಗೇರಾದ ಕ್ರಾಸ್ ನಲ್ಲಿ ಮಾಡಲಾಗಿದೆ ಎಂದು ಮಲ್ಲಿಕಾರ್ಜುನ್ ಸ್ವಾಮಿ ಹಳಿಗೇರಾ ಹೇಳಿದರು.

ಪ್ರತಿ ವರ್ಷವೂ ಜಾತ್ರೆಗೆ ಸುಮಾರು ಕಿಲೋಮೀಟರ್ ದಿಂದ ನಡೆದು–ಕೊಂಡು ಪಾದಯಾತ್ರೆ ಮಾಡುತ್ತಿರುವ ಭಕ್ತಾದಿಗಳಿಗೆ ಊಟದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಮತ್ತು ಸುತ್ತ ಮುತ್ತಲಿನ ಗ್ರಾಮಸ್ಥರು ವಿವಿಧ ರಾಜ್ಯದಿಂದ ಜಿಲ್ಲೆಯಿಂದ ಬರುವ ಭಕ್ತಾದಿಗಳಿಗೆ ಎರಡು ದಿನಗಳವರೆಗೂ ಸಿಹಿ, ಅನ್ನ ಮತ್ತು ಸಾಂಬಾರನ್ನು ನೀಡಿ ಹಸಿದು ಬಂದವರಿಗೆ ಅನ್ನವನ್ನು ನೀಡಿ ತೃಪ್ತಿಪಡಿಸುವ ಕಾರ್ಯ ಶ್ರೀ ಮೈಲಾಪುರದ ಮೈಲಾರಲಿಂಗೇಶ್ವರನ ದೇವರ ಹಳಿಗೇರ ಪೀಠಾಧಿಪತಿ ಶಂಕ್ರಪ್ಪ ಪೂಜಾರಿ ರವರ ಮಾರ್ಗದಲ್ಲಿ ಪ್ರತಿ ವರ್ಷ ನೀಡಲಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವೀರಭದ್ರಪ್ಪ, ಚೋಳಯ್ಯ ಸ್ವಾಮಿ ಯಾದಗಿರಿ, ರುದ್ರಪ್ಪ ನಾಯಕ ಖಂಡಪನೊರ, ಡಾ. ಬಸನಗೌಡ ಹತ್ತಿಕುಣಿ, ಡಾ.ಸಂತೊಷ ಹೊನಿಗೇರಾ ಮುಂತದವರು ಇದ್ದರು.

# ಖಂಡ್ರೆ ನಿವಾಸಕ್ಕೆ ಮಠಾಧೀಶರು, ಗಣ್ಯರು ಭೇಟಿ

## ಶತಾಯಷಿ ಡಾ.ಭೀಮಣ್ಣ ಖಂಡ್ರೆ ಆರೋಗ್ಯದಲ್ಲಿ ಚೇತರಿಕೆ



ಭಾಲ್ಕಿಯ ಖಂಡ್ರೆ ನಿವಾಸಕ್ಕೆ ನಾನಾ ಮಠಾಧೀಶರು, ಗಣ್ಯರು ಭೇಟಿ ನೀಡಿ ಈಶ್ವರ ಖಂಡ್ರೆ ಅವರೊಂದಿಗೆ ಚರ್ಚಿಸಿ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯದ ಕುರಿತು ಮಾಹಿತಿ ಪಡೆದು ಕೊಂಡರು.

> **ನಮ್ಮ ತಂದೆ ಶತಾಯಷಿ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯದಲ್ಲಿ ಸ್ವಲ್ಪ ಮಟ್ಟಿನ ಚೇತರಿಕೆ ಕಂಡು ಬಂದಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ವದಂತಿಗಳಿಗೆ ಯಾರು ಕಿವಿಗೂಡಬಾರದು. ಕಾರ್ಯಕರ್ತರು, ಅಭಿಮನಿಗಳು, ಹಿತೈಷಿಗಳು ನಮ್ಮ ತಂದೆಯ ಆರೋಗ್ಯ ಸುಧಾರಣೆಗೆ ಪ್ರಾರ್ಥಿಸಬೇಕು.**
>
> **– ಈಶ್ವರ ಖಂಡ್ರೆ**
> **ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

• **ಮಲ್ಲಮ್ಮ ನುಡಿ ವಾರ್ತೆ,ಭಾಲ್ಕಿ:**

ಮಾಜಿ ಸಚಿವರು, ಶತಾಯಷಿ ಡಾ.ಭೀಮಣ್ಣ ಖಂಡ್ರೆ(102) ಅವರ ಆರೋಗ್ಯದಲ್ಲಿ ಮಂಗಳವಾರ ಸ್ವಲ್ಪ ಮಟ್ಟಿನ ಚೇತರಿಕೆ ಕಂಡು ಬಂದಿದೆ. ಪಟ್ಟಣದ ಮನೆಯಲ್ಲಿಯೇ ಚಿಕಿತ್ಸೆ ಮುಂದುವರಿಸಲಾಗುತ್ತಿದ್ದು, ಕಳೆದ ಎರಡ್ಮೂರು ದಿನಗಳಿಗೆ ಹೋಲಿಸಿದರೆ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದಿದೆ. ಉಸಿರಾಟದ ಮಟ್ಟ ಏರಿಕೆಯಾಗಿದೆ, ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ನಾನಾ ಶ್ರೀಗಳು ಭೇಟಿ :**

ನಾನಾ ಮಠಾಧೀಶರು, ಗಣ್ಯರು ಖಂಡ್ರೆ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಗುರುಬಸವ ಪಟ್ಟದ್ದೇವರು, ಗದಗ ಜಿಲ್ಲೆಯ ಬಾಳೆ ಹೊಸೂರ ಮಠದ ದಿಂಗಾಲೇಶ್ವರ ಸ್ವಾಮೀಜಿ, ಹಾರಕೂಡದ ಚೆನ್ನವೀರ ಶಿವಾಚಾರ್ಯರು, ಮುಗುಳಖೋಡ ಶ್ರೀಗಳು, ಹುಡುಗಿ ಶ್ರೀಗಳು, ಹಣೆನಾಗಾಂವ ಶ್ರೀಗಳು ಸೇರಿ, ಹಿರಿಯ ಮುಖಂಡ ಗುರುನಾಥ ಕೊಳ್ಳುರು, ಡಿ.ಕೆ.ಸಿದ್ರಾಮ ಸೇರಿದಂತೆ ಮುಂತಾದವರು ಭೇಟಿ ನೀಡಿ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯ ವಿಚಾರಿಸಿ ಶೀಘ್ರಗುಣಮುಖ ಹೊಂದಲಿ ಎಂದು ಪ್ರಾರ್ಥಿಸಿದರು.

# ನಕಲಿ ದಾಖಲೆ ಸೃಷಿ: ಅಧಿಕಾರಿಯ ವಿರುದ್ಧ ಕ್ರಮ ಜಿಲ್ಲಾ ಅಧಿಕಾರಿಗೆ ಮನವಿ



• **ಮಲ್ಲಮ್ಮ ನುಡಿ ವಾರ್ತೆ, ಕಚಕನೂರ:**

ಗ್ರಾಮದ : ಯಾದಗಿರಿ ಜಿಲ್ಲೆಯ, ಹುಣಸಗಿ ತಾಲೂಕಿನ ಕಚಕನೂರ ಗ್ರಾಮದ ಸ.ನಂ. 122/3 ಎ. 6–10 ಎ–ಗು ಜಮೀನು ಪರ್ವತಗೌಡ ತಂ/ ಚನ್ನಮಲ್ಲಪ್ಪ ಹೆಸರಿಗೆ ಇದ್ದು, ಮೃತಪಟ್ಟಿದ್ದು, ಮೃತರಿಗೆ 2 ಜನ ಹೆಂಡತಿಯರಿದ್ದು, ಕಾನೂನು ಬದ್ಧವಾಗಿ ಮೊದಲನೇ ಹೆಂಡತಿ ಮಕ್ಕಳ ಹೆಸರಿಗೆ ವಾರಸಾ ವರ್ಗಾವಣೆ ಮಾಡದೇ, ನಕಲಿ ದಾಖಲೆ ಸೃಷ್ಟಿಸಿ, ಮಕ್ಕಳಿಲ್ಲದ 2ನೇ ಹೆಂಡತಿಗೆ ವರ್ಗಾವಣೆ ಆಗಿದ್ದು, ರದ್ದುಪಡಿಸಿ, ತಹಸೀಲ್ದಾರರು, ಗ್ರಾಮ ಆಡಳಿತ ಅಧಿಕಾರಿ, ಕಂದಾಯ ನಿರೀಕ್ಷಕರು ಹಾಗೂ 2ನೇ ಹೆಂಡತಿ ದೇವಮ್ಮ ಇವರೆಲ್ಲರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಯಥಾ ಪ್ರಕಾರ ಮೂಲ ಪಟ್ಟೇದಾರನಾದ ಪರ್ವತಗೌಡ ತಂ/ ಚನ್ನಮಲ್ಲಪ್ಪ ಹೆಸರಿಗೆ ಪಹಣಿ ಮಾಡುವಂತೆ ಮನವಿ. ಇದೆ ಸನ್ದರ್ಭದಲ್ಲಿ ತೇಜರಾಜ್ ರಾಠೋಡ್ ಜಿಲ್ಲಾಧ್ಯಕ್ಷರು ಯಾದಗಿರಿ, ನಾಗರಾಜ ಪೂಜಾರಿ ಜಿಲ್ಲಾ ಸಂಚಾಲಕರು ಪಬುಗೌಡ.ಬಿ.ಪೋತರೆಡಿ ತಾಲೂಕಾ ಅಧ್ಯಕ್ಷರು ಹುಣಸಗಿ, ರೇಣುಕಾ ತಳವಾರ ಸಹಾಸೂರ ಮ.ಘ, ಅಧ್ಯಕ್ಷರು ಶಹಾಪೂರ, ಲಾಲಸಿಂಗ ರಾಠೋಡ ಉಪಾಧ್ಯಕ್ಷರು ಹುಣಸಗಿ ಸೊಪ್ಪಣ್ಣ ಹಳಿ ಸಾಗರ ಶಹಪುರ್ ತಾಲೂಕ ಅಧ್ಯಕ್ಷರು ಬಾಲು ನಾಯಕ , ಶರಣು ಖಾನಾಪುರ ರೈ.ಸಂ. ಅಧ್ಯಕ್ಷರುಸಿ ಎನ್ ಅರಕೇರಿ, ಭೀಮನಾಯಕ ತಾ. ಗೌರವಾಧ್ಯಕ್ಷರು ಬಸ್ಸಮ್ಮ ಮಡಿವಾಳ ಕಾರ್ಯದರ್ಶಿಗಳು..ಜಗದೇವಿ ಶಾಹಪೂರ್, ಜ್ಯೋತಿ ಶಹಪುರ್

# 6 ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಕಾರವಾರ:**

ಕಾರವಾರ ತಾಲೂಕಿನ ಅಮದಳ್ಳಿಯ ಡಾ. ಬಿ. ಆರ್. ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆಯಲ್ಲಿ 2026–27 ನೇ ಸಾಲಿಗೆ ಆರನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಈಗಾಗಲೇ 5 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿಯನ್ನು ಜ.25 ರೊಳಗಾಗಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯು ಮಾರ್ಚ 1 ರಂದು ನಿಗದಿಪಡಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಲು ಡಾ. ಬಿ. ಆರ್. ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ ಅಮದಳ್ಳಿ ಕಾರವಾರ ಇಲ್ಲಿ ಸಂಪರ್ಕಿಸಬಹುದು.

# ಜ.14 ರಂದು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಜಯಂತ್ಯೋತ್ಸವ ಆಚರಣೆ ಕಾರ್ಯಕ್ರಮ.






• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

2026ರ ಜನವರಿ 14 ರಂದು ಶ್ರೀ ಶಿವಯೋಗಿ ಸಿದ್ದರಾಮೇಶ್ವರರವರ ಜಯಂತ್ಯೋತ್ಸವ ಆಚರಣೆ ಆಯೋಜಿಸಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ. ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ, ಯಾದಗಿರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಚರಣೆ ಹಿನ್ನೆಲೆ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯೋತ್ಸವವನ್ನು ಜಿಲ್ಲಾ, ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳಲ್ಲಿ, ತಾಲ್ಲೂಕು, ಗ್ರಾಮ ಪಂಚಾಯತಗಳಲ್ಲಿ ಎಲ್ಲಾ ಅನುದಾನಿತ, ಅರೆ ಅನುದಾನಿತ ಹಾಗೂ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ಮತ್ತು ತಮ್ಮ ಅಧೀನ ಕಾರ್ಯಾಲಯದಲ್ಲಿ ಈ ಜಯಂತಿಯನ್ನು ಅರ್ಥಪೂರ್ಣವಾಗಿ ಗೌರವಯುತವಾಗಿ 2026ರ ಜನವರಿ 14 ರಂದು ಆಚರಿಸುವಂತೆ ಮತ್ತು 2026ರ ಜನವರಿ 14 ರಂದು ನಡೆಯಬೇಕಾದ ಜಿಲ್ಲಾ ಮಟ್ಟದ ಜಯಂತಿ ಕಾರ್ಯಕ್ರಮವನ್ನು, ಅದ್ದೂರಿಯಾಗಿ ಆಚರಿಸುವ ನಿಟ್ಟಿನಲ್ಲಿ 2026ರ ಫೆಬ್ರವರಿ 5 ರಂದು ಸಮಾಜದ ಸರ್ವರ ಸಹಮತದೊಂದಿಗೆ ಮೆರವಣಿಗೆ ಸಹಿತವಾಗಿ ಮಧ್ಯಾಹ್ನ 12.30 ಗಂಟೆಗೆ ಸರ್ಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯ ಆಡಿಟೋರಿಯಂ ಸಭಾಂಗಣ ಚಿತ್ತಾಪೂರ ರಸ್ತೆ ಯಾದಗಿರಿಯಲ್ಲಿ ಜರುಗುವ ವೇದಿಕೆ ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ತಪ್ಪದೇ ಆಗಮಿಸಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮತ್ತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.17 ರಂದು ಯಾದಗಿರಿಯ ಇಬ್ರಾಹಿಂಪುರಕ್ಕೆ ನಟ ಡಾಲಿ ಧನಂಜಯ ಆಗಮನ.

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಜಿಲ್ಲೆಯ ಶಹಾಪುರ ತಾಲೂಕಿನ ಇಬ್ರಾಹಿಂಪುರ ಗ್ರಾಮದಲ್ಲಿ ಶ್ರೀ ಸಾಯಿಬಾಬಾ ಮಂದಿರದ 4ನೇ ವರ್ಷದ ಜಾತ್ರಾ ಮಹೋತ್ಸವ ಜ.17 ರಿಂದ 19ರವರೆಗೆ ಮೂರು ದಿನಗಳ ಕಾಲ ವಿಜೃಂಭಣೆಯಿಂದ ನಡೆಯಲಿದೆ ಎಂದು ಶ್ರೀ ಸಾಯಿ ಸಿದ್ಧಾಶ್ರಮದ ಅಧ್ಯಕ್ಷ ಮಹಾರಾಜ್ ದಿಗ್ಗಿ ತಿಳಿಸಿದ್ದಾರೆ. ಸೋಮವಾರ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ.17ರಂದು ಮಧ್ಯಾಹ್ನ 12ಕ್ಕೆ ಉಚಿತ ಸಾಮೂಹಿಕ ವಿವಾಹ ಕಲ್ಯಾಣ ಮಹೋತ್ಸವ ಆಯೋಜಿಸಲಾಗಿದ್ದು, ವಿವಿಧ ಮಠಾಧೀಶರ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು. ಗುರುಮಠಕಲ್ ಖಾಸಾಮಠ, ಕಡಕೊಳ ಮಡಿವಾಳೇರ ಮಠ, ಸರೂರು, ಅಗತೀರ್ಥದ ಗುರುರೇವಣಸಿದ್ದೇಶ್ವರ ಗುರುಪೀಠ, ಚಿಗರಹಳ್ಳಿ ಮರಳುಶಂಕರ ದೇವರಪೀಠ, ಹೋತಪೇಠ, ದೊರನಹಳ್ಳಿ, ಸೂಗುರು, ಮಹಲ್ ರೋಜಾ, ಏಕದಂಡಗಿಮಠ ಶಹಾಪುರ ಸೇರಿದಂತೆ ಹಲವು ಮಠಗಳ ಶ್ರೀಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮವನ್ನು ಶಾಸಕ ಚನ್ನಾರೆಡ್ಡಿ ಪಾಟೀಲ್ ಉದ್ಘಾಟಿಸಲಿದ್ದು, ಮಾಜಿ ಶಾಸಕರುಗಳಾದ ರಾಜುಗೌಡ, ಗುರು ಪಾಟೀಲ್ ಹಾಗೂ ಮುಖಂಡ ಅಮೀನ್ ರೆಡ್ಡಿ ಭಾಗವಹಿಸಲಿದ್ದಾರೆ. ಈ ವೇಳೆ ಶರಣಪ್ಪ ಸಲಾದಪುರ ಹಾಗೂ ವಿಶ್ವಾರಾಧ್ಯ ಸತ್ಯಂಪೇಟ್ ಅವರನ್ನು ಸನ್ಮಾನಿಸಲಾಗುವುದು. ಜಿಲ್ಲಾ ಕಸಾಪ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ ಸೇರಿದಂತೆ ಗಣ್ಯರು ಸಾಯಿಬಾಬಾ ಮೂರ್ತಿಗೆ ಪುಷ್ಪಾರ್ಚನೆ ನೆರವೇರಿಸಲಿದ್ದಾರೆ.

ಜ.18ರಂದು ಸಂಜೆ 6ಕ್ಕೆ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ತಿಂಥಣಿ ಕನಕಗುರುಪೀಠ, ಅರಕೇರಾ ಸೇರಿದಂತೆ ವಿವಿಧ ಮಠಾಧೀಶರ ಸಾನಿಧ್ಯದಲ್ಲಿ ಸಚಿವ ಶರಣಬಸಪ್ಪ ದರ್ಶನಾಪುರ, ಸಂಸದ ಜಿ.ಕುಮಾರ ನಾಯಕ್, ಮಾಜಿ ಸಚಿವ ಶಿವನಗೌಡ ನಾಯಕ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮವನ್ನು ಕೆಕೆಆರ್‌ಟಿಸಿ ಅಧ್ಯಕ್ಷ ಡಾ.ಅಜಯಸಿಂಗ್ ಉದ್ಘಾಟಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ನಟ ಡಾಲಿ ಧನಂಜಯ, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌದರಿ, ನಿಕೇತ್ ರಾಜ್ ಮೌರ್ಯ ಸೇರಿದಂತೆ ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಉಪಸ್ಥಿತರಿರುವರು. ಜ.19ರಂದು ಮಧ್ಯಾಹ್ನ 2ಕ್ಕೆ ಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ. ಕಳೆದ ನಾಲ್ಕು ವರ್ಷಗಳಿಂದ ನಿರಂತರವಾಗಿ ಈ ಜಾತ್ರೋತ್ಸವ ನಡೆಯುತ್ತಿದ್ದು, ಮಂದಿರದಲ್ಲಿ ಪ್ರತಿದಿನವೂ ಅನ್ನದಾಸೋಹ ನಡೆಯುತ್ತಿದೆ. ಭವಿಷ್ಯದಲ್ಲಿ ಕಲ್ಯಾಣ ಮಂಟಪ, ಅನ್ನದಾಸೋಹ ಭವನ ಹಾಗೂ ವನಸಿರಿ ಬೆಳೆಸುವಿಕೆ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲಾಗಿದೆ ಎಂದು ಮಹಾರಾಜ್ ದಿಗ್ಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಹೊನ್ನಪ್ಪ ಯಡ್ಡಳ್ಳಿ, ಬೀರೇಶ ಚಿರತೆನೂರ, ಮಲ್ಲಣ್ಣ ಐಕೂರ್, ಶ್ರೀಧರ ಸಾಹುಕಾರ, ಖಾಜಾ ಮೈನೋದ್ದಿನ್, ಮಾಳಪ್ಪ ಯಾದವ್, ಶಿವು ಬೆಳಗುಂದಿ, ಭೀಮಾಶಂಕರ, ನರೇಶ್ ಗಿರೆಪ್ಪನೋರ್, ಅಲಿಸಾಬ್, ಶಿವು ಪಾಟೀಲ್, ಭೀಮರೆಡ್ಡಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.





# ಚಂಡ್ರಿಕಿ ಗ್ರಾಮ ಪಂಚಾಯಿತಿಗೆ ಸಿಇಓ ಬೇಟಿ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಗುರುಮಠಕಲ್ ತಾಲೂಕಿನ ಚಂಡ್ರಿಕಿ ಗ್ರಾಮ ಪಂಚಾಯಿತಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಾನ್ಯ ಶ್ರೀ ಲವೀಶ್ ಒರಾಡಿಯ ಅವರು ಭೇಟಿ ನೀಡಿದರು.

ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರ ಮತ್ತು ಅಧ್ಯಕ್ಷರ ಜೊತೆ ಕುಂದುಕೊರತೆ ಸಭೆ ನಡೆಸಿದರು.

ನಂತರ ಶುದ್ಧ ಕುಡಿಯುವ ನೀರಿನ ಘಟಕ ಪರಿಶೀಲಿಸಿದರು. ಅಂಗನವಾಡಿ ಕೇಂದ್ರಗಳು, ಗ್ರಂಥಾಲಯಗಳು, ಸರ್ಕಾರಿ ಉರ್ದು ಶಾಲೆ ಮತ್ತು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಕಂಪ್ಯೂಟರ್ ಲ್ಯಾಬ್, ಸೈನ್ಸ್ ಲ್ಯಾಬ್, ಪ್ರೊಜೆಕ್ಟರ್ ವೀಕ್ಷಿಸಿದರು. ಅಡುಗೆ ಕೋಣೆಗೆ ಭೇಟಿ ನೀಡಿ ತೊಗರಿ, ಅಕ್ಕಿ ಪರೀಕ್ಷಿಸಿದರು. ಬಿಸಿಊಟ ಮಕ್ಕಳಿಂದ ಮಾಹಿತಿ ಪಡೆದರು. ಗ್ರಂಥಾಲಯಗಳಿಗೆ ಭೇಟಿ ನೀಡಿ ಶುದ್ಧ ಕುಡಿಯುವ ನೀರಿನ ಯಂತ್ರ ತಪಾಸಣೆ ನಡೆಸಿದರು. ಶಾಲೆಯ ಪ್ರತಿಯೊಂದು ಕೊಠಡಿಗೆ ಭೇಟಿ ನೀಡಿ, ವಿದ್ಯುತ್ ಸೌಕರ್ಯ ಕಲ್ಪಿಸಿರುವ ಕುರಿತು ಮಾಹಿತಿ ಪಡೆದರು, ಶುದ್ಧ ಕುಡಿಯುವ ನೀರಿನ ಘಟಕ ಕಾರ್ಯಾಚರಣೆ ಕುರಿತು ವಿಕ್ಷಿಸಿದರು. ಸರ್ಕಾರಿ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ಮೂಲ ಸೌಕರ್ಯಗಳ ಕುರಿತು ವೀಕ್ಷಿಸಿದರು. ಸಮುದಾಯ ಶೌಚಾಲಯ ಕಟ್ಟಡಕ್ಕೆ ಗುರುತಿಸಿರುವ ಜಾಗ ಪರಿಶೀಲನೆ ನಡೆಸಿ ಕೂಡಲೇ ಕಟ್ಟಡ ಕಾಮಗಾರಿ ಆರಂಭಿಸುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ಗುರುಮಠಕಲ್ ತಾಲೂಕು ಪಂಚಾಯಿತಿಯ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಅಂಬರೀಶ್ ಪಾಟೀಲ್ ಸರ್ ಮತ್ತು ತಾಲೂಕು ಸಹಾಯಕ ನಿರ್ದೇಶಕರಾದ ಮಾನ್ಯ ರಾಮಚಂದ್ರ ಬಸೂದೆ, ಪಿಡಿಓ ಶ್ರೀಮತಿ ಗೀತಾ, ಟಿಸಿ ಮುಜಾಮಿಲ್, ಟಿಐಇಸಿ ರಾಘವೇಂದ್ರ, ಜೆಎಇ ವಿಜಯ್ ಆಲೆಮನೆ ಸೇರಿದಂತೆ ಪಂಚಾಯಿತಿ ಸಿಬ್ಬಂದಿಗಳು, ಸದಸ್ಯರು ಇದ್ದರು.

# ಅರ್ಥಪೂರ್ಣವಾಗಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆಗೆ ನಿರ್ಧಾರ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕತಿ ಇಲಾಖೆ ಹಾಗೂ ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ಜನೇವರಿ ೨೧ ರಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಿಸುವ ಕುರಿತು ಇಂದು ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್**

ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಅಂದು ನಗರದ ವಿದ್ಯಾ ಮಂಗಲ್ ಕಾರ್ಯಾಲಯದಲ್ಲಿ ಮಧ್ಯಾಹ್ನ 12–30 ಗಂಟೆಗೆ ಈ ಜಯಂತಿ ಆಯೋಜಿಸಲು ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಲು, ವೇದಿಕೆ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು, ನುರಿತ ಉಪನ್ಯಾಸಕರನ್ನು

ಆಹ್ವಾನಿಸಲು ನಿರ್ಧರಿಸಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಕಾರ್ಯಕ್ರಮದ ಸಂದರ್ಭದಲ್ಲಿ , ಸೂಕ್ತ ಪೋಲಿಸ್ ಬಂದೋಬಸ್ತ್, ವೇದಿಕೆ ಸಿದ್ಧತೆ ನೋಡಿಕೊಳ್ಳಲು , ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ ಸೂಚಿಸಲಾಯಿತು. ಕಾರ್ಯಕ್ರಮವನ್ನು ತಾಲೂಕ ಮಟ್ಟದಲ್ಲಿ ಶಾಲಾ, ಕಾಲೇಜು, ಗ್ರಾಮ ಪಂಚಾಯತ್, ವಿವಿಧ ಕಚೇರಿಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಈ ಜಯಂತಿ ಆಚರಣೆಗೆ ಸೂಚಿಸಿ, ಮುಖ್ಯ ಕಾರ್ಯಕ್ರಮಕ್ಕೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಸಮಾಜದ ಮೂಲಕ ಹಮ್ಮಿಕೊಳ್ಳಲಾಗುವ ಮೆರವಣಿಗೆ ಕಾರ್ಯಕ್ರಮದ ಬಗ್ಗೆ ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಈ ಕುರಿತು ಮಾಹಿತಿ ನೀಡಲು ಸೂಚಿಸಿದರು. ಸಭೆಯಲ್ಲಿ ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀಮತಿ ಉತ್ತರದೇವಿ ಸ್ವಾಗತಿಸಿದರು. ಸಭೆಯಲ್ಲಿ ಜಿಲ್ಲಾ ಕೋಲಿ, ಕಬ್ಬಲಿಗ ಸಮಾಜದ ಮುಖಂಡರು , ಜಿಲ್ಲಾ, ತಾಲೂಕಾ ಅಧ್ಯಕ್ಷರು ಉಪಸ್ಥಿತರಿದ್ದರು. ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಗೋಸಿ, ತಾಲೂಕಾ ಅಧ್ಯಕ್ಷ ನಿಂಗಪ್ಪ ಜಾಲಗಾರ, ಜಿಲ್ಲಾ ಕೋಲಿ ಹಾಗೂ ಕಬ್ಬಲಿಗ ಸಮಾಜ ಸಂಘದ ಉಪಾಧ್ಯಕ್ಷ ಚಂದ್ರಶೇಖರ್ ಬಾಡಿಯಾಳ, ಅಖಿಲಭಾರತ ಕೋಲಿ ಸಮಾಜದ ರಾಜ್ಯ ಕಾರ್ಯದರ್ಶಿ ಉಮೇಶ್ ಮುದ್ನಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೀಮರೆಡ್ಡಿ, ಸಮಾಜದ ಹಿರಿಯ ಮುಖಂಡರಾದ ಶರಣಪ್ಪ ಮೊಟ್ನಳ್ಳಿ, ಸಣ್ಣ ಹಣುಮಂತಪ್ಪ ಬಳಿಚಕ್ರ, ತಾಲೂಕ ಉಪಾಧ್ಯಕ್ಷ ದೇವೂ ಬಳಿಚಕ್ರ, , ಜಿಲ್ಲಾ ಯುವ ಅಧ್ಯಕ್ಷ ಮಲ್ಲು ಪೂಜಾರಿ, ಮುದುಕಪ್ಪ ಚಾಮನಳ್ಳಿ, ತಾಲೂಕಾ ಉಪಾಧ್ಯಕ್ಷ ಕಳಸಪ್ಪ ಸಾವೂರ್, ನಗರ ಯುವ ಅಧ್ಯಕ್ಷ ಮಹೇಶ್ ಬಾಡಿಯಾಳ, ಮಹಾದೇವಪ್ಪ ಗಣಪೂರ, ಬಸವರಾಜ ಕೋಲಕಾರ, ಉಪಸ್ಥಿತರಿದ್ದರು.



# ಉತ್ಸವ: ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತೊಂದು ಸುತ್ತಿನ ಸಿದ್ಧತಾ ಸಭೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜನವರಿ 29, 30 ಹಾಗೂ 31ರಂದು ನಿಗದಿಯಾದ ರಾಯಚೂರು ಉತ್ಸವ ಆಚರಣಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಜನವರಿ 13ರಂದು ಎಡೆದೊರೆ ನಾಡು ರಾಯಚೂರು ಉತ್ಸವ–2026ರ ಮತ್ತೊಂದು ಸುತ್ತಿನ ಸಿದ್ಧತಾ ಸಭೆ ನಡೆಯಿತು.



ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಮೂರನೇ ಸುತ್ತಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಉತ್ಸವದ ಹಿನ್ನೆಲೆಯಲ್ಲಿ ಈಗಾಗಲೇ ಎಲ್ಲ ರೀತಿಯಲ್ಲಿ ಸಿದ್ಧತೆಗಳು ನಡೆಯುತ್ತಿದ್ದು, ಇನ್ನಷ್ಟು ಚುರುಕುಗೊಳ್ಳಬೇಕು. ಮುಖ್ಯವಾಗಿ ಜನೋತ್ಸವ ರೀತಿಯಲ್ಲಿ ಉತ್ಸವ ನಡೆಸಲು ಜಿಲ್ಲಾಡಳಿತವು ಬದ್ಧವಾಗಿದೆ. ನಾವು ಸಹ ಉತ್ಸವದಲ್ಲಿ ಭಾಗವಹಿಸುತ್ತೇವೆ. ನಮಗೂ ಉತ್ಸವದ ಕಾರ್ಯ ವಹಿಸಿ ಎಂದು ತಿಳಿಸುವ ಜಿಲ್ಲೆಯ ಎಲ್ಲ ಸಂಘ–ಸಂಸ್ಥೆಗಳ, ಗಣ್ಯರ, ನಾಗರಿಕರ, ಯುವಕರ, ನೌಕರರ ಅಭಿಲಾಷೆಯಂತೆ ಎಲ್ಲರ ಸಹಭಾಗಿತ್ವದೊಂದಿಗೆ ಉತ್ಸವ ನಡೆಯುವಂತೆ ಕಾರ್ಯಯೋಜನೆ ರೂಪಿಸಿ ಸಂಬಂಧಿಸಿದ ಆಯಾ ಸಮಿತಿಗಳಲ್ಲಿನ ಅಧ್ಯಕ್ಷರು ಮತ್ತು ಸದಸ್ಯರು ಕಾರ್ಯನುಷ್ಠಾನಗೊಳಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿನ ಕವಿಗಳು, ಲೇಖಕರು, ಚಿಂತಕರು ಮತ್ತು ಬುದ್ಧಿಜೀವಗಳ ಮತ್ತು ಜಾನಪದ ಸೇರಿದಂತೆ ಎಲ್ಲ ಬಗೆಯ ಕಲಾವಿದರಿಗೆ ಉತ್ಸವದಲ್ಲಿ ಅವಕಾಶ ಸಿಗಬೇಕು. ಈ ಕಾರ್ಯವನ್ನು ಆಯಾ ಸಮಿತಿಯ ಸದಸ್ಯರು ಪಾರದರ್ಶಕವಾಗಿ ಮಾಡಬೇಕು. ಪುಸ್ತಕ ಓದುವ ಸಂಸ್ಕೃತಿಗೆ ಆದ್ಯತೆ ಸಿಗುವ ದಿಶೆಯಲ್ಲಿ ಪುಸ್ತಕ ಪ್ರದರ್ಶನ ಮಳಿಗೆ ನಿರ್ಮಾಣ ಸೇರಿದಂತೆ ನಾನಾ ಬಗೆಯ ಕಾರ್ಯಗಳ ಮೂಲಕ ಉತ್ಸವವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು.

ಎಲ್ಲ ಅತಿಥಿ ಗಣ್ಯರಿಗೆ ಶಿಷ್ಠಾಚಾರದಂತೆ ಉತ್ಸವಕ್ಕೆ ಆಹ್ವಾನಿಸುವ ಕಾರ್ಯವಾಗಬೇಕು. ನಗರದ ರೈಲ್ವೆ ನಿಲ್ದಾಣ, ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಲ್ಲಿ ಮತ್ತು ಇತರೇ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಬ್ಯಾನರ್ ಅಳವಡಿಸಿ ಪ್ರಚಾರ ಕಾರ್ಯಕ್ಕೆ ಒತ್ತು ಕೊಡಬೇಕು. ಹೊರಗಡೆಯಿಂದ ಉತ್ಸವಕ್ಕೆ ಆಗಮಿಸುವ ಕಲಾವಿದರು ಮತ್ತು ಇನ್ನಿತರರಿಗೆ ಸರಿಯಾದ ರೀತಿಯಲ್ಲಿ ವಸತಿ ಗೃಹಗಳ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು.

ಉತ್ಸವದಲ್ಲಿ ಕೃಷಿ, ಕರಕುಶಲ, ಫಲಪುಷ್ಪ, ಆಹಾರ ಮೇಳ, ಮತ್ಸ್ಯಮೇಳ, ಚಿತ್ರಕಲೆ ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು, ಎಲ್ಲಾ ಪ್ರದರ್ಶನಗಳು ಅಚ್ಚುಕಟ್ಟಾಗಿ ನಡೆಯಬೇಕು. ರೈತರನ್ನು ಆಕರ್ಷಿಸುವ ಕೃಷಿ ಉತ್ಸವ ಆಯೋಜಿಸಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಉತ್ಸವದಲ್ಲಿ ನಾನಾ ಸ್ಥಳಗಳ ಮಾಹಿತಿ ಜನತೆಗೆ ಸಿಗುವ ನಿಟ್ಟಿನಲ್ಲಿ ಅಲ್ಲಲ್ಲಿ ಸೂಚನಾ ಫಲಕಗಳನ್ನು ಹಾಕಬೇಕು. ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್ ಹಾಗೂ ಇತರೆ ಸ್ವಯಂ ಸೇವಕ ಸಂಘಗಳ ಸಹಾಯ–ಸಹಕಾರ ಪಡೆಯಬೇಕು ಎಂದು ತಿಳಿಸಿದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ರಾಯಚೂರು ಉತ್ಸವ ಹಿನ್ನೆಲೆಯಲ್ಲಿ ಈಗಾಗಲೇ ರಾಯಚೂರು ಸಿಟಿಯ ಸೌಂದರ್ಯೀಕರಣ ಕಾರ್ಯ ಭರ್ಜರಿ ನಡೆದಿದೆ. ರಸ್ತೆ ಅಗಲೀಕರಣ, ದುರಸ್ಥಿ ಕಾರ್ಯ ನಡೆದಿದ್ದು ಜನತೆ ಸಹಕಾರ ನೀಡಬೇಕು. ನಗರದ ಎಲ್ಲ ಮುಖ್ಯರಸ್ತೆಗಳು ಸುಂದರವಾಗಿ ಕಾಣುವಂತೆ ಪಾಲಿಕೆ ಕೈಗೊಂಡ ಕಾರ್ಯಕ್ಕೆ ಜನತೆ ಸಹಕರಿಸಬೇಕು. ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು. ರಾಯಚೂರು ಸಿಟಿ ಸೇರಿದಂತೆ ಜಿಲ್ಲೆಯ ಎಲ್ಲ ವ್ಯಾಪಾರಸ್ಥರು ಈಗಿನಿಂದಲೇ ರಾಯಚೂರು ಉತ್ಸವದ ಅಲಂಕಾರ ಕಾರ್ಯಕ್ಕೆ ಕಾರ್ಯಯೋಜನೆ ರೂಪಿಸಿ ಸಹಕರಿಸಬೇಕು ಎಂದು ಎಲ್ಲ ವ್ಯಾಪಾರಸ್ಥರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ್, ತಹಸೀಲ್ದಾರರಾದ ಸುರೇಶ್ ವರ್ಮಾ, ಅಮರೇಶ ಬಿರಾದಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಸಭೆಯಲ್ಲಿ ಇದ್ದರು.

# ವಿಶೇಷ ಮಹಾಪೂಜೆ ಅನ್ನ ಸಂತರ್ಪಣೆ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ:**



ಮಕರ ಸಂಕ್ರಾಂತಿಯ ನಿಮಿತ್ತ ಬಾಳೆಗುಳಿಯ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನದಲ್ಲಿ ಜ. 14ರಂದು ಮಧ್ಯಾಹ್ನ 12.30 ಗಂಟೆಗೆ ವಿಶೇಷ ಮಹಾಪೂಜೆ ನಡೆಯಲಿದ್ದು,

ನಂತರ ಅನ್ನಸಂತರ್ಪಣೆ ಇಟ್ಟುಕೊಳ್ಳಲಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಮತ್ತು ಊರ ನಾಗರಿಕರು ಆಗಮಿಸಿ ದೇವರ ಪ್ರಸಾದ ಸ್ವೀಕರಿಸುವಂತೆ ಸಮಿತಿಯವರು ವಿನಂತಿಸಿದ್ದಾರೆ.

# ಸುರಭಿ ಸಮಗ್ರ ವ್ಯಸನ ಮುಕ್ತ ಕೇಂದ್ರದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಆಚರಣೆ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ನಗರದ ಅಶೋಕ ವೃತ್ತದ ಬಳಿ ಇರುವ ಸುರಭಿ ಸಮಗ್ರ ವ್ಯಸನ ಮುಕ್ತ ಕೇಂದ್ರದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಹಮ್ಮಿಕೊಳ್ಳಲಾಗಿತ್ತು.

ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಇದೇ ವೇಳೆ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮಾತನಾಡಿ ಸ್ವಾಮಿ ವಿವೇಕಾನಂದರು ಸಾಮಾಜಿಕ–ಆಧ್ಯಾತ್ಮಿಕ ಸೇವೆಗೆ ನಾಂದಿ ಹಾಡಿದ್ದು, ಶಿಕ್ಷಣ, ಮಹಿಳಾ ಸಬಲೀಕರಣ ಮತ್ತು ರಾಷ್ಟ್ರೀಯ ಏಕತೆಗೆ ಒತ್ತು ನೀಡಿ, ಭಾರತದ ಯುವಕರಲ್ಲಿ ದೇಶಭಕ್ತಿ ಜಾಗೃತಿ ಮೂಡಿಸಿದ್ದು ಮತ್ತು ಪಾಶ್ಚಿಮಾತ್ಯ ಜಗತ್ತಿಗೆ ಹಿಂದೂ ಧರ್ಮದ ಸಾರವನ್ನು ತಿಳಿಸಿದ್ದು. ಅವರು ವೇದಾಂತ ಮತ್ತು ಯೋಗವನ್ನು ವಿಶ್ವದಾದ್ಯಂತ ಪ್ರಚಲಿತಗೊಳಿಸಿದ ಮಹಾನ್ ಚಿಂತಕರು ಮತ್ತು ಸುಧಾರಕರಾಗಿದ್ದಾರೆ ಅವರ ತತ್ವ ಆದರ್ಶಗಳು ನಮಗೆ ಸ್ಪೂರ್ತಿಯಾಗಲಿ ಎಂದರು.

ಸಮಾಜ ಸೇವಕರಾದ ಸೌಮ್ಯ ನಾಲ್ವಾಡ, ದ್ಯಾಮಣ್ಣ ಕರಿಗಾರ ಮಾತನಾಡಿ ಸ್ವಾಮಿ ವಿವೇಕಾನಂದರು ಅತೀ ಚಿಕ್ಕವಯಸ್ಸಿನಲ್ಲೆ ಅಗಾಧವಾದ ಸಾಧನೆ ಮಾಡಿ ಯುವಕರ ಚೈತನ್ಯ ಚಿಲುಮೆಯಾಗಿದ್ದಾರೆ. ತಾವೆಲ್ಲರೂ ವ್ಯಸನ ಮುಕ್ತರಾಗಿ ಹೊಸ ಬದುಕು ಪ್ರಾರಂಭಿಸಿ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸುರಬಿ ಸಮಗ್ರ ವ್ಯಸನ ಮುಕ್ತ ಕೇಂದ್ರ ಕೊಪ್ಪಳ ಸಂಸ್ಥೆಯ ಯೋಜನ ನಿರ್ದೇಶಕರಾದ ಭರಮಪ್ಪ ಎಚ್ ಎಮ್, ಸಮಾಜ ಸೇವಕರಾದ ಮಹಾಂತೇಶ ಸಿಂದೋಗಿಮಠ, ಬಿ.ಎನ್. ಹೊರಪೇಟಿ, ಆಪ್ತಸಮಾಲೋಚಕರಾದ ಮಹಾಂತೇಶ್ ಹಾಗೂ ಯಲ್ಲಪ್ಪ ಪೂಜಾರ ಹಾಗೂ ವ್ಯಸನ ಮುಕ್ತ ಚಿಕಿತ್ಸಕರು ಉಪಸ್ಥಿತಿ ಇದ್ದರು.

# ಶಾಸಕ ಮಾನಪ್ಪ ವಜ್ಜಲ್ ತೊಗರಿ ಖರೀದಿ ಕೇಂದ್ರವನ್ನು ಉದ್ಘಾಟನೆ ಮಾಡಿದರು



• **ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:**

ತಾಲೂಕಿನ ಎಪಿಎಂಸಿ ಪ್ರಾಂಗಣದಲ್ಲಿ ಶಾಸಕ ಮಾನಪ್ಪ ವಜ್ಜಲ್ ತೊಗರಿ ಖರೀದಿ ಕೇಂದ್ರವನ್ನು ಮಂಗಳವಾರ ಉದ್ಘಾಟಿಸಿದರು.

ಕೇಂದ್ರ ಸರಕಾರದ ಬೆಂಬಲ ಯೋಜನೆಯಡಿ ನಾಫೆಡ್ ಸಂಸ್ಥೆಯ 2025 –26ನೇ ಸಾಲಿನ ಎಫ್.ಎ.ಕ್ಯೂ. ಗುಣಮಟ್ಟದ ತೊಗರಿ ಕೇಂದ್ರ ಇಂದಿನಿಂದ ಕಾರ್ಯಾರಂಭ ಮಾಡಿದ್ದು, ತಾಲೂಕಿನ ರೈತರು ನಿಯಮಾನುಸಾರ ಶಾಂತಯುತವಾಗಿ ತಮ್ಮ ಬೆಳೆಯನ್ನು ಇಲ್ಲಿ ಮಾರಾಟ ಮಾಡಬಹುದು. ಅಧಿಕಾರಿಗಳು ರೈತರೊಂದಿಗೆ ಅನುಚಿತವಾಗಿ ವರ್ತಿಸದೇ ಗ್ರಾಮೀಣ ಪ್ರದೇಶದಿಂದ ಬರುವ ರೈತರ ಮಾಲನ್ನು ಸಕಾಲದಲ್ಲಿ ತೆಗೆದುಕೊಳ್ಳಬೇಕು. ಎಂದು ಶಾಸಕ ವಜ್ಜಲ್ ಸೂಚನೆ ನೀಡಿದರು.

ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು, ಬಿಜೆಪಿ ಮಂಡಲ ಅಧ್ಯಕ್ಷರಾದ ಹುಲ್ಲೇಶ ಸಾದುಕಾರ ಮುದಗಲ್, ಮುಖಂಡರಾದ ಗಿರಿಮಲ್ಲನಗೌಡ, ಮಹಾದೇವಯ್ಯ ಸ್ವಾಮಿ, ಅಯ್ಯಪ್ಪ ಮಾಳೂರು, ಭೀಮಣ್ಣ ಹಿರೇಮನಿ ಸೇರಿ ಇತರರು ಇದ್ದರು.

# ಗಣರಾಜ್ಯೋತ್ಸವ ಅಗತ್ಯ ಸಿದ್ಧತೆ ಕೈಗೊಳ್ಳಲು ಡಿಸಿ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**




ಜಿಲ್ಲಾ ಕೇಂದ್ರದಲ್ಲಿ ಜನವರಿ 26ರಂದು ಶಿಷ್ಟಾಚಾರದಂತೆ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ದತೆ ಮಾಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಗಣರಾಜ್ಯೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣರಾಜ್ಯೋತ್ಸವದ ಮುಖ್ಯ ಕಾರ್ಯಕ್ರಮವು ನಗರದ ಬಿಎಂಸಿಆರ್‌ಸಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದು, ಅಂದು ಬೆಳಿಗ್ಗೆ 9 ಗಂಟೆಗೆ ಹಜ್ ಮತ್ತು ಪೌರಾಡಳಿತ ಸಚಿವ ರಹೀಂ ಖಾನ್ ಅವರು ಧ್ವಜಾರೋಹಣಾ ನೆರವೇರಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯ ಭಾಗವಹಿಸಬೇಕು ಎಂದು ಸೂಚಿಸಿದರು. ಶಿಷ್ಠಾಚಾರದ ನಿಯಮಗಳಂತೆ ಗಣರಾಜ್ಯೋತ್ಸವ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ, ಆಹ್ವಾನ ಪತ್ರಿಕೆಗಳನ್ನು ಜನಪ್ರತಿನಿಧಿಗಳಿಗೆ, ಗಣ್ಯರಿಗೆ ವಿತರಿಸಲು ಕ್ರಮವಹಿಸಬೇಕು ಎಂದರು.

ಗಣರಾಜ್ಯೋತ್ಸವ ಆಚರಣೆಗೆ ಸಂಬಂಧಿಸಿದಂತೆ ಸ್ವಾಗತ, ಶಿಷ್ಠಾಚಾರ, ಆಹ್ವಾನ ಪತ್ರಿಕೆ ಹಾಗೂ ವೇದಿಕೆ ಸಮಿತಿ, ಸನ್ಮಾನ, ಪೆರೇಡ್ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯಲ್ಲಿರುವ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಗಳು ಸಮನ್ವಯತೆಯಿಂದ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಗಣರಾಜ್ಯೋತ್ಸವವನ್ನು ಆಚರಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮವು ಅಚ್ಚುಕಟ್ಟಾಗಿ ಶಿಷ್ಟಾಚಾರದಂತೆ ನಡೆಯುವಂತಾಗಬೇಕು. ಶಿಸ್ತುಬದ್ಧವಾಗಿ ವೇದಿಕೆ ನಿರ್ಮಾಣವಾಗಬೇಕು. ಕ್ರೀಡಾಂಗಣದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಮೊಬೈಲ್ ಶೌಚಾಲಯ ಸೇರಿದಂತೆ ನೀರನ್ನು ಸಿಂಪಡಿಸಿ ಧೂಳು ಆಗದಂತೆ ನೋಡಿಕೊಳ್ಳಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು.

ಅದೇರೀತಿಯಾಗಿ ಎಲ್ಲಾ ಸರ್ಕಾರಿ ಕಚೇರಿಗಳಿಗೂ ಸಹ ದೀಪಾಲಂಕಾರ ಮಾಡಬೇಕು. ನಗರದ ಏಕಾಶಿಲಾ ಬೆಟ್ಟಕ್ಕೂ ವಿದ್ಯುತ್ ದೀಪಾಲಂಕಾರ ಕೈಗೊಳ್ಳಬೇಕು. ಇದಕ್ಕೆ ನಿರಂತರ ವಿದ್ಯುತ್ ವ್ಯವಸ್ಥೆ ಇರುವಂತೆ ಜೆಸ್ಕಾಂ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು. ಧ್ವಜಾರೋಹಣ ಪ್ರಯುಕ್ತ ಪಥ ಸಂಚಲನವು ಅಚ್ಚುಕಟ್ಟಾಗಿ ನಡೆಯಬೇಕು. ಪೊಲೀಸ್ ಇಲಾಖೆ, ಗೃಹರಕ್ಷಕ ದಳ, ಸ್ಕೌಟ್ಸ್ ಮತ್ತು ಗೈಡ್ಸ್, ಶಾಲಾ ಶಿಕ್ಷಣ ಇಲಾಖೆ ಸೇರಿದಂತೆ ಕವಾಯತು ತಂಡಗಳನ್ನು ರಚಿಸಬೇಕು. ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಂದ ಜನಾಕರ್ಷಣಿಯವಾಗಿ ದೇಶಭಕ್ತಿ ಬಿಂಬಿಸುವ ಕನ್ನಡ ಹಾಡುಗಳಿಗೆ ಹೆಚ್ಚಿನ ಆದ್ಯತೆ ನೀಡಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವ್ಯವಸ್ಥಿತಗೊಳಿಸಬೇಕು ಎಂದು ಜಿಲ್ಲಾಧಿಕಾರಿಯವರು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಅಂದು ಸಂಜೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ದೇಶಪ್ರೇಮ ಪ್ರಸ್ತುತಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಾವುಟಗಳನ್ನು ಬಿಸಾಡುವಂತಿಲ್ಲ. ಈ ಕುರಿತು ಶಾಲಾ ಮಕ್ಕಳಿಗೆ ಅರಿವು ಮೂಡಿಸಬೇಕು ಮತ್ತು ವಾಹನಗಳಿಗೂ ಸಹ ತ್ರಿವರ್ಣ ಧ್ವಜವನ್ನು ಕಟ್ಟುವಂತಿಲ್ಲ. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ಅರಿವು ಜಾಗೃತಿ ನೀಡಬೇಕು ಎಂದರು.

*ಬ್ಯಾನರ್ ಅಳವಡಿಕೆಗೆ ಪೂರ್ವಾನುಮತಿ ಕಡ್ಡಾಯ:* ಗಣರಾಜ್ಯೋತ್ಸವ ಅಂಗವಾಗಿ ಜಿಲ್ಲೆಯಲ್ಲಿ ಶುಭಾಶಯ ಕೋರುವ ಬ್ಯಾನರ್ ಗಳನ್ನು ಅಳವಡಿಸುವ ಅವಕಾಶವಿದ್ದು, ಇದಕ್ಕೆ ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು. ಮಹಾನಗರ ಪಾಲಿಕೆ ಆಯುಕ್ತರು ಹಾಗೂ ನಗರ ಸ್ಥಳೀಯ–ಸಂಸ್ಥೆಗಳ ಮುಖ್ಯಾಧಿಕಾರಿಗಳು ಕಡ್ಡಾಯವಾಗಿ ಪರಿಶೀಲನೆ ನಡೆಸುತ್ತಿರಬೇಕು. ಫ್ಲೆಕ್ಸ್ ಗಳಿಗೆ ಅವಕಾಶವಿಲ್ಲ. ಪರಿಸರ ಸ್ನೇಹಿ ಬ್ಯಾನರ್ ಅಳವಡಿಸಬಹುದಾಗಿದೆ. ಹಾಗಾಗಿ ಅಧಿಕಾರಿಗಳು ತಪ್ಪದೇ ಕ್ರಮವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಡಿಎಂಎಫ್ ವಿಶೇಷ ಅಧಿಕಾರಿ ಲೋಕೇಶ್, ಸೇರಿದಂತೆ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಭಾರತೀಯ ಸೇವಾದಳ, ಎನ್‌ಸಿಸಿ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಉತ್ಸವ: ಜ, 25ರಂದು ಮ್ಯಾರಥಾನ್

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜಿಲ್ಲೆಯಲ್ಲಿ ಜನವರಿ–2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ.

ಜನವರಿ 25ರ ಬೆಳಗ್ಗೆ 6 ಗಂಟೆಗೆ ಮ್ಯಾರಥಾನ್ ಓಟವನ್ನು ಹಮ್ಮಿಕೊಳ್ಳಲಾಗಿದ್ದು, ಓಟವು ನಗರದ ಜಿಲ್ಲಾ ಕ್ರೀಡಾಂಗಣದಿಂದ ಆರ್.ಟಿ.ಓ ಸರ್ಕಲ್, ಮಹಾವೀರ್ ಸರ್ಕಲ್ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರಲಿದೆ. ಪ್ರಥಮ ಬಹುಮಾನ 15 ಸಾವಿರ, ದ್ವಿತೀಯ ಬಹುಮಾನ 10 ಸಾವಿರ ಹಾಗೂ ತೃತೀಯ ಬಹುಮಾನ 5ಸಾವಿರ ರೂ.ಗಳನ್ನು ನೀಡಲಾಗುವುದು. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಯುವಜನಾ ಸೇವಾ ಮತ್ತು ಕ್ರೀಡಾ ಇಲಾಖೆಯ ಚಂದ್ರಶೇಖರ ಹೊಸೂರು ಅವರ ಮೊಬೈಲ್ ಸಂಖ್ಯೆ: 9886551244 ಅಥವಾ ಅಥ್ಲಿಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ತಿಮ್ಮಾರೆಡ್ಡಿ ಅವರ ಮೊಬೈಲ್ ಸಂಖ್ಯೆ: 9844484481ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ.

ಈ ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ಸವ: ಜನವರಿ 27ರಂದು ಸೈಕ್ಲಾಥಾನ್

ರಾಯಚೂರು: ಜಿಲ್ಲೆಯಲ್ಲಿ ಜನವರಿ–2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಜನವರಿ 27ರ ಬೆಳಗ್ಗೆ 6 ಗಂಟೆಗೆ ಸೈಕ್ಲಾಥಾನ್ ಆಯೋಜನೆ ಮಾಡಲಾಗಿದೆ. ಪ್ರಥಮ ಬಹುಮಾನ 10 ಸಾವಿರ ಹಾಗೂ ದ್ವಿತೀಯ ಬಹುಮಾನ 5ಸಾವಿರ ರೂ.ಗಳನ್ನು ನೀಡಲಾಗುವುದು. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರ ಮೊಬೈಲ್ ಸಂಖ್ಯೆ: 9972316895 ಅಥವಾ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್ ಮೊಬೈಲ್ ಸಂಖ್ಯೆ: 9448427601ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ. ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮುದ್ರದ ಸುಳಿಗೆ ಸಿಲುಕಿದ ಇಬ್ಬರ ರಕ್ಷಣೆ



• **ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ:**

ಮಂಗಳವಾರ ಪ್ರವಾಸಕ್ಕೆ ಬಂದಿದ್ದ ಬೆಂಗಳೂರು ಖಾಸಗಿ ಕಂಪನಿಯ ಉದ್ಯೋಗಿಗಳು ಇಲ್ಲಿಯ ಮುಖ್ಯ ಕಡಲ ತೀರದಲ್ಲಿ ಈಜಾಡುತ್ತಿದ್ದರು. ಈ ಸಂದರ್ಭದಲ್ಲಿ ಇಬ್ಬರು ಸುಳಿಗೆ ಸಿಲುಕಿ ಪ್ರಾಣ ಅಪಾಯದಲ್ಲಿದ್ದ ವೇಳೆ ಲೈಪ ಸೇಪಗಾರ್ಡ, ವಾಟರ್ ಸ್ಪೋರ್ಟ್ಸ್ ಸಿಬ್ಬಂದಿಗಳು ಇವರನ್ನು ರಕ್ಷಿಸಿದ ಘಟನೆ ನಡೆದಿದೆ.

ಸಂಗಮೇಶ್ ರಾಜಪ್ಪ ಪಾಟೀಲ್(23) ಬೀದರ್, ಜಯಪ್ರಕಾಶ್(23) ಗುಲ್ಬರ್ಗ ಇವರೇ ಪ್ರಾಣಾಪಾಯದಿಂದ ಪಾರಾದ ಯುವಕರಾಗಿದ್ದಾರೆ. ನೀರಿನ ಸುಳಿಗೆ ಸಿಲುಕಿದ್ದನ್ನು ಗಮನಿಸಿದ ಜೀವ ರಕ್ಷಕ ಸಿಬ್ಬಂದಿಗಳಾದ ರೋಷನ್ ಖಾರ್ವಿ, ಶಿವಪ್ರಸಾದ ಅಂಬಿಗ, ಮೋಹನ ಅಂಬಿಗ, ಲೋಕೇಶ ಹರಿಕಂತ್ರ, ಬೀಚ್ ಸೂಪರ್ವೈಸರ್ ರವಿ ನಾಯ್ಕ ಇತರರು ತಕ್ಷಣ ಧಾವಿಸಿ ಇಬ್ಬರು ಪ್ರವಾಸಿಗರನ್ನು ಕಾಪಾಡಲು ಯಶಸ್ವಿಯಾಗಿದ್ದಾರೆ.

# ಕಾರ್ಡಿಯಾಲಜಿಸ್ಟ್ ಹಾಗೂ ಇಎನ್‌ಟಿ ತಜ್ಞರ ನೇಮಕಕ್ಕೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಲಿಂಗಸೂಗೂರ:**

ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ತಕ್ಷಣವೇ ಹೃದಯ ರೋಗ ತಜ್ಞರು ಕಾರ್ಡಿಯಾಲಜಿಸ್ಟ್ ಹಾಗೂ ಕಿವಿಮೂಗು ಗಂಟಲು ಇಎನ್‌ಟಿ ತಜ್ಞರನ್ನು ನೇಮಕ ಮಾಡಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ತಾಲೂಕು ಘಟಕದ ಅಧ್ಯಕ್ಷರಾದ ಜಿಲಾನಿ ಪಾಶ ನೇತೃತ್ವ ದಲ್ಲಿ ರಾಜ್ಯ ಸರಕಾರದ ಆರೋಗ್ಯ ಸಚಿವರಿಗೆ, ಲಿಂಗಸಗೂರು ತಾಲೂಕು ಆರೋಗ್ಯಾಧಿಕಾರಿಗಳ ಮುಖಾಂತರ ಮನವಿಯನ್ನು ಸಲ್ಲಿಸಿದರು ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಗೆ ಪ್ರತಿದಿನ ನೂರಾರು ಬಡ ಹಾಗೂ ಮಧ್ಯಮ ವರ್ಗದ ಜನರು ಚಿಕಿತ್ಸೆಗಾಗಿ ಆಗಮಿಸುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಹೃದಯ ಸಂಬಂಧಿತ ರೋಗಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪರಿಣಿತ ವೈದ್ಯರ ಅಗತ್ಯತೆ ತೀವ್ರವಾಗಿದೆ ಎಂದು ಸಂಘಟನೆ ತಿಳಿಸಿದೆ.

ಸಾರ್ವಜನಿಕ ಆಸ್ಪತ್ರೆಯಲ್ಲಿ ಕಾರ್ಡಿಯಾಲಜಿಸ್ಟ್ ಕೊರತೆ ಇರುವುದರಿಂದ ಹೃದಯ ಸಮಸ್ಯೆಗಳಿಂದ ಬಳಲುವ ರೋಗಿಗಳು ಖಾಸಗಿ ಆಸ್ಪತ್ರೆಗಳತ್ತ ಹೋಗಬೇಕಾಗಿದ್ದು, ಇದರಿಂದ ಅಪಾರ ಆರ್ಥಿಕ ಹೊರೆ ಎದುರಿಸುವಂತಾಗಿದೆ. ತುರ್ತು ಸಂದರ್ಭದಲ್ಲಿ ತಕ್ಷಣ ಚಿಕಿತ್ಸೆ ಸಿಗದೆ ಜೀವಾಪಾಯ ಸಂಭವಿಸುವ ಘಟನೆಗಳೂ ನಡೆಯುತ್ತಿರುವುದು ಆತಂಕಕಾರಿ

ಇದಲ್ಲದೆ, ಕಿವಿ ಮೂಗು ಗಂಟಲು.ಇಎನ್‌ಟಿ ತಜ್ಞರ ಕೊರತೆಯಿಂದ ಸಂಬಂಧಿತ ರೋಗಗಳಿಂದ ಬಳಲುವ ರೋಗಿಗಳು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಬಡ ಹಾಗೂ ಸಾಮಾನ್ಯ ಜನರ ಹಿತದೃಷ್ಟಿಯಿಂದ ಸಾರ್ವಜನಿಕ ಆಸ್ಪತ್ರೆಯಲ್ಲಿ ಶಾಶ್ವತವಾಗಿ ಹೃದಯ ರೋಗ ತಜ್ಞರು ಹಾಗೂ ಇಎನ್‌ಟಿ ತಜ್ಞರನ್ನು ನೇಮಕ ಮಾಡುವುದು ಅತ್ಯಂತ ಅಗತ್ಯವಾಗಿದೆ ಎಂದು ಸಂಘಟನೆ ಆಗ್ರಹಿಸಿದೆ.

ಸಾರ್ವಜನಿಕ ಆಸ್ಪತ್ರೆಗೆ "ಇಕೋ" ಯಂತ್ರ ಸೇರಿದಂತೆ ಅಗತ್ಯ ವೈದ್ಯಕೀಯ ಉಪಕರಣಗಳು ಹಾಗೂ ಮೂಲಭೂತ ಸೌಲಭ್ಯಗಳನ್ನು ಕೂಡ ತಕ್ಷಣ ಒದಗಿಸಬೇಕು ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ರವಿಕುಮಾರ ಬರಗುಡಿ, ಅಜೀಜ ಪಾಷ, ಮೋಸೀನ ಖಾನ, ಅಲ್ಲಾದ್ದೀನ ಬಾಬಾ, ತಿಮ್ಮನಗೌಡ, ಬಸನಗೌಡ, ಮಲ್ಲಣ್ಣ, ಮಾರೆಪ್ಪ, ರಹೀಮ್ ಹರೀಫ್, ಪ್ರಭುಗೌಡ, ರಾಜು ನಾಗರಾಜ, ಖಾಸೀಂಸಾಬ, ನಬೀಸಾಬ ಹಾಗೂ ವೀರೇಶ ಹೀರೆಮಠ ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವ ಪ್ರವಾಸ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಜ.14 ರಂದು ಬಳ್ಳಾರಿ ಪ್ರವಾಸ ಕೈಗೊಂಡಿದ್ದಾರೆ.

ಜ.14 ರಂದು ಬೆಳಿಗ್ಗೆ 09.30 ಕ್ಕೆ ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ತೋರಣಗಲ್ ನ ಜಿಂದಾಲ್ ಏರ್‌ಸ್ಟ್ರಿಪ್ ಗೆ ಆಗಮಿಸುವರು. ಬಳಿಕ ಬೆಳಿಗ್ಗೆ 11.40 ಕ್ಕೆ ಬಳ್ಳಾರಿ ನಗರಕ್ಕೆ ಆಗಮಿಸಿ, ಮಧ್ಯಾಹ್ನ 12 ಗಂಟೆಗೆ ನಗರದ ರಾಯಲ್ ಫೋರ್ಟ್ ಹೋಟೆಲ್ ನಲ್ಲಿ ಕೇಂದ್ರ ಸರ್ಕಾರವು ನರೇಗಾ ಹೆಸರನ್ನು ಬದಲಾವಣೆ ಮಾಡಿರುವ ಹಿನ್ನಲೆಯಲ್ಲಿ ಗ್ರಾಮೀಣ ಪ್ರದೇಶದ ಬಡ ಕೂಲಿ ಕಾರ್ಮಿಕರಿಗೆ ಅನ್ಯಾಯವಾಗಿರುವ ಕುರಿತು ಪತ್ರಿಕಾಗೋಷ್ಠಿ ನಡೆಸುವರು.

ನಂತರ ಮಧ್ಯಾಹ್ನ 03 ಗಂಟೆಗೆ ವಿಜಯನಗರ ಜಿಲ್ಲೆಗೆ ಪ್ರಯಾಣಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

# ಪೂರ್ವಭಾವಿ ಸಭೆ

ರಾಯಚೂರು : ಜಿಲ್ಲಾಡಳಿತದ ವತಿಯಿಂದ ಫೆಬ್ರವರಿ 1ರಂದು ಮಾಡಿವಾಳ ಮಾಚಿದೇವ ಜಯಂತಿ ನಡೆಯಲಿದ್ದು, ಈ ಜಯಂತಿ ಅಂಗವಾಗಿ ಜನವರಿ 16ರ ಮಧ್ಯಾಹ್ನ 3.30ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ಸಮಾಜದ ಮುಖಂಡರು, ಸಂಬಂಧಿಸಿದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜನವರಿ 19ರಂದು ಜಿಲ್ಲಾಡಳಿತದಿಂದ ಮಹಾಯೋಗಿ ವೇಮನ ಜಯಂತಿ ರಾಯಚೂರು ಜನವರಿ 13 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 19ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

# ನಮ್ಮ ಪರಂಪರೆ ನಮ್ಮ ಹೆಮ್ಮೆಯಾಗಬೇಕು: ಸರಸ್ವತಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಮ್ಮ ದೇಶದ ಪ್ರತಿಭೆಗಳಿಗೆ ಸೂಕ್ತ ವೇದಿಕೆ, ತರಬೇತಿ ದೊರೆಯಬೇಕಿದೆ. ನಮ್ಮ ಪರಂಪರೆ ಹೆಮ್ಮೆಯಾಗಬೇಕು. ನನಗೆ ಏನಾದರೂ ಅಧಿಕಾರ ನೀಡಿದರೆ ನಮ್ಮ ಸಂಸ್ಥೆಗಳಂತೆ ಶಿಕ್ಷಣದ ಗುಣಮಟ್ಟ ಸುಧಾರಣೆ ಮಾಡಲು ಸಾಧ್ಯ ಎಂದು ಗದಗ ಮತ್ತು ವಿಜಯಪುರ ರಾಮಕೃಷ್ಣ–ವಿವೇಕಾನಂದ ಆಶ್ರಮದ ಅಧ್ಯಕ್ಷ, ಸ್ವಾಮಿ ನಿರ್ಭಯಾನಂದ ಸರಸ್ವತಿ ಹೇಳಿದ್ದಾರೆ.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾಧ್ಯಮದವರ ಪ್ರಶ್ನೆಗಳಿಗೆ ಉತ್ತರಿಸಿದರು.

ನಮ್ಮ ದೇಶದಲ್ಲಿನ ಈಗಿನ ಶಿಕ್ಷಣ ಪದ್ದತಿ ಫಲಿತಾಂಶಕ್ಕೆ ಇದೆ ಆದರೆ ಬದುಕಿನ ಚಿಂತನೆ ಕಲಿಸುತ್ತಿಲ್ಲ ವಿವೇಕಾನಂದರ ಉಪನ್ಯಾಸವನ್ನಾದರೂ ಹೆಚ್ಚಿನದಾಗಿ ಅಳವಡಿಸುವ ಅಗತ್ಯತೆ ಇದೆವಿಜ್

ಜವಾಬ್ದಾರಿ ಸ್ಥಾನದಲ್ಲಿ ಅನರ್ಹ ವ್ಯಕ್ತಿಗಳು ಕೂತಿದ್ದಾರೆ ಅದಕ್ಕಾಗಿ ಇಲ್ಲಿನ ಶಿಕ್ಷಣ ಪದ್ದತಿ ಹದಗೆಟ್ಟಿದೆ. ಭಾರತೀಯರಲ್ಲಿ ಬುದ್ದಿಶಕ್ತಿ ಹೆಚ್ಚಿದೆ ಆದರೆ ಅವರಿಗೆ ಸೂಕ್ತ ಭೋಧನೆ ಅಗತ್ಯತೆ ಇದೆ. ಭಾರತದಲ್ಲಿ ಇನ್ನೂ ಹೆಚ್ಚಿನ ವಿಜ್ಞಾನದ ಬಗ್ಗೆ ಸಂಶೋಧನೆ ಆಗಬೇಕಿದೆ. ಭಾರತೀಯ ಪರಂಪರೆ ಶಿಕ್ಷಣದಲ್ಲಿ ಅಳವಡಿಕೆಯಾಗಬೇಕು. ಭಾರತದ ಹೆಮ್ಮೆ ಜಾಗೃತವಾಗದಂತೆ ಪಠ್ಯದಲ್ಲಿ ನೋಡಿಕೊಂಡಿವೆ ಕಾಣದ ಕೈಗಳು ಈಗಿನ ಕೇಂದ್ರ ಸರ್ಕಾರ ಒಂದಿಷ್ಟು ಸನಾತನ ಧರ್ಮ ರಕ್ಷಣೆ ಮೂಲಕ ಒಂದಿಷ್ಟು ಭಾರತೀಯ ಪರಂರಪರೆಯ ಅರಿವು ಮೂಡಿಸುವ ಕೆಲಸ ಆಗುತ್ತಿದೆ ಎನ್ನಬಹುದು. ದೇಶದಲ್ಲಿ ಹೆಚ್ಚಿನ ವಿಜ್ಞಾನಕೇಂದ್ರಗಳು ಆರಂಭವಾಗಬೇಕಿದೆಂದರು.

ಆಧ್ಯಾತ್ಮದಬಗ್ಗೆ ಮಾತನಾಡುತ್ತ. ನಿಜ ಸ್ಥಿತಿಯಲ್ಲಿ ನಾವು ಬದುಕಯವುದೇ ಆಧ್ಯತ್ಮಿಕತೆ. ಹೇಗಿದ್ದೇವೆ ಹಾಗೆ ಬದುಕುವುದೇ ಆಧ್ಯಾತಿಕತೆ. ಸೃಷ್ಟಿಯಲ್ಲಿ ವಸ್ತು ತಾನು ಹೇಗಿದೆ ಹಾಗೆ ಬದುಕುಬೇಕು. ಅಧುನಿಕ ವಿಜ್ಞಾನ ಮತ್ತು ಭಾರತೀಯ ವೇದಾಂತ ಹೇಳುವುದು ಸಹ ಒಂದೇ ಆಗಿದೆ.

ನಮಗೆ ಈಗಿರುವ ಪ್ರಜ್ಞೆ ಸಾಲದು ಸೀಮಿತ ಪ್ರಜ್ಞೆಯಲ್ಲಿದ್ದು ಅದನ್ನು ಎತ್ತರಿಸಬೇಕಿದೆ. ಸರ್ವಂ ಬ್ರಹ್ಮ, ಮೊದಲು ನಮ್ಮನ್ನು ನಾವು ಅರಿಯಬೇಕು. ಇಲ್ಲದಿದ್ದರೆ ಸತ್ಯ ನಮ್ಮಿಂದ ದೂರವಾಗುತ್ತದೆ.

ನಿಜವಾದ ಜ್ಞಾನ ಆತ್ಮ, ಅದನ್ನು ಅರಿಯಲು ಆಧ್ಯಾತ್ಮ ಬೇಕು. ಇದನ್ನು ಧ್ಯಾನ, ತಪ, ಬ್ರಹ್ಮಚರ್ಯದಿಂದ ಪಡೆಯಬಹುದು. ಪಾಶ್ಚಿಮಾತ್ಯರು ಭಾರತದ ಬಗ್ಗೆ ಕೀಳಿರಿಮೆ ಇತ್ತು. ಅದನ್ನು ವಿವೇಕಾನಂದರು ತಮ್ಮ ಉಪನ್ಯಾಸದ ಮೂಲಕ ದೂರಮಾಡಿದರೆಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎನ್.ವೀರಭದ್ರಗೌಡ ಸ್ವಾಗತಿಸಿದರು. ಪಾಲ್ಗೊಂಡಿದ್ದ ಸಂಘದ ಸರ್ವ ಸದಸ್ಯರು ಶ್ರೀಗಳನ್ನು ಸನ್ಮಾನಿಸಿ ಗೌರವಿಸಿದರು.

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಕ್ರೀಡಾಪಟುಗಳಿಂದ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಅಂತರಾಷ್ಟ್ರೀಯ, ರಾಷ್ಟ್ರ ಮತ್ತು ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಸಹಾಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

2025–26ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡದ ಉಪ ಯೋಜನೆಯಡಿ 2024ನೇ ಕ್ಯಾಲೆಂಡರ್ ವರ್ಷದಲ್ಲಿ (ದಿನಾಂಕ:01–01–2024 ರಿಂದ 31–12–2024 ರವರೆಗೆ) ಅಂತರಾಷ್ಟ್ರೀಯ, ರಾಷ್ಟ್ರ, ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಸಹಾಯ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅಂತರಾಷ್ಟ್ರೀಯ ರಾಷ್ಟ್ರ, ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ನೀಡಲು ಅರ್ಜಿಗಳನ್ನು ಅಧಿಕೃ ಜಾಲತಾಣ: https://sevasindhu.karnataka.gov.in ನಲ್ಲಿ ಜನವರಿ 31ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಣಸಿನಕಾಯಿ ತಾಂತ್ರಿಕ ಅಧಿವೇಶನ ಯಶಸ್ವಿ

# ಹನಿ ನೀರಾವರಿ ಪದ್ಧತಿ ಅಳವಡಿಸಿಕೊಂಡರೆ ರೈತರಿಗೆ ಅನುಕೂಲ: ಶಶಿಕಾಂತ್ ಕೋಟಿಮನಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ರೈತರು ಮಲ್ಚಿಂಗ್ ಹಾಗೂ ವಿಡ್‌ಮೇಟ್, ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಗುಣಮಟ್ಟದ ಮೆಣಸಿನಕಾಯಿ ಬೆಳೆ ಬೆಳೆಯಬಹುದು ಎಂದು ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ್ ಕೋಟಿಮನಿ ಅವರು ಹೇಳಿದರು.

ತೋಟಗಾರಿಕೆ ಇಲಾಖೆ ಹಾಗೂ ಹಗರಿಯ ಕೃಷಿ ವಿಜ್ಞಾನ ಕೇಂದ್ರ ಇವರ ಸಹಯೋಗದಲ್ಲಿ ಕುರುಗೋಡು ತಾಲ್ಲೂಕಿನ ಸಿದ್ದಮ್ಮನಹಳ್ಳಿ ಗ್ರಾಮ, ಮಾರುತಿ ಕ್ಯಾಂಪ್ ನ ಬಿಳುಬಾವಿ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಹೋಬಳಿ ಮಟ್ಟದ ಮೆಣಸಿನಕಾಯಿ ಕ್ಷೇತ್ರೋತ್ಸವ ಹಾಗೂ ತಾಂತ್ರಿಕ ಸಲಹೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕುರುಗೋಡು ತಾಲ್ಲೂಕಿನಲ್ಲಿ 15,000 ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯನ್ನು ರೈತರು ಬೆಳೆಯುತ್ತಿದ್ದಾರೆ. ಸಿದ್ಧಮ್ಮನಹಳ್ಳಿ ಗ್ರಾಮದಲ್ಲಿ 2345 ಹೆಕ್ಟರ್ ಪ್ರದೇಶದಲ್ಲಿ ಮೆಣಸಿನಕಾಯ ಬೆಳೆ ಬೆಳೆಯುತ್ತಿದ್ದು, ರೈತರು ಕಾರ್ಯಾಗಾರದ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಹಗರಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ಪಾಲಯ್ಯ ಅವರು ಮಾತನಾಡಿ, ಮೆಣಸಿನಕಾಯಿ ಬೆಳೆಯ ಬೇಸಾಯ ಕ್ರಮಗಳಲ್ಲಿ ಬದಲಾವಣೆ, ತಳಿ ಆಯ್ಕೆ, ಸಮಗ್ರ ಕೀಟ ಮತ್ತು ಪೀಡೆ ನಿರ್ವಹಣೆ, ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಂಡರೆ ಉತ್ತಮ ಗುಣಮಟ್ಟದ ಬೆಳೆ ಬೆಳೆಯಬಹುದು ಎಂದರು.

ರೈತರು ಹೊಲದ ಬದುವಿನಲ್ಲಿ ಬಾರ್ಡರ್ ಬೆಳೆಗಳಾದ ಅಲಸಂದಿ, ಮೆಕ್ಕೆಜೋಳ, ಸಜ್ಜೆ, ತೋಗರಿ, ಅಲ್ಲಲ್ಲಿ ಚೆಂಡು ಹೂವು ನೆಡುವುದರ ಮೂಲಕ ಕೀಟಗಳನ್ನು ಹತೋಟಿಗೆ ತರಬಹುದು ಎಂದು ಮಾಹಿತಿ ನೀಡಿದರು.

ಮಣ್ಣು ವಿಜ್ಞಾನಿ ಡಾ.ರವಿ ಅವರು ಮಾತನಾಡಿ, ರೈತಾಪಿ ವರ್ಗ ಮಣ್ಣಿನ ಗುಣಮಟ್ಟವನ್ನು ಹೆಚ್ಚಿಸುವ ಕುರಿತು ಮಾಹಿತಿ ನೀಡುವ ಮೂಲಕ ಮಣ್ಣಿನಲ್ಲಿ ಅದರದೇ ಆದ ಲವಣ ಪೋಷಕಾಂಶಗಳ ಗುಣ ಹೊಂದಿರುತ್ತದೆ ಎಂದರು.

ರೈತರು ರಾಸಾಯನಿಕ ಗೊಬ್ಬರಗಳನ್ನು ಕಡಿಮೆ ಮಾಡಿ ಸಾವಯವ ಕೃಷಿಗೆ ಮಹತ್ವವನ್ನು ನೀಡಬೇಕು. ಮಣ್ಣಿನ ಗುಣಮಟ್ಟ ಹೆಚ್ಚಿಸಲು ರೈತರು ಮಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು. ಇದರಿಂದ ಯಾವ ಪೋಷಕಾಂಶಗಳು ಕಡಿಮೆಯಾಗಿದೆ. ಅದನ್ನು ಮಾತ್ರ ಬಳಸಿಕೊಂಡು ಉತ್ತಮ ರೀತಿಯ ಬೆಳೆ ಬೆಳೆಯಲು ಸಾಧ್ಯ ಎಂದು ತಿಳಿಸಿದರು.

ಒಮ್ಮೆ ಮಣ್ಣಿನ ಪರೀಕ್ಷೆ ಮಾಡಿದರೆ ಮೂರು ವರ್ಷಗಳವರೆಗೆ ಸಕ್ರಿಯರಾಗಿ ರಾಸಾಯನಿಕ ಗೊಬ್ಬರಗಳನ್ನು ಕಡಿಮೆ ಮಾಡಬಹುದು ಎಂದು ಮಾಹಿತಿ ನೀಡಿದರು. ಡಾ.ಗೋವಿಂದಪ್ಪ ಅವರು ಮಾತನಾಡಿ, ಶೀಲಿಂಧ್ರ ಹಾಗೂ ಕೀಟಗಳನ್ನು ಗುರುತಿಸಿ ರೋಗಕ್ಕೆ ತಕ್ಕ ಔಷಧಿಗಳು ಮಾತ್ರ ಸಿಂಪರಣೆ ಮಾಡಬೇಕು. ರೋಗ ಮತ್ತು ಕೀಟಗಳನ್ನು ನರ್ಸರಿ ಹಂತದಿಂದಲೇ ಹತೋಟಿಗೆ ತರಬೇಕು ಹಾಗೂ ಬೆಳೆಯನ್ನು ಸಂರಕ್ಷಿಸಿಕೊಳಬೇಕು ಎಂದರು.

ನಾಟಿ ಮಾಡಿದ 30 ದಿನಗಳ ನಂತರ ಪ್ರತಿ ಎಕರೆಗೆ 10 ರಿಂದ 15 ರವರೆಗೆ ಅಂಟು ಬಲೆಗಳನ್ನು ಹಾಕಿಕೊಳ್ಳಬೇಕು. ಬಯೋಜೀವಿಗಳಾದ ಸುಡೋಮೋನಾಸ್, ಟ್ರೈಕೋಡರ್ಮ, ವರ್ಟಿಸಿಲಿಯಮ್ ಲೇಖನಿ, ಬೆವೇರಿಯಾ ಬಸ್ಸಿಯಾನಗಳನ್ನು ಸಿಂಪರಣೆ ಮಾಡುವುದರ ಮೂಲಕ ಮೆಣಸಿನಕಾಯಿ ಬೆಳೆಯ ರೋಗಗಳನ್ನು ಹತೋಟಿಗೆ ತರಬಹುದು ಎಂದು ವಿವರಿಸಿದರು.

ಬಳ್ಳಾರಿ ತಾಲ್ಲೂಕು ತೋಟಗಾರಿಕೆ ನಿರ್ದೇಶಕ ಹಾಗೂ ಕಾರ್ಯಕ್ರಮ ಸಂಯೋಜಕ ಜಾತ್ರಶಂಕ್ರಪ್ಪ ಅವರು ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.

ಕಾರ್ಯಾಗಾರದಲ್ಲಿ ತೋಟಗಾರಿಕೆ ಇಲಾಖೆಯ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ರಾಘವೇಂದ್ರ.ಕೆ., ಪ್ರವೀಣ್ ಕುಮಾರ್ ಎನ್., ರೈತರಾದ ಇಬ್ರಾಹಿಂ, ವೀರಭದ್ರಗೌಡ, ಹನುಮಂತ ರಾವ್, ಸೀತಾರಾಮ್ ರೆಡ್ಡಿ, ಮಲ್ಲನಗೌಡ.ಎಸ್., ಬಲರಾಮ್ ಹಾಗೂ ಇತರರು ಇದ್ದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಿಗೆ ಸನ್ಮಾನ ಮಾಡಲಾಯಿತು.

# ಬಿ.ಕೆ.ಸಿಂಗ್ ನೇತೃತ್ವದ ತಂಡ ಘಟನಾ ಸ್ಥಳಕ್ಕೆ ಭೇಟಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬ್ಯಾನರ್ ಗಲಾಟೆ ಪ್ರಕರಣಕ್ಕೆ ಸಂಬಂಧಿಸಿ ಸರ್ಕಾರ ಇಡಿ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿದ್ದು, ಮಂಗಳವಾರ ನಗರಕ್ಕೆ ಆಗಮಿಸಿದ ಸಿಐಡಿ ಎಡಿಜಿಪಿ ಬಿ.ಕೆ.ಸಿಂಗ್ ಅವರ ನೇತೃತ್ವದ ತಂಡ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಬ್ಯಾನರ್ ಗಲಾಟೆ ಪ್ರಕರಣಕ್ಕೆ ಸಂಬಂಧಿಸಿ ಒಟ್ಟು 6 ಪ್ರಕರಣಗಳು ದಾಖಲಾಗಿದ್ದು, ಅದರಲ್ಲಿ ಎರಡು ಮಾನನಷ್ಟ ಮೊಕದ್ದಮೆ ಪ್ರಕರಣ ಬಿಟ್ಟು ಉಳಿದ 4 ಪ್ರಕರಣಗಳನ್ನು ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ. ಕಳೆದ ಎರಡು ದಿನಗಳಿಂದ ನಗರದಲ್ಲಿ ಬೀಡು ಬಿಟ್ಟು, ಘಟನಾ ಸ್ಥಳ, ಠಾಣೆಯಲ್ಲಿ ದಾಖಲಾದ ಪ್ರಕರಣಗಳ ಮಾಹಿತಿಯನ್ನು ಕಲೆ ಹಾಕಿ ಎಲ್ಲ ಆಯಾಮಗಳಿಂದ ತನಿಖೆ ನಡೆಸಲು ಮುಂದಾಗಿದ್ದಾರೆ. ಇದರ ಮಧ್ಯೆ ಘಟನೆಯಲ್ಲಿ ಗುಂಡಿನ ದಾಳಿಯಲ್ಲಿ ಮೃತಪಟ್ಟ ರಾಜಶೇಖರ ರೆಡ್ಡಿ ಪ್ರಕರಣ ಸೇರಿ ಘಟನೆಯ ಸಂಪೂರ್ಣ ತನಿಖೆ ನಡೆಸಲು ಸಿಐಡಿಯ ಸಹಾಯಕ ಪ್ರಧಾನ ನಿರ್ದೇಶಕ ಬಿ.ಕೆ.ಸಿಂಗ್ ಅವರ ನೇತೃತ್ವದ ತಂಡ ನಗರಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು. ಸಿಂಗ್ ಅವರ ಜೊತೆ ಸಿಐಡಿ ಎಸ್ಪಿ ಹರ್ಷ ಪ್ರಿಯ ಸೇರಿದಂತೆ ಪೋಲೀಸ್ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ದೇಶದ ಆರ್ಥಿಕ ಸ್ವಾವಲಂಬನೆಗೆ ದಾರಿದಿಪವಾಗುತ್ತದೆ: ಅಯೂಬ್ಖಾನ್

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು:



ಜನವರಿ 13.ತಾಲೂಕಿನ ನೇರಳಕುಪ್ಪೆ ಬಿಲ್ಲನ ಹೊಸಹಳ್ಳಿ ಹಾಡಿಗೆ ಸೌರಶಕ್ತಿ ಮತ್ತು ಜೈವಿಕ ಇಂಧನ ಮೈಕ್ರೋ ಗ್ರಿಡ್ ಘಟಕ ನೋಡಲು ಕರ್ನಾಟಕ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್. ಇ.ಸುದೀದ್ರ ಹಾಗು ಮೈಸೂರು ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ಖಾನ್ ಭೇಟಿ ನೀಡಿದರು.

ನಂತರ ಸುದ್ದಿಗಾರೊಂದಿಗೇ ಮಾತನಾಡಿ ಮೈಕ್ರೋ ಗ್ರಿಡ್ ಸ್ಥಾಪಿಸಿ 70 ಆದಿವಾಸಿ ಕುಟುಂಬಗಳಿಗೆ ತಲಾ 3ದೀಪ ಗಳನ್ನು ನೀಡಿ ಕಾಡಂಚಿನ ಹಾಡಿ ರಾತ್ರಿಹೊತ್ತಲ್ಲೂ ಬೆಳಕಹೊಂದಲು ಆಶ್ರಯ ಹಸ್ತ ಟ್ರಸ್ಟ್ ಅನುಕೂಲ ಮಾಡಿಕೊಟ್ಟ ಮೈಸೂರು ಎನ್ ಐ ಇ ಕಾಲೇಜಿನ ಪ್ರೊ. ಶಾಮ್ ಸುಂದರ್ ಘಟಕ ಸ್ಥಾಪನೆ ಮತ್ತು ನಿರ್ವಹಣೆ ಬಗ್ಗೆ ವಿವರಿಸಿದರು. ಇದು ಒಳ್ಳೆಯ ಹಾಗು ಭರವಸೆ ಮೂಡಿಸುವ ಪ್ರಯೋಗ. ಇಂತ ಘಟಕಗಳು ದೇಶವ್ಯಾಪಿ ಹರಡಿ ಸ್ವಾವಲಂಬನೆಗೆ ಹಾಗು ನವೀಕರಿಸಬಹುದಾದ ಇಂಧನ ವೃದ್ಧಿಸಲು ಪಡಿಸಲು ಸಹಾಯವಾಗಿ ದೇಶದ ಆರ್ಥಿಕ ಸ್ವಾವಲಂಬನೆಗೆ ದಾ–ರಿಯಾಗುತ್ತದೆ ಎಂದರು.

ಕ್ಯಾಂಪಸ್ ನಲ್ಲಿ ಇಂತ ಸೌರ ಜೈವಿಕ ವಿದ್ಯುತ್ ಘಟಕ ಸ್ಥಾಪಿಸಿ ಸ್ವಾವಲಂಬಿ ಆಗಲು ಕನುಸು ಹೊತ್ತು ಇಲ್ಲಿ ಬಂದಿರುವೆ. ಇಂದು ಅಧ್ಯಾನ್ಹ ಮೈಸೂರಿಗೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ಹಾಗು ಕಾಂಗ್ರೆಸ್ ಧುರೀಣ ರಾಹುಲ್

ಗಾಂಧಿ ಭೇಟಿ ನೀಡುವರು, ಅವರಜತೆ ಚರ್ಚಿಸುವುದಾಗಿ ತಿಳಿಸಿದರು. ಹಾಗೂಡೀಡ್ ನಿರ್ದೇಶಕ ಶ ಹಾಡಿಜನರು ಅಧ್ಯಕ್ಷರ ಮೂಲಕ ಆದಿವಾಸಿಗಳಿಗೆ ಈ ಸಾಲಿನಲ್ಲಿ ವಿಶೇಷ ಅನುದಾನವನ್ನು ರಾಜ್ಯ ಮುಖ್ಯಮಂತ್ರಿಗಳು ಬಜೆಟ್ನ ಲ್ಲಿ ನೀಡಿದರು. ಈ ಸಂದರ್ಭದಲ್ಲಿ ಜೈವಿಕ ಇಂಧನ ಯೋಜನೆಗೆ ಹೆಚ್ಚಿನ ಅನುದಾನಕ್ಕೆ ಅಗ್ರಹಿಸಲು ವಿನಂತಿಸಿದರು.

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಮಾನ್ಯ ಶ್ರೀ ಎಸ್.ಇ ಸುಧೀಂದ್ರ ಮಾತನಾಡಿ ನಾಗರಹೊಳೆ ಅರಣ್ಯದಂಚಿನಲ್ಲಿರುವ ಬುಡಕಟ್ಟು ಪ್ರದೇಶದಲ್ಲಿರುವ ಮನೆಗಳಲ್ಲಿ ಹೈಬ್ರಿಡ್ ಜೈವಿಕ ಇಂಧನ ಮತ್ತು ಸೌರಶಕ್ತಿ ಘಟಕದಿಂದ ಇಲ್ಲಿನ ಜನರಿಗೆ ವಿದ್ಯುತ್ ಹರಿಸುವ ಕಾರ್ಯವಾಗುತ್ತಿದ್ದು, ಇದನ್ನೇ ಮಾದರಿಯನ್ನಾಗಿ ಕೈಗೊಳ್ಳುವ ಮೂಲಕ ಬೆಂಗಳೂರು ನಗರದಲ್ಲಿಯೂ ಜೈವಿಕ ಇಂಧನ ಬಳಕೆ ಮಾಡುವಂತಾಗಲಿ ಎಂದು ಅವರು ತಿಳಿಸಿದರು.

ಹೈಬ್ರೀಡ್ ವಿದ್ಯುದ್ಧೀಕರಣ ಮತ್ತು ಹೈಬ್ರಿಡ್ ವಿದ್ಯುದ್ಧೀಕರಣ ಪ್ರಾತ್ಯಕ್ಷಿಕೆ ಯೋಜನೆ ಕುರಿತಂತೆ ನೇರಳಕುಪ್ಪೆ ಗ್ರಾಮ ಪಂಚಾಯಿತಿಯ ಬಿಲ್ಲೇನ ಹೊಸಹಳ್ಳಿ ಹಾಡಿಗೆ ಭೇಟಿ ನೀಡಿ ಮೊದಲ ಬಾರಿಗೆ ಅನುಷ್ಠಾನಗೊಂಡಿರುವ ಜೈವಿಕ ಇಂಧನ ಮತ್ತು ಸೌರಶಕ್ತಿ ಘಟಕವು ಕಾರ್ಯನಿರ್ವಹಿಸುವ ಮಾದರಿಯನ್ನು ವೀಕ್ಷಿಸಿದರು.

ಬಳಿಕ ಜೈವಿಕ ಇಂಧನದಿಂದ ವಿದ್ಯುತ್ ಉತ್ಪಾದನೆಯಾಗಿ ಮನೆಗಳಲ್ಲಿ ಬೆಳಕು ನೀಡುತ್ತಿರುವುದರ ಕುರಿತಾಗಿ ಬುಡಕಟ್ಟು ಮನೆಗಳಿಗೆ ಭೇಟಿ ನೀಡಿ ಪ್ರಾಯೋಗಿಕವಾಗಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಾ ಪಂ ಇಓ ಹೊಂಗಯ್ಯ,ಕೆ ಇ ಬಿ ಎ ಇ ಇ.,ಡೀಡ್ ಸಂಸ್ಥೆಯ ನಿರ್ದೇಶಕರು ಡಾ. ಎಸ್ ಶ್ರೀಕಾಂತ್, ಹಾಗು ಪಂಚಾಯತ್ ಅಧಿಕಾರಿಗಳು ಹಾಡಿ ನಿವಾಸಿಗಳು ಉಪಸ್ಥಿತರಿದ್ದರು

# ಪಠ್ಯದ ಜೊತೆಗೆ ಕ್ರೀಡೆಗೆ ಉತ್ತೇಜನ ಕೊಟ್ಟಾಗ ಮಾತ್ರ ಮಕ್ಕಳ ಬೆಳವಣಿಗೆ ಸಾಧ್ಯ: ಸಂಗಮೇಶ ಸಜ್ಜನ




• ಮಲ್ಲಮ್ಮ ನುಡಿ ಹುಣಸಗಿ:

ಪ್ರತಿಯೊಬ್ಬ ಮಗುವಿಗೂ ಪಠ್ಯದ ಜೊತೆ ಪಠ್ಯೇತರ ಚಟುವಟಿಕೆಗಳ ಮೂಲಕ ಕ್ರೀಡೆಗೆ ಉತ್ತೇಜನ ನೀಡಿದರೆ ಮಾತ್ರ ಅವನ ಸರ್ವಾಂಗೀಣ ಅಭಿವೃದ್ಧಿ ಸಾಧ್ಯವಾಗುತ್ತದೆ ಜೊತೆಗೆ ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಸಹಕಾರಿಯಾಗುತ್ತದೆ ಎಂದು ಸ್ಥಳೀಯ ಉದ್ಯಮಿ ಸಂಗಮೇಶ ಸಜ್ಜನ ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿರುವ ಆಶೀರ್ವಾದ ಗ್ಲೋಬಲ್ ಶಾಲಾ ವಾರ್ಷಿಕ ಕ್ರೀಡೋತ್ಸವ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಕ್ರೀಡಾ ಜ್ಯೋತಿ ಬೆಳಗುವದರ ಮೂಲಕ ಕ್ರೀಡೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಆಟದ ಮೈದಾನದಲ್ಲಿ ನಿಮ್ಮ ದೇಹವನ್ನ ದಂಡಿಸಿ ನಿಮ್ಮ ಮನಸ್ಸು ಹಾಗೂ ನಿಮ್ಮ ಚಿತ್ತವನ್ನು ಸಮತೋಲನದಲ್ಲಿ ಇಟ್ಟುಕೊಳ್ಳಲು ಕ್ರೀಡೆ ಮುಖ್ಯ ಹೀಗಾಗಿ ನಾವು ಮಾನಸಿಕವಾಗಿ ಹಾಗೂ ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಸಹಕಾರಿಯಾಗುತ್ತದೆ ಪೋಷಕರು ಈ ನಿಟ್ಟಿನಲ್ಲಿ ಮಗುವಿಗೆ ಹೆಚ್ಚಿನ ಉತ್ತೇಜನ ನೀಡಬೇಕೆಂದರು ಎಂದು ತಿಳಿಸಿದರು.

ಶಾಲೆಯ ಪ್ರಾಂಶುಪಾಲರಾದ ಸೌದಾಗರ್ ಪವರ್ ಅವರು ಮಾತನಾಡಿ ರಾಜ್ಯಮಟ್ಟದ ಅಂತರಾಷ್ಟ್ರೀಯ ಮಟ್ಟದ ಕ್ರೀಡೆಯಲ್ಲಿ ಸಾಧನೆ ಮಾಡಿದ ಸಾಧಕರ ಬಗ್ಗೆ ಮಕ್ಕಳಿಗೆ ಮಾಹಿತಿ ನೀಡಿದರು.

ಮಕ್ಕಳಿಗೆ ಮೊಬೈಲ್ ಬಳಕೆ ಮಾಡುವ ಮನೋಭಾವವನ್ನು ಬಿಡಬೇಕು, ಗ್ರಾಮೀಣ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಸ್ಪರ್ಧಾ ಮನೋಭಾವನೆ ಬೆಳಿಸಿಕೊಳ್ಳಬೇಕು.

ಸಂಸ್ಥೆಯ ಉಪಾಧ್ಯಕ್ಷರಾದ ಶ್ರೀ ಚನ್ನಬಸವನಗೌಡರವರು, ಈ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಕ್ರೀಡೆ ಒಂದು ಜೀವನದ ಮುಖ್ಯ ಭಾಗವಾಗಿದ್ದು ಎಲ್ಲಾ ಮಕ್ಕಳು ಈ ಒಂದು ಕ್ರೀಡಾಕೂಟದಲ್ಲಿ ಹುಮ್ಮಸ್ಸಿನಿಂದ ಭಾಗವಹಿಸಿ, ಮಕ್ಕಳು ಮನೆಗೆ ಹೋದ ನಂತರ ಮೊಬೈಲ್ ನಲ್ಲಿ ಫ್ರೀ ಫೈಯರ್ ಶೂಟಿಂಗ್ ಗೇಮ್ಸ್, ಮುಂತಾದ ಆಟಗಳಿಗೆ ಅಡಿಕ್ಟ್ ಆಗಿದ್ದು, ಯಾರು ಮೊಬೈಲ್ ನಲ್ಲಿ ಇಂತಹ ಆಟಗಳನ್ನು ಮೊಬೈಲ್ ನಲ್ಲಿ ಆಡಬಾರದು, ಶಾಲಾ ಸಮಯದಲ್ಲಿ ನಿಮ್ಮ ಗೆಳೆಯರೊಂದಿಗೆ ಮನೆಗೆ ಹೋದ ನಂತರ ನಿಮ್ಮ ಗೆಳೆಯರೊಂದಿಗೆ ಕ್ರೀಡೆ ಈಜು ಮುಂತಾದವುಗಳಲ್ಲಿ ನಿಮ್ಮನ್ನು ನೀವು ತೊಡಗಿಸಿಕೊಳ್ಳಿ ಇದರಿಂದ ನಿಮ್ಮ ಮನಸ್ಸು ಮತ್ತು ನಿಮ್ಮ ದೇಹ ತುಂಬಾ ಚುರುಕುಗೊಳ್ಳುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಬ್ರಭು ಸಜ್ಜನ ಶರಣು ಬಳಿ, ಶಾಲೆಯ ಶಿಕ್ಷಕರುಗಳಾದ, ಶಿವಾನಂದ ಗುಂಡಣ್ಣವರ, ಶಂಕರ ಪವರ, ಹಾಗೂ ವಿದ್ಯಾರ್ಥಿಗಳು ಇದ್ದರು.

# ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಿ: ಬಸವರಾಜ ಅಗ್ನಿ

• ಮಲ್ಲಮ್ಮ ನುಡಿ ಹುಣಸಗಿ:



ಸ್ವಾಮಿ ವಿವೇಕಾನಂದರ ಜನ್ಮ ದಿನವನ್ನು ನಾವು ರಾಷ್ಟ್ರೀಯ ಯುವ ದಿನವನ್ನಾಗಿ ಆಚರಿಸುತ್ತೇವೆ. ವಿವೇಕಾನಂದರ ಸ್ಫೂರ್ತಿ ಪಡೆದು–ಕೊಂಡು ಯುವ ಜನತೆ ಮುಂದೆ ಬರುವುದು ಅಗತ್ಯವಿದೆ ಎಂದು ಉಪನ್ಯಾಸಕ ಬಸವರಾಜ ಅಗ್ನಿ ಹೇಳಿದರು.

ಪಟ್ಟಣದ ಬಿಲ್ಲವ ಪದವಿ ಹಾಗೂ ಸ್ನಾತಕೋತ್ತರ ಪದವಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ 163ನೇ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನ ಆಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿ, ಏಳು ಎದ್ದೇಳು ಗುರಿ ಮುಟ್ಟುವತನಕ ನಿಲ್ಲದಿರು ಎಂದು ಹೇಳಿ ಯುವಕರನ್ನು ಬಡಿದೇಬ್ಬಿಸುವ ನುಡಿ ಇಂದಿಗೂ ಸ್ವಾಮಿ ವಿವೇಕಾನಂದ ಅಂ–ದಾಗ ನೆನಪಿಗೆ ಬರುವುದು. ಯುವಕರು ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುದು. ಅವಕಾಶಗಳು ಇಲ್ಲದಿದ್ದರೆ ಸೃಷ್ಟಿಸಿಕೊಳ್ಳಬೇಕು. ಅದಾಗದಿದ್ದರೆ ಅವಕಾಶಗಳನ್ನು ಕಿತ್ತುಕೊಂಡು ನೀವು ಬೆಳೀಬೇಕು ಎಂದರು.

ಇನ್ನೊರ್ವ ಅತಿಥಿ ಸರ್ಕಾರಿ ಪದವಿ ಮಹಾವಿದ್ಯಾಲಯ ಪ್ರಾಚಾರ್ಯ ಶರಣಕುಮಾರ್ ಮಾತನಾಡಿ, ಬ್ರಿಟಿಷರು ನಮ್ಮನ್ನು ಗುಲಾಮ ಮನಸ್ಥಿತಿಗೆ ತಳ್ಳಿದ್ದರು. ಆ ಗುಲಾಮ್ ಮನಸ್ಸಿನಿಂದ ಹೊರಬರುವಂತೆ ಸ್ವಾಮಿ ವಿವೇಕಾನಂದರ ನುಡಿಗಳು ಸ್ಫೂರ್ತಿ. ನಿಮ್ಮನ್ನು ನೀವು ಜಯಸಿ ಇಡೀ ಜಗತ್ತೇ ನಿಮ್ಮದಾಗುವುದು. ಭಾರತ ಕಂಡ ಉತ್ತಕೃಷ್ಟ ಆದ್ಯಾತ್ಮಿಕ ನಾಯಕ. ಸಮಾಜ ಸುಧಾರಣೆಯಲ್ಲಿ ಅಗ್ರಗಣ್ಯರು ಸ್ವಾಮಿ ವಿವೇಕಾನಂದ ಎಂದರು.

ವಿದ್ಯಾರ್ಥಿ ಶ್ರೀಹರಿ ಶಂಕ್ರಪ್ಪಗೋಳ ಸ್ವಾಮಿ ವಿವೇಕಾನಂದರ ಕುರಿತು ಮಾತನಾಡಿದರು. ಪ್ರಾಚಾರ್ಯ ಭೀಮಣ್ಣ ಹುಬ್ಬಳ್ಳಿ ಪ್ರಾಸ್ಥವಿಕ ನುಡಿಯಲ್ಲಿ ರಾಷ್ಟ್ರನಿರ್ಮಾಣದಲ್ಲಿ ಯುವಕರ ಪಾತ್ರದೊಡ್ಡದು. ಸ್ವಾಮಿ ವಿವೇಕಾನಂದರ ಆದರ್ಶ ಮತ್ತು ಅವರ ನುಡಿಯಿಂದ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಮುಖಂಡ ನಂದಪ್ಪ ಪಿರಾಪುರ ಅಧ್ಯಕ್ಷತೆವಹಿಸಿ ಮಾತನಾಡಿದರು. ಅನಿತಾ ಸ್ವಾಗತಿಸಿದರು. ಪ್ರಕಾಶ ಭಜಂತ್ರಿ ನಿರೂಪಿಸಿದರು. ಗೌರಮ್ಮ ವಂದಿಸಿದರು. ಈ ಸಂದರ್ಭದಲ್ಲಿ ಐಟಿಐ ಪ್ರಚಾರ್ಯರಾದ ಬಸವರಾಜ್ ಮರೋಳ, ವಿನಾಯಕರಾವ್ ಕುಲಕರ್ಣಿ ಸೇರಿದಂತೆ ಮಹಾವಿದ್ಯಾಲಯದ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ದೃಶ್ಯ ಚಿತ್ರಕಲಾ ಶಿಬಿರಕ್ಕೆ ಶಾಸಕ ಚಿಮ್ಮನಕಟ್ಟಿ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ರಾಷ್ಟ್ರೀಯ ಚಾಲುಕ್ಯ ಉತ್ಸವ–2026ರ ಅಂಗವಾಗಿ ಹಮ್ಮಿಕೊಂಡ ದೃಶ್ಯ ಚಿತ್ರಕಲಾ ಶಿಬಿರಕ್ಕೆ ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಂಗಳವಾರ ಚಾಲನೆ ನೀಡಿದರು.ಬಾದಾಮಿ ನಗರದ ಪುರಾತತ್ವ ಇಲಾಖೆಯ ವಸ್ತು ಸಂಗ್ರಹಾಲಯದಲ್ಲಿ ಹಮ್ಮಿಕೊಂಡಿದ್ದ ದೃಶ್ಯ ಚಿತ್ರಕಲಾ ಶಿಬಿರವನ್ನು ಚಿತ್ರಕಲೆ ಬಿಡಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಶಾಸಕರು ಭಾಷೆ ಮತ್ತು ಲಿಪಿ ಹುಟ್ಟುವ ಪೂರ್ವದಲ್ಲಿ ಚಿತ್ರಕಲೆ ಪೂರ್ವದಿಂದ ಬಂದಿದ್ದು, ಮಾನವನ ಮಾನಸಿಕ ನೆಮ್ಮದಿ ಸದೃಢತೆಗೆ ಸಂಗೀತ, ಚಿತ್ರಕಲೆ ಸಹಕಾರಿಯಾಗಿದೆ. ಸಂಗೀತದಿಂದ ಮನುಷ್ಯನ ಬುದ್ಧಿಮಟ್ಟ ವಿಕಸಿತಗೊಳ್ಳಲು ಸಾಧ್ಯವಿದೆ.ಚಿತ್ರಕಲೆಯು ಕೇವಲ ಚಿತ್ರಿಸುವುದಲ್ಲ ಅದು ಮಾನವನ ಇತಿಹಾಸ, ಸಂಸ್ಕೃತಿ, ನಂಬಿಕೆಗಳು ಹಾಗೂ ಭಾವನೆಗಳನ್ನು ದೃಶ್ಯ ರೂಪದಲ್ಲಿ ತೋರಿಸುವ ಒಂದು ಅದ್ಭುತ ಕಲೆಯಾಗಿದೆ ಎಂದು ತಿಳಿಸಿದರು.ನಿವೃತ್ತ ಚಿತ್ರಕಲಾ ಶಿಕ್ಷಕ ಎಮ್.ಆಯ್ ಬಾರಾವಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯ ಮೇಲೆ ಚಿತ್ರಕಲಾ ನಿರ್ದೇಶಕಿ ಸಂಗೀತಾ ಬಸವರಾಜ ಕೋಲಾರ, ಬಾದಾಮಿ ಪಿ.ಎಸ್.ಐ. ಹನಮಂತ ನೆರಳೆ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ ಹಿರೇಮಠ, ಮುಖಂಡ ಅಶೋಕ ಕೋಟನಕರ, ನಿವೃತ್ತ ಮುಖ್ಯಶಿಕ್ಷಕ ಎಸ್.ಎಂ.ಹಿರೇಮಠ, ಎ.ಜಿ ಇನಾಮದಾರ ಉಪಸ್ಥಿತರಿದ್ದರು. ಸ್ಥಳೀಯ ಚಿತ್ರ ಕಲಾವಿದರನ್ನು ಶಾಸಕರು ಆತ್ಮೀಯವಾಗಿ ಹೂ ನೀಡುವುದರ ಮೂಲಕ ಗೌರವಿಸಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಅಶೋಕ ನಾಗತಾಣ, ಚಿತ್ರಕಲಾವಿದರಾದ ಶೌಕತ್ತ ವಾಚಮೇಕರ, ಎಚ್,ಕೆ ಹುಡೇದ,ಗೋಪಾಲ ದೇವರಡ್ಡಿ,ಬಸವರಾಜ ಮರಿಗೌಡರ, ಮಹಾದೇವ ಜಗತಾಪ, ದಿನೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅದ್ದೂರಿ ಚಾಲುಕ್ಯ ಉತ್ಸವ ಆಚರಣೆಗೆ ಕರೆ | ಉತ್ಸವಕ್ಕೆ ಮುಖ್ಯಮಂತ್ರಿಗಳಿಂದ ಚಾಲನೆ

# ಜಿಲ್ಲೆಯಾದ್ಯಂತ ಚಾಲುಕ್ಯ ರಥಯಾತ್ರ ಸಂಚಾರ : ತಿಮ್ಮಾಪೂರ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬಾದಾಮಿ ಐತಿಹಾಸಿಕ ಚಾಲುಕ್ಯ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅದ್ದೂರಿಯಾಗಿ ಚಾಲನೆ ನೀಡಲಿದ್ದು, ಉತ್ಸವದ ಅಂಗವಾಗಿ ಜನವರಿ 16 ರಿಂದ ಚಾಲುಕ್ಯ ರಥಯಾತ್ರೆ ಜಿಲ್ಲೆಯಾದ್ಯಂತ ಸಂಚರಿಸಲಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪೂರ ಹೇಳಿದರು.




ಬಾದಾಮಿ ನಗರದ ಖಾಸಗಿ ಹೊಟೆಲ್‌ನಲ್ಲಿ ಸೋಮವಾರ ಜರುಗಿದ ಚಾಲುಕ್ಯ ಉತ್ಸವ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಚಾಲುಕ್ಯರ ಗತವೈಭವ ಸ್ಮರಿಸುವ ನಿಟ್ಟಿನಲ್ಲಿ ಜನವರಿ 19 ರಿಂದ 21 ವರೆಗೆ ಬಾದಾಮಿ, ಪಟ್ಟದಕಲ್ಲ ಹಾಗೂ ಐಹೊಳೆಯಲ್ಲಿ ಜರುಗಲಿರುವ ಉತ್ಸವದಲ್ಲಿ ಸ್ಥಳೀಯರು ಸೇರಿದಂದೆ, ರಾಷ್ಟ್ರೀಯ, ಅಂತರರಾಷ್ಟ್ರೀಯ ಕಲಾವಿದರು ಭಾಗವಹಿಸಲಿದ್ದಾರೆ ಎಂದರು.

ಚಾಲುಕ್ಯರ ಗತವೈಭವದ ಹಬ್ಬದ ನಿಮಿತ್ಯವಾಗಿ ಜನವರಿ 16 ರಂದು ಚಾಲುಕ್ಯ ರಥಯಾತ್ರೆಗೆ ಬಾಗಲಕೋಟೆಯಲ್ಲಿ ಚಾಲನೆ ನೀಡಲಾಗುತ್ತಿದ್ದು, ಬಾದಾಮಿ ಸೇರಿದಂತೆ ಎಲ್ಲ ತಾಲೂಕುಗಳಲ್ಲಿ ಹಾಗೂ ಪಟ್ಟದಕಲ್ಲ, ಐಹೊಳೆಗಳಲ್ಲಿಯೂ ಸಹ ಸಂಚರಿಸಿ ಕೊನೆಗೆ ಜನವರಿ 19 ರಂದು ಬಾದಾಮಿಯಲ್ಲಿ ರಥಯತ್ರಾರೆಯ ಜೊತೆಗೆ ವಿವಿಧ ಜನಪದ ಕಲಾ ತಂಡಗಳ ಮೂಲಕ ಅದ್ದೂರಿಯಾಗಿ ಮೆರವಣಿಗೆ ಸಹ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಉತ್ಸವ ಸಿದ್ದತೆಗೆ ಸಂಬಂಧಿಸಿದಂತೆ ವಿವಿಧ ಸಮಿತಿಗಳಿಂದ ಅಗತ್ಯ ಮಾಹಿತಿ ಪಡೆದು ಸೂಕ್ತ ಸಲಹೆ ನೀಡಿದರು. ಸಿದ್ದತೆ ಬಗ್ಗೆ ಅಧಿಕಾರಿಗಳು ವಿವರಣೆ ನೀಡಿದರು. ಸಿದ್ದತೆಗಳನ್ನು ನಿಗದಿತ ಸಮಯದಲ್ಲಿ ಅಚ್ಚುಕಟ್ಟಾಗಿ ಪೂರ್ಣಗೊಳಿಸಲು ಸೂಚಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಉತ್ಸವ ಆಚರಣೆ ಕುರಿತು ಸಲಹೆ ಸೂಚನೆ ನೀಡಿದರು.

ನಂತರ ಮಧ್ಯಮದೊಂದಿಗೆ ಮಾತನಾಡಿದ ಸಚಿವರು ಚಾಲುಕ್ಯ ಉತ್ಸವವನ್ನು ಅದ್ದೂರಿ ಆಚರಣೆ ಅಧಿಕಾರಿಗಳು ಎಲ್ಲ ರೀತಿಯ ಸಿದ್ದತೆ ಭರದಿಂದ ಸಾಗಿದ್ದು, ಮೂರು ದಿನಗಳ ಉತ್ಸವ ಅದ್ದೂರಿಯಾಗಿ ನಡೆಯಲಿದೆ. ಉತ್ಸವದಲ್ಲಿ ಕಲೆ, ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ಕ್ರೀಡಾ ಚಟುವಟಿಕೆಗಳು ನಡೆಸಲಾಗುತ್ತಿದ್ದು, ಕುಸ್ತಿ, ಬಾರ ಎತ್ತುವ ಸ್ಪರ್ಧೆ ಹಾಗೂ ರಾಕ್ ಕ್ಲೈಬಿಂಗ್ ಸಹ ಹಮ್ಮಿಕೊಳ್ಳಲಾಗಿದೆ. ಚಾಲುಕ್ಯರ ನಾಡಿನ ವಿಹಂಗಮ ನೋಡವನ್ನು ಕಣ್ತುಂಬಿಕೊಳ್ಳಲು ಹೆಲಿಕ್ಯಾಪ್ಟರ ಮೂಲಕ ವೀಕ್ಷಣೆಗೆ ಹೆಲಿಟ್ಯೂರಿಜಂ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಒ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಸ್ವೇತಾ ಬೀಡಿಕರ ಸೇರಿದಂತೆ ವಿವಿಧ ಸಮಿತಿಯ ಜಿಲ್ಲಾನಟ್ಟದ, ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಯಶಸ್ಸಿಗೆ ಜ್ಞಾನವೇ ಸಾಧನ




• **ಮಲ್ಲಮ್ಮನುಡಿ ವಾರ್ತೆಬಾಗಲಕೋಟೆ:**

ಜ್ಞಾನವೇ ವಿದ್ಯಾರ್ಥಿಗಳ ಯಶಸ್ಸಿಗೆ ಅಂತಿಮ ಸಾಧನ ಹಾಗೂ ಜ್ಞಾನದ ಮೂಲಕವೇ ಉತ್ತಮ ಜೀವನ ಕಂಡುಕೊಳ್ಳಲು ಸಾದ್ಯ ಎಂದು ಹಾನಗಲ್ ಕುಮಾರೇಶ್ವರ ಸೂಪರ್ ಸ್ಪೇಶಾಲಿಟಿ ಆಸ್ಪತ್ರೆಯ ಡಾ.ಬಸವರಾಜ ದಡ್ಡೆನ್ನವರ ಹೇಳಿದರು.

ಬಸವೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದ 2025–26 ನೇ ಸಾಲಿನ ನಿತ್ಯೋತ್ಸವ ವಾರ್ಷಿಕ ಸಂಚಿಕೆ ಬಿಡುಗಡೆ, ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಜೀವನದ ಸಾಧನೆಗೆ ಪಿಯುಸಿ ಹಂತ ಬಹಳ ಪ್ರಮುಖವಾಗಿದ್ದು, ಓದುವುದರ ಜೊತೆಗೆ ವಿಭಿನ್ನ ವಿಚಾರಗಳ ಅರಿವು ಅಗತ್ಯವಾಗಿದೆ.ಎಂದರು. ಶಿಕ್ಷಣದಲ್ಲಿ ವಿಷಯಗಳ ಕಲಿಕೆಯನ್ನು ಆನಂದಿಸುತ್ತಾ ಶ್ರಮವಹಿಸಿ ಸಾಧನೆಯ ಗುರಿ ಮುಟ್ಟುವ ಛಲ ನಮ್ಮದಾಗಬೇಕು. ಒತ್ತಡಗಳು ಸಮಸ್ಯೆಗಳು ಬರುವುದು ಸಹಜ ನಾವು ನಮ್ಮ ಮೇಲೆ ನಂಬಿಕೆ ಇದ್ದಾಗ ಮಾತ್ರ ಸಾಧನೆಯ ದಾರಿ ಸುಗಮವಾಗಲಿದೆ ಎಂದು ಡಾ.ದಡ್ಡೆನ್ನವರ ಹೇಳಿದರು.

ಕಾಲೇಜಿನ ವಿದ್ಯಾರ್ಥಿ ಹಾಗೂ ಚಲನಚಿತ್ರನಟಿ ದೃತಿ ಹರಧಿ ಮಾತನಾಡಿ, ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿನಿಯಾಗಿರುವುದು ನನಗೆ ಹೆಮ್ಮೆ ತಂದಿದೆ. ನನ್ನ ಸಾಧನೆಗೆ ಇಲ್ಲಿನ ಶಿಕ್ಷಕರು ನನ್ನ ತಂದೆ ತಾಯಿಗಳ ಕೊಡುಗೆ ಅಪಾರವಾಗಿದೆ, ಮೊದಲು ನನ್ನ ಶೈಕ್ಷಣಿಕ ಶಿಕ್ಷಣವನ್ನು ಮುಗಿಸಿ ನಟನಾ ತರಬೇತಿ ಪಡೆದು ಇಂದು ದಾರಾವಾಹಿ ಹಾಗೂ ಚಲನಚಿತ್ರದಲ್ಲಿ ನಟಿಯಾಗಿ ಕೆಲಸ ಮಾಡುತ್ತಿರುವೆ, ನಮಗೆ ಸಿಕ್ಕ ಕೆಲಸವನ್ನು ಶ್ರದ್ದೆಯಿಂದ ಮಾಡಿದಾಗ ನಾವು ಸಫಲರಾಗಲು ಸಾಧ್ಯ, ವಿದ್ಯಾರ್ಥಿಗಳು ಜೀವನದಲ್ಲಿ ಶ್ರಮ, ಶ್ರದ್ಧೆ, ತಾಳ್ಮೆಗಳಿಂದ ಸಾಧನೆಯ ಗುರಿಯನ್ನು ಸಾಧಿಸಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೌಶಲ್ಯಕ್ಕೆ ಬಹಳ ಮಹತ್ವವಿದ್ದು, ಹೊಸ ಹೊಸ ಜ್ಞಾನದ ಅವಶ್ಯಕತೆ ಇದೆ, ಕಲಿಕೆಯಲ್ಲಿ ಜ್ಞಾನಾರ್ಜನೆಗೆ ಹೆಚ್ಚಿನ ಒತ್ತು ಕೊಡಿ. ನಮ್ಮ ಸಾಧನೆಯೇ ತಂದೆ ತಾಯಿಗಳ ಆಶಯವಾಗಿರುತ್ತದೆ. ನಾವು ಉತ್ತಮ ಪ್ರಜೆಯಾಗಿ ದೇಶಕ್ಕೆ ಕೊಡುಗೆಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ನಿತ್ಯೋತ್ಸವ ವಾರ್ಷಿಕ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಿದ್ದನಗೌಡ ಪಾಟೀಲ, ಹಾಗೂ ಶ್ವೇತಾ ರೇವಡಗುಂದಿ ಅವರಿಗೆ ಗೌರವ ಸತ್ಕಾರ ಮಾಡಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎನ್. ಎಚ್.ಬೇವಿನಹಳ್ಳಿ ಸ್ವಾಗತಿಸಿದರು. ಸಾಂಸ್ಕೃತಿಕ ವಿಭಾಗದ ಕಾರ್ಯಾಧ್ಯಕ್ಷ ಎ.ಡಿ.ಮೊಮಿನ, ದೈಹಿಕ ನಿರ್ದೇಶಕರಾದ ಎಸ್.ಎಸ್.ಮಂಕಣಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಆರ್.ಆರ್.ರಡ್ಡೇರ ವರದಿ ವಾಚನ ಮಾಡಿದರು. ಸುಭಾಸ ತಿಪ್ಪಣ್ಣವರ ನಿತ್ಯೋತ್ಸವದ ಸಂಚಿಕೆ ಬಗ್ಗೆ ಮಾಹಿತಿ ಹಂಚಿಕೊಂಡರು. ಎಸ್. ಎನ್. ಮಂಕಣಿ ವಂದಿಸಿದರು, ಜಿ.ಎಸ್.ಜಿಗಳೂರ, ವಿದ್ಯಾ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನ ವೇತನ ಸಹಿತ ರಜೆ ಸೌಲಭ್ಯ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಣಿಯಾಗಿರುವ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಅವರ ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನದ ವೇತನ ಸಹಿತ ರಜೆ ಸೌಲಭ್ಯವನ್ನು ಉದ್ಯೋಗದಾತರು ಪಡೆಯಬೇಕು ಎಂದು ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತರು ಡಾ.ವೆಂಕಟೇಶ ಅ.ಶಿಂದಿಹಟ್ಟಿ ಅವರು ತಿಳಿಸಿದ್ದಾರೆ.

ಕಾರ್ಖಾನೆಗಳ ಕಾಯ್ದೆ 1948, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961, ತೆ–ೋಟ ಕಾರ್ಮಿಕರ ಕಾಯ್ದೆ 1951, ಬೀಡಿ ಮತ್ತು ಸಿಗಾ ರ್ಕಾರ್ಮಿಕರ ಕಾಯ್ದೆ 1966, ಮತ್ತು ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ 1961ರಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 18 ರಿಂದ 52 ವರ್ಷದ ವಯೋಮಿತಿಯ ಎಲ್ಲಾ ಖಾಯಂ, ಗುತ್ತಿಗೆ, ಹೊರಗುತ್ತಿಗೆ ಮಹಿಳಾ ಕಾರ್ಮಿಕರುಗಳಿಗೆ ಅವರ ಋತುಚಕ್ರದ ಸಮಯದಲ್ಲಿ ಪ್ರತಿ ಮಾಸಿಕ ಒಂದು ದಿನದ ರಜೆಯಂತೆ ವಾರ್ಷಿಕ 12 ದಿನಗಳ ವೇತನ ಸಹಿತ ರಜೆಯ ಸೌಲಭ್ಯವನ್ನು ಉದ್ಯೋಗದಾತರು ಒದಗಿಸುವಂತೆ ಸರ್ಕಾರವು ಆದೇಶಿಸಿದ್ದು, ಮಹಿಳಾ ನೌಕರರು ಆಯಾ ತಿಂಗಳ ಋತುಚಕ್ರ ರಜೆಯನ್ನು ಆಯಾ ತಿಂಗಳಿನಲ್ಲಿಯೇ ಬಳಿಸಿಕೊಳ್ಳಬೇಕು, ಮತ್ತು ಋತುಚಕ್ರ ರಜೆ ಪಡೆಯಲು ಮಹಿಳಾ ನೌಕರರು ಯಾವುದೇ ವೈದ್ಯಕೀಯ ಪ್ರಮಾಣ ಪತ್ರ ಒದಗಿಸುವ ಅವಶ್ಯಕತೆ ಇರುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಿಯುವ ಆಸಕ್ತಿ ಮೂಡಿಸುವ ಕಲಿಕಾ ಹಬ್ಬ



• **ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:**

ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಕಲಿಕೆಯನ್ನು ಸಂತೋಷದಾಯಕ ಮತ್ತು ಆಕರ್ಷಿಕ ರೀತಿಯಲ್ಲಿ ಸುಧಾರಿಸಲು ಶಿಕ್ಷಣ ಇಲಾಖೆ ಜಾರಿಗೆ ತಂದ ಪ್ರಮುಖ ಕಾಯರ್ಕ್ರಮ "ಕಲಿಕಾ ಹಬ್ಬ" ವಾಗಿದೆ ಎಂದು ಕೊಣ್ಣೂರ ಸಮೂಹ ಸಂಪನ್ಮೂಲ ವ್ಯಕ್ತಿ ಎಸ್ ಎಸ್ ಯಾಳವಾರ ಹೇಳಿದರು. ತಾಲೂಕಿನ ತಮದಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೊಣ್ಣೂರ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ವಿಶೇಷ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶಿಕ್ಷಕ ಎನ್ ಪಾಟೀಲ ಮಾತನಾಡಿ ಪ್ರತಿ ಶಾಲೆಯ ಮಗುವೂ ಮೂಲಭೂತ ಸಂಖ್ಯಾ ಜ್ಞಾನವನ್ನು ಸಾಧಿಸಲು ಎಫ್ ಎಲ್ ಎನ್ ಕಲಿಕ ಹಬ್ಬವನ್ನು ಜಾರಿಗೆ ತರಲಾಗಿದೆ ಇದರಲ್ಲಿ ಪ್ರಮುಖ ಏಳು ವಿಷಯಗಳ ಮೇಲೆ ಸ್ಪರ್ಧೆಗಳು ನಡೆಯುತ್ತವೆ ಇದರಲ್ಲಿ ಎಲ್ಲ ಮಕ್ಕಳು ಆಸಕ್ತಿಯಿಂದ ಭಾಗವಹಿಸಬೇಕು ಎಂದರು. ಶಿಕ್ಷಕ ನಿಂಗರಾಜ ನೀರಲಗಿ ಮಾತನಾಡಿದರು.

ಮುಖ್ಯ ಗುರುಗಳಾದ ಎಲ್. ಎಸ್.ಗಸ್ತಿ ಸಮಾರಂಭವನ್ನು ಉದ್ಘಾಟಿಸಿದರು. ತಮ್ಮದಡ್ಡಿ ಎಚ್ ಪಿ ಎಸ್ ಮುಖ್ಯ ಗುರುಗಳಾದ ಐ.ಎಂ.ಮಡಿವಾಳರ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ಎಸ್ ಬಿ ಹಾದಿಮನಿ ಕಾರ್ಯಕ್ರಮ ನಿರ್ವಹಿಸಿದರು.ಈ ಸಮಯದಲ್ಲಿ ಕ.ರಾ.ಪ್ರಾ.ಶಾ.ಶಿ.ಸಂಘದ ತಾಲೂಕಾ ಗೌರವ ಅಧ್ಯಕ್ಷ ಎಸ್ ಎಸ್ ತೀರ್ಥ, ಟೀಚರ್ಸ್ ಸೊಸೈಟಿ ಉಪಾಧ್ಯಕ್ಷ ಪಿ.ವೈ.ಚಲವಾದಿ, ಮುಖ್ಯ ಗುರುಗಳಾದ ಅಶೋಕ್ ಕೆ ನಾಯಕ, ಶ್ರೀಮತಿ ಕೆ.ಎ.ಹಿರೇಗೌಡರ, ವಿ.ಸಿ. ಕವಡಿಮಟ್ಟಿ, ಸಹ ಶಿಕ್ಷಕ ಎನ್. ಪಾಟೀಲ್, ಸಹ ಶಿಕ್ಷಕಿ ಶ್ರೀಮತಿ ಕೆ.ಜಿ. ತುಂಬಗಿ, ಶಿಕ್ಷಕರಾದ ಎಸ್. ಎಂ.ಬಂಟನೂರ, ಎ.ಆರ್. ಸುಣದಳ್ಳಿ, ನಿಂಗರಾಜ್ ನೀರಲಗಿ, ಆರ್.ವಾಯ್.ಶಿವಯೋಗಿ, ವಿ.ಸಿ. ಕವಡಿಮಟ್ಟಿ, ಸಿದ್ದನಗೌಡ ಕಲಕೇರಿ, ಸಿದ್ದಣ್ಣ ನಾಗೂರ ಒಳಗೊಂಡು ಶಿಕ್ಷಕರು ಹಾಗೂ ಕೊಣ್ಣೂರು ಕ್ಲಸ್ಟರ್ ವ್ಯಾಪ್ತಿಯ ಶಾಲೆಗಳ ವಿದ್ಯಾರ್ಥಿಗಳು ಇದ್ದರು.

ವೇದಿಕೆ ಕಾರ್ಯಕ್ರಮದ ನಂತರ ಕಲಿಕಾ ಹಬ್ಬದ 7 ವಿಷಯಗಳ ಮೇಲೆ ವಿದ್ಯಾರ್ಥಿಗಳ ಸ್ಪರ್ಧೆಗಳು ನಡೆದವು ಮಕ್ಕಳಲ್ಲಿ ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನವನ್ನು ಬೆಳೆಸುವುದು, ಶಾಲಾ ಭಾಷೆ ಮತ್ತು ಮಾತೃಭಾಷೆಗಳಲ್ಲಿ ಕಲಿಯುವ ಆಸಕ್ತಿ ಮೂಡಿಸುವುದು ಕಲಿಕಾ ಹಬ್ಬದ ಪ್ರಮುಖ ಉದ್ದೇಶವಾಗಿದೆ. ಎಸ್.ಎಸ್.ಯಾಳವಾರ ಸಿ.ಆರ್.ಸಿ. ಕೊಣ್ಣೂರ ಕ್ಲಸ್ಟರ್.

# ಬಾದಾಮಿಯಲ್ಲಿ ಡಿಜಿಟಲ್ ಇ-ಸ್ಟ್ಯಾಂಪ್ ತರಬೇತಿ ಇಂದು

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲೆಯ ಬಾದಾಮಿ ತಾಲೂಕಾ ಆಡಳಿತ ಭವನದಲ್ಲಿರುವ ಸಭಾಭವನದಲ್ಲಿ ಜನವರಿ 14 ರಂದು ಸಂಜೆ 4 ರಿಂದ 6 ಗಂಟೆವರೆಗೆ ಡಿಜಿಟಲ್ ಇ–ಸ್ಟ್ಯಾಂಪ್ ಕುರಿತು ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ತರಬೇತಿಯಲ್ಲಿ ಡಿಜಿಟಲ್ ಇ–ಸ್ಟ್ಯಾಂಪ್ ವ್ಯವಸ್ಥೆ ಉಪಯೋಗ, ಕಾರ್ಯವಿಧಾನ ಹಾಗೂ ಸಾರ್ವಜನಿಕರಿಗೆ ದೊರಕುವ ಸೌಲಭ್ಯಗಳ ಕುರಿತು ವಿವರವಾದ ಮಾಹಿತಿಯನ್ನು ಸಂಬಂಧಿಸಿದ ತರಬೇತಿದಾರರು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನೀಡಲಿದ್ದಾರೆ ಈ ತರಬೇತಿಯ ಸದುಪಯೋಗವನ್ನು ಸಂಬಂಧಿಸಿದವರು ಪಡೆದುಕೊಳ್ಳುವಂತೆ ಬಾದಾಮಿ ಉಪನೋಂದಣಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಿದ್ಧತಾ ಸಭೆ ಡಿಸಿ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾ ಕೇಂದ್ರದಲ್ಲಿ ಜನವರಿ 26ರಂದು ಶಿಷ್ಟಾಚಾರದಂತೆ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ದತೆ ಮಾಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಗಣರಾಜ್ಯೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣರಾಜ್ಯೋತ್ಸವದ ಮುಖ್ಯ ಕಾರ್ಯಕ್ರಮವು ನಗರದ ಬಿಎಂಸಿಆರ್‌ಸಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದು, ಅಂದು ಬೆಳಿಗ್ಗೆ 9 ಗಂಟೆಗೆ ಹಜ್ ಮತ್ತು ಪೌರಾಡಳಿತ ಸಚಿವ ರಹೀಂ ಖಾನ್ ಅವರು ಧ್ವಜಾರೋಹಣಾ ನೆರವೇರಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯ ಭಾಗವಹಿಸಬೇಕು ಎಂದು ಸೂಚಿಸಿದರು.ಶಿಷ್ಟಾಚಾರದ ನಿಯಮಗಳಂತೆ ಗಣರಾಜ್ಯೋತ್ಸವ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ, ಆಹ್ವಾನ ಪತ್ರಿಕೆಗಳನ್ನು ಜನಪ್ರತಿನಿಧಿಗಳಿಗೆ, ಗಣ್ಯರಿಗೆ ವಿತರಿಸಲು ಕ್ರಮವಹಿಸಬೇಕು ಎಂದರು.

ಗಣರಾಜ್ಯೋತ್ಸವ ಆಚರಣೆಗೆ ಸಂಬಂಧಿಸಿದಂತೆ ಸ್ವಾಗತ, ಶಿಷ್ಠಾಚಾರ, ಆಹ್ವಾನ ಪತ್ರಿಕೆ ಹಾಗೂ ವೇದಿಕೆ ಸಮಿತಿ, ಸನ್ಮಾನ, ಪೆರೇಡ್ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯಲ್ಲಿರುವ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಗಳು ಸಮನ್ವಯತೆಯಿಂದ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಗಣರಾಜ್ಯೋತ್ಸವವನ್ನು ಆಚರಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮವು ಅಚ್ಚುಕಟ್ಟಾಗಿ ಶಿಷ್ಟಾಚಾರದಂತೆ ನಡೆಯುವಂತಾಗಬೇಕು. ಶಿಸ್ತುಬದ್ಧವಾಗಿ ವೇದಿಕೆ ನಿರ್ಮಾಣವಾಗಬೇಕು. ಕ್ರೀಡಾಂಗಣದಲ್ಲಿ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆ, ಮೊಬೈಲ್ ಶೌಚಾಲಯ ಸೇರಿದಂತೆ ನೀರನ್ನು ಸಿಂಪಡಿಸಿ ಧೂಳು ಆಗದಂತೆ ನೋಡಿಕೊಳ್ಳಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು.

ಅದೇರೀತಿಯಾಗಿ ಎಲ್ಲಾ ಸರ್ಕಾರಿ ಕಚೇರಿಗಳಿಗೂ ಸಹ ದೀಪಾಲಂಕಾರ ಮಾಡಬೇಕು. ನಗರದ ಏಕಾಶಿಲಾ ಬೆಟ್ಟಕ್ಕೂ ವಿದ್ಯುತ್ ದೀಪಾಲಂಕಾರ ಕೈಗೊಳ್ಳಬೇಕು. ಇದಕ್ಕೆ ನಿರಂತರ ವಿದ್ಯುತ್ ವ್ಯವಸ್ಥೆ ಇರುವಂತೆ ಜೆಸ್ಕಾಂ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

# ಸಂಕ್ರಾಂತಿಯ ಉತ್ಸಾಹ ಹೆಚ್ಚಿಸಿದ ವರ್ಣಮಯ ರಂಗೋಲಿ ಸ್ಪರ್ಧೆ



• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್:**

ಪಟ್ಟಣದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಮಂಗಳವಾರ ನಿಜಶರಣ ಅಂಬಿಗರ ಚೌಡಯ್ಯ ಜಯಂತೋತ್ಸವ ಸಮಿತಿ ವತಿಯಿಂದ ರಂಗೋಲಿ ಸ್ಪರ್ಧೆ ನಡೆಯಿತು.

ವಿದ್ಯಾರ್ಥಿನಿಯರ ಬಿಡಿಸಿದ ವರ್ಣಮಯ ರಂಗೋಲಿ ಎಲ್ಲರ ಮನಮೋಹಿಸಿದವು.

ಸಂಕ್ರಾಂತಿಯ ಸೂರ್ಯಕಿರಣ, ಹಸಿರು ಎಲೆಗಳು, ಗೋವುಗಳ ಚಿತ್ರಗಳು, ರಂಗೋಲಿ ಬಿಡಿಸುವ ಮಹಿಳೆ ಮುಂತಾದ ವರ್ಣಮಯ ರಂಗೋಲಿಗಳನ್ನು ವಿದ್ಯಾರ್ಥಿನಿಯರು ರಚಿಸಿದರು.

ಈ ಸೃಜನಾತ್ಮಕ ಸ್ಪರ್ಧೆಯನ್ನು ಆಯೋಜ–ಕರಾದ ಮಾಜಿ ವಿಜಯ್ ಕುಮಾರ್ ನೀರೇಟಿ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಓದಿಗೆ ಮಾತ್ರ ಸೀಮಿತವಾಗಬೇಡಿ. ಎಲ್ಲಾ ರಂಗಗಳಲ್ಲೂ ತಾವು ಸಾಧಕರಾಗಬೇಕು, ಸತತ ಓದುವದರಿಂದ ಈಗ ಬೆನ್ನುನೋವು ಬಂದರೂ ಮುಂದೆ ನಿಮ್ಮ ಕುಟುಂಬಕ್ಕೆ ಬೆನ್ನೆಲುಬಾಗಿ ನಿಲ್ಲಿ ಎಂದು ಪ್ರೇರಣೆ–ಯ ಮಾತುಗಳು ವಿದ್ಯಾರ್ಥಿನಿಯರಲ್ಲಿ ಉತ್ಸಾಹ ಜಾಗೃತಗೊಳಿಸಿದವು.

ವಿಜೇತರಿಗೆ ವಿಶೇಷ ಬ್ಯಾಗ್ ಸೇರಿದಂತೆ ನೆundefined 1ಬುಕ್, ಪೆನ್ನು, ಟಿಫಿನ್ ಬಾಕ್ಸ ಬಹುಮಾನಗಳನ್ನು ವಿಶೇಷ ಅತಿಥಿಗಳಾಗಿ ಆಗಮಿಸಿದ ಪಿ ಐ ವೀರಣ್ಣ ದೊಡಮನಿ ವಿತರಿಸಿದರು, ಕಾಲೇಜಿನ ಪ್ರಾಂಶುಪಾಲರಾದ ಮಲ್ಲಿಕಾರ್ಜುನ ಹೊಸಮನಿ, ಸ್ಥಳೀಯ ಸಮಾಜ ಸೇವಕರು,

ಸಂಘಟನೆ ಸಮಾಜದ ಅಧ್ಯಕ್ಷರು ಶಿವಾನಂದ ಬೂದಿ, ಲಾಲಪ್ಪ ತಲಾರಿ, ಕಾಶಪ್ಪ ಬೋಯ, ಇಸ್ಮಾಯೀಲ್ ಪ್ಯಾರೇ, ಕಾಶಿಪತಿ ವಿಶ್ವಕರ್ಮ, ರಮೇಶ್ ಹಡಪದ, ಶೇಷಪ್ಪ ಬುರ್ಜು, ಭಾನುಪ್ರಕಾಶ ಮೇಧಾ ಸೇರಿದಂತೆ ಕಾಲೇಜು ವಿದ್ಯಾರ್ಥಿನಿಯರೊಂದಿಗೆ ಪಾಲ್ಗೊಂಡರು. ಈ ಕಾರ್ಯಕ್ರಮ ಸಾಂಸ್ಕೃತಿಕ ಐಕ್ಯತೆಯ ಸಂದೇಶವನ್ನು ತಂದಿತು.

# ಸ್ವಚ್ಛತೆಯಲ್ಲಿ ತ್ಯಾಜ್ಯ ನಿರ್ವಹಣೆ ಮುಖ್ಯ: ಸಿಇಒ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಗ್ರಾಮೀಣ ಪ್ರದೇಶದಲ್ಲಿ ವೈಜ್ಞಾನಿಕವಾಗಿ ಘನ ತ್ಯಾಜ್ಯ ನಿರ್ವಹಣೆ ಕುರಿತು ಸ್ವಚ್ಛತಾ ವಾಹಿನಿ ಸಿಬ್ಬಂದಿಗಾಗಿ ಹಮ್ಮಿಕೊಂಡ ಸಾಮರ್ಥ್ಯ9 ಅಭಿವೃದ್ಧಿ ಹಾಗೂ ಸ್ವ ಸಹಾಯ ಸಂಘಗಳ ಸಭೆಯಲ್ಲಿ ಸ್ವಚ್ಛತೆಯ ಕುರಿತು ಸಮುದಾಯ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತಿಯ ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀ ಲವೀಶ್ ಒರಡಿಯಾ ರವರು ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ ಯಾದಗಿರಿ ತಾಲೂಕ ಪಂಚಾಯತ ಯಾದಗಿರಿ ಹಾಗೂ ಸಾಹಸ್ ಸಂಸ್ಥೆ ಹಾಗೂ ರೈನ್ ಮ್ಯಾಟರ ಫೌಂಡೇಶನ್, ಸ್ವಚ್ಛ ಭಾರತ ಮಿಷನ್ (ಗ್ರಾ) & ರಾಷ್ಟ್ರೀಯ ಗ್ರಾಮೀಣ ಜೀವನೋಪಯೋಗ ಅಭಿಯಾನ ಇವರ ಸಹಯೋಗದಲ್ಲಿ ಜನವರಿ 13 ರಂದು ಯಾದಗಿರಿ ತಾಲೂಕ ಪಂಚಾಯತ ಸಭಾಂಗಣದಲ್ಲಿ ಏರ್ಪಡಿಸಿದ ಸಾಮರ್ಥ್ಯ ಅಭಿವೃದಿ ತರಬೇತಿಯಲ್ಲಿ ಭಾಗವಹಿಸಿ ಮಾತನಾಡಿದರು.ಗ್ರಾಮದ ಸ್ವಚ್ಛತೆ ನಿರ್ವಹಣೆಯ ಜವಾಬ್ದಾರಿ ಗ್ರಾಮ ಪಂಚಾಯತಿಯದ್ದಾಗಿದ್ದು, ಇದರ ಯಶಸ್ವಿಗೆ ಸ್ವಚ್ಛತಾ ಸಿಬ್ಬಂದಿ, ಗ್ರಾಮಸ್ಥರ ಸಹಕಾರ ಪ್ರಮುಖವಾಗಿದ್ದು ಪ್ರತಿ ಮನೆಯಿಂದ ಉತ್ಪತ್ತಿಯಾಗಿತ್ತಿರುವ ಘನತ್ಯಾಜ್ಯವನ್ನು (ಒಣ ಕಸ) ಸೂಕ್ತವಾಗಿ ವಿಲೇವಾರಿ ಮಾಡಲು ಜಾಗೃತಿ ಮೂಡಿಸಬೇಕಾಗಿದೆ ಇದರ ಜೊತೆ ಪ್ಲಾಸ್ಟಿಕ್ ಬಳಕೆ–ಯ ವಸ್ತುಗಳನ್ನು ತ್ಯಜಿಸಿ, ಮರು ಬಳಕೆಯಾಗುವ ಪರಿಸರ ಸ್ನೇಹಿ ವಸ್ತುಗಳನ್ನು ಬಳಕೆ ಮಾಡಬೇಕೆ ಇದು ಪರಿಸರ ಸಂರಕ್ಷಣೆಯಲ್ಲಿ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.ಪ್ರತಿ ಗ್ರಾಮ ಪಂಚಾಯತಿಯಲ್ಲಿರುವ ಸ್ವಚ್ಛವಾಹಿನಿಯನ್ನು ಪ್ರತಿ ದಿನ ಓಡಿಸಬೇಕು ಗ್ರಾಮದಲ್ಲಿನ ಎಲ್ಲಾ ಮನ–ಮನೆಗೆ ಹೋಗಿ ತ್ಯಾಜ್ಯ ಸಂಗ್ರಹಿಸಿಕೊಂಡು ಬರಬೇಕು ಮನೆ, ಅಂಗಡಿ , ಹೋಟೇಲ್ ಮುಂತಾದ ಕೇಂದ್ರಗಳಲ್ಲಿ ಉತ್ಪಾದನೆಯಾಗುವ ತ್ಯಾಜ್ಯವನ್ನು ಮೂಲದಲ್ಲಿಯೇ ವಿಂಗಡಿಸಿ ಸಂಗ್ರಹಣೆ ಮಾಡಬೇಕು ಈ ಅಭ್ಯಾಸವನ್ನು ಪ್ರತಿ ಕುಟುಂಬದ ಸದಸ್ಯರು ಅಳವಡಿಸಿಕೊಳ್ಳಬೇಕು ಈ ನಿಟ್ಟಿನಲ್ಲಿ ಎಲ್ಲರು ಶ್ರದ್ದೆಯಿಂದ ಕೆಲಸ ಮಾಡಲು ಸೂಚನೆ ನೀಡಿದರು.

ಗ್ರಾಮ ಪಂಚಾಯತಿಯೊಂದಿಗೆ ಒಡಂಬಡಿಕೆಯಾಗಿರುವ ಉಕಐಈನ ಸ್ವ–ಸಹಾಯ ಸಂಘದ ಸದಸ್ಯರು ತ್ಯಾಜ್ಯ ನಿರ್ವಹಣೆಯಲ್ಲಿ ತೊಡಬೇಕು ಇದರಿಂದ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡಲು ಸಿಬ್ಬಂದಿಯ ಶ್ರಮ ಮುಖ್ಯವಾಗಿದೆ.

# ಕುಂದು ಕೊರತೆಗಳ ಆಲಿಕೆಯ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜ.14 ರಂದು ಸಶಸ್ತ್ರ ಪಡೆಗಳ ಯೋಧರ ದಿನಾಚರಣೆ ಅಂಗವಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಬೆಂಗಳೂರು ನಿರ್ದೇಶನಾಲಯ ವತಿಯಿಂದ ಮಾಜಿ ಸೈನಿಕರು ಹಾಗೂ ಅವಲಂಬಿತರುಗಳಿಗೆ ದೂರವಾಣಿ ಮೂಲಕ ಕುಂದು ಕೊರತೆಗಳ ಆಲಿಕೆಯ ಕಾರ್ಯಕ್ರಮ ಆಯೋಜಿಸಲಾಗಿದೆ.

ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ತಮ್ಮ ಕುಂದು ಕೊರತೆಗಳಿದ್ದಲ್ಲಿ ದೂ.080–25589459 ಅಥವಾ ಮೊ. 8105233863, 9871103814, 7892289635 ಗೆ ಸಂಪರ್ಕಿಸಬಹುದು ಎಂದು ಧಾರವಾಡದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಕಲಿಕಾ ಹಬ್ಬ ಉದ್ಘಾಟನೆ



**ಹುಣಸೂರು:** ನಗರದ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಹುಣಸೂರು ಟೌನ್ ದಕ್ಷಿಣ ಕ್ಲಸ್ಟರ್‌ನ FLN ಕಲಿಕ ಹಬ್ಬ ಕಾರ್ಯಕ್ರಮವನ್ನು BEO ಎಸ್ ಪಿ ಮಹದೇವ್ BRC ಹೇಮಲತಾ ಮುತ್ತು ಶಿಕ್ಷಕರ ಸಂಘದ ಹಂಗಾಮಿ ಅಧ್ಯಕ್ಷರಾದ ಜಿ ಎನ್ ಜ್ಯೋತಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷರಾದ ನರಸಿಂಹ ಶಿಕ್ಷಕರ ಸಹಕಾರ ಸಂಘದ ಅಧ್ಯಕ್ಷ ಸ್ವಾಮಿ ನೌಕರರ ಸಂಘದ ಅಧ್ಯಕ್ಷರಾದ ಕೆ ಬಿ ಶಶಿಕುಮಾರ್ ಮುಖ್ಯ ಶಿಕ್ಷಕ ಸಿ ಎಸ್ ಮಹೇಶ್ ರಿಜ್ವಾನ ಬಾನು ರಾಜೇಶ್ವರಿ ಸಾಹಿತಿ ಡಾ. ಮಾಧುಪ್ರಸಾದ್ ಶಿಕ್ಷಕರಾದ ಚೈತ್ರ ರಾಣಿ ಉಪಸ್ಥಿತರಿದ್ದರು.



**ಬೀದರ್: ವಾರ್ತಾಧಿಕಾರಿ ಬೀದರ್ ಮಂಜುನಾಥ ಸರ್ ಹಾಗೂ ಸಿಬ್ಬಂದಿಗಳನ್ನು ಮಲ್ಲಮ್ಮ ನುಡಿ ಕ್ಯಾಲೆಂಡರ್ ಗಳನ್ನು ಮಂಗಳವಾರ ನೀಡಲಾಯಿತು.**

# ಜಲಚರ ಜೀವಿಗಳನ್ನು ರಕ್ಷಿಸಿ ಜೀವ ಜಲವನ್ನು ಉಳಿಸಿ

**ಕೊಪ್ಪಳ:** ಮಕರ ಸಂಕ್ರಾಂತಿಯ ಅಂಗವಾಗಿ ಸುಕೇತ್ರ ತಿಂಥಣಿ ಮೌನೇಶ್ವರ, ಧರ್ಮಸ್ಥಳದ ಮಂಜುನಾಥ ಸ್ವಾಮಿ, ಶ್ರೀ ಏಳು ಕೋಟಿ ಮಲ್ಲಯ್ಯ ದೇವಸ್ಥಾನ, ಕೂಡಲ ಸಂಗಮ ಕ್ಷೇತ್ರ, ಹುಲಿಗೇಮ್ಮ, ಯಲ್ಲಮ್ಮ ದೇವಸ್ಥಾನ ಹೀಗೇ ರಾಜ್ಯದ ವಿವಿಧ ಪುಣ್ಯ ತೀರ್ಥ ಕ್ಷೇತ್ರಗಳಲ್ಲಿ ಮಕರ ಸಂಕ್ರಾಂತಿಯ ಹಬ್ಬದಂಗವಾಗಿ ಪವಿತ್ರವಾದ ನದಿಗಳಲ್ಲಿ ಸ್ನಾನ( ಜಳಕ) ಮಾಡುವಾಗ ವಿವಿಧ ಶಾಂಪೂ, ವಿಷಕಾರಕ ಸಾಬುನು ಬಳಸಿ ವಿಷಸ್ನಾನ ಮಾಡಿ ಜಲಚರ ಜೀವಿಗಳನ್ನು ನಾಶಮಾಡುತ್ತಿದ್ದೇವೆ ಆದ್ದರಿಂದ ನಾವು ಪುಣ್ಯ ಕ್ಷೇತ್ರದಲ್ಲಿ ಪುಣ್ಯ ಸ್ನಾನ ಮಾಡುವಾಗ ಕಡ್ಲಿ ಹಿಟ್ಟಿನಿಂದ ಸ್ನಾನ ಮಾಡಿ ಜಲಚರ ಜೀವಿಗಳನ್ನು ರಕ್ಷೀಸಿ ಜೀವ ಜಲವನ್ನು ಉಳಿಸಿವಲ್ಲಿ ಒಂದು ಸಣ್ಣ ಪ್ರಯತ್ನವನ್ನು ನಾವು ನಿವೇಲ್ಲರೂ ಮಾಡೋಣ ಎಂದು ಪರಿಸರ ಪ್ರೇಮಿ ಸಾಹಿತಿ ಶರಣಬಸಪ್ಪ ದಾನಕ್ಕೈ ಯಲಬುರ್ಗಾ ಅವರು ಮನವಿ ಮಾಡಿದ್ದಾರೆ.



ಗಟಾರಗಳ ಮೂಲಕವಾಗಿ ಕೊಳಚೆ ನೀರು, ಇದರೊಂದಿಗೆ ಅಧಿಕೃತ ಹಾಗು ಅನಧಿಕೃತವಾಗಿ ಮಾರುವ ಮದ್ಯ ಪಾನಿಯಗಳ ಪ್ಲಾಸ್ಟಿಕ್ ಚೀಲಗಳು,ನೀರಿನ ಪ್ಲಾಸ್ಟಿಕ್ ಬಾಟಲಿ,ಪೌಚ್ ಗಳು ,ಇದರ ಜೋತೆಗೆ ಮನೆ,ಹೊಟಲ್,ರೆಸ್ಟೋರೆಂಟ್, ಹಾಗು ವಿಷಪೂರಿತದಿಂದ ಕೂಡಿರುವ ವಿವಿಧ ಕಂಪನಿಗಳಿಂದ ಬರುವ ಧೂಳು,ವಿಷ ಅನೀಲ ಸೋರಿಕೆಗಳಿಂದ ಬರುವ ನೀರು, ಹಾಗು ಸತ್ತ ಪ್ರಾಣಿಗಳಾದ ನಾಯಿ, ಕುರಿ, ಹಂದಿ, ಬೆಕ್ಕು,ಇಲಿ,ಹೆಗ್ಗಣ ಇನ್ನಿತರ ಪ್ರಾಣಿಗಳನ್ನು ಗಟಾರಕ್ಕೆ ಚೆಲ್ಲಿ ನಮ್ಮ ಕೈ ತೊಳೆದು ಕೊಳ್ಳುತ್ತವೆ ಇದರಿಂದ ನೀರು ಹಳ್ಳ ,ಕೊಳ್ಳ,ಕೆರೆ,ನದಿ ಸೇರಿ ಅದರಲ್ಲಿರು ಮೀನು ಇತರ ಜೀವ ಸಂಕುಲ ನಾಶವಾಗುತ್ತದೆ, ಶುದ್ಧ ಗಾಳಿ,ನೀರು,ಆರೋಗ್ಯ ಸಿಗಲಾರದೆ ನೂರು ವರ್ಷ ಬದುಕಿ ಬಾಳಬೇಕಾದವರು ಹಲವಾರು ರೋಗಗಳಿಗೆ ಸಿಲುಕಿ 30 ವರ್ಷದೊಳಗೆ ಸಾವನ್ನು ತಂದು ಕೊಳ್ಳುತ್ತವೆ ಆದ್ದರಿಂದ ಯುವ ಸಮುದಾಯ,ಸಂಘಸಂಸ್ಥೆಗಳು, ಸರ್ಕಾರ ಜಾಗ್ರುತಿವಹಿಸಿದಾಗ ಸುಂದರ ಪರಿಸರ ನಿರ್ಮಿಸಿ ಜಲಚರ ಜೀವಿಗಳನ್ನು ರಕ್ಷಿಸಿ ಜೀವ ಸಂಕುಲವನ್ನು ಉಳಿಸಲು ಸಾಧ್ಯವಾಗುತ್ತದೆ ಎಂದು ಕೊಪ್ಪಳ ಜಿಲ್ಲೇಯ ಪರಿಸರ ಪ್ರೇಮಿ ,ಸಾಹಿತಿ ಶರಣಬಸಪ್ಪ ದಾನಕ್ಕೈ ಯಲಬುರ್ಗಾ ಅವರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

# ಅನುದಾನ ನೀಡಲು ಶಾಸಕರಿಗೆ ಮನವಿ



**ಮುದಗಲ್:** ಪಟ್ಟಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನ ನಿರ್ಮಾಣ ಮಾಡಲು ಅನುದಾನ ನೀಡಬೇಕು ಎಂದು ಲಿಂಗಸುಗೂರು ಶಾಸಕ ಮಾನಪ್ಪ, ಡಿ, ವಜ್ಜಲ್ ರವರಿಗೆ ಮುದಗಲ್ ಪತ್ರಕರ್ತರು ಮಂಗಳವಾರ ಮನವಿ ಪತ್ರ ಸಲ್ಲಿದರು.

ಇದೆ ವೇಳೆ ಶಾಸಕ ಮಾನಪ್ಪ,ವಜ್ಜಲ್,ನೂತನ ಪತ್ರಿಕಾ ಭವನ ನೀಡಲು ವಿಶೇಷ ಅನುದಾನ ನೀಡಿ ಸಂಪೂರ್ಣ ಸಹಾಯ ಸಹಕಾರ ನೀಡಲಾಗುವದು ಎಂದು ಮುದಗಲ್ ಪತ್ರಕರ್ತರಿಗೆ ಭರವಸೆ ನೀಡಿದರು.

ಇದೆ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮುದಗಲ್ ಘಟಕದ ಅಧ್ಯಕ್ಷ ದೇವಪ್ಪ ರಾಠೋಡ, ಪ್ರಧಾನ ಕಾರ್ಯದರ್ಶಿ ಶಿವರಾಜ ಸುಂಕದ, ತಾಲೂಕ ಕಾರ್ಯದರ್ಶಿ ಶಶಿಧರ ಕಂಚಿಮಠ, ಸದಸ್ಯ ಬಸವರಾಜ ಆಶಿಹಾಳ, ಬಸವರಾಜ ಹೂನೂರು, ಸುರೇಶ ವಿಶ್ವಕರ್ಮ,ಶಿವಶಂಕ್ರಯ್ಯ ಒಡೆಯರ್, ವಾಹೀದ್ ಖುರೇಶಿ, ಇದ್ದರು.

# ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರೈತರು ಮಲ್ಚಿಂಗ್ ಹಾಗೂ ವಿಡ್‌ಮೇಟ್, ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಗುಣಮಟ್ಟದ ಮೆಣಸಿನಕಾಯಿ ಬೆಳೆ ಬೆಳೆಯಬಹುದು ಎಂದು ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ್ ಕೋಟಿಮನಿ ಅವರು ಹೇಳಿದರು.

ತೋಟಗಾರಿಕೆ ಇಲಾಖೆ ಹಾಗೂ ಹಗರಿಯ ಕೃಷಿ ವಿಜ್ಞಾನ ಕೇಂದ್ರ ಇವರ ಸಹಯೋಗದಲ್ಲಿ ಕುರುಗೋಡು ತಾಲ್ಲೂಕಿನ ಸಿದ್ದಮ್ಮನಹಳ್ಳಿ ಗ್ರಾಮ, ಮಾರುತಿ ಕ್ಯಾಂಪ್ ನ ಬಿಳುಬಾವಿ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಹೋಬಳಿ ಮಟ್ಟದ ಮೆಣಸಿನಕಾಯಿ ಕ್ಷೇತ್ರೋತ್ಸವ ಹಾಗೂ ತಾಂತ್ರಿಕ ಸಲಹೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕುರುಗೋಡು ತಾಲ್ಲೂಕಿನಲ್ಲಿ 15,000 ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯನ್ನು ರೈತರು ಬೆಳೆಯುತ್ತಿದ್ದಾರೆ. ಸಿದ್ಧಮ್ಮನಹಳ್ಳಿ ಗ್ರಾಮದಲ್ಲಿ 2345 ಹೆಕ್ಟರ್ ಪ್ರದೇಶದಲ್ಲಿ ಮೆಣಸಿನಕಾಯ ಬೆಳೆ ಬೆಳೆಯುತ್ತಿದ್ದು, ರೈತರು ಕಾರ್ಯಾಗಾರದ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಹಗರಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ಪಾಲಯ್ಯ ಅವರು ಮಾತನಾಡಿ, ಮೆಣಸಿನಕಾಯಿ ಬೆಳೆಯ ಬೇಸಾಯ ಕ್ರಮಗಳಲ್ಲಿ ಬದಲಾವಣೆ, ತಳಿ



ಆಯ್ಕೆ, ಸಮಗ್ರ ಕೀಟ ಮತ್ತು ಪೀಡೆ ನಿರ್ವಹಣೆ, ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಂಡರೆ ಉತ್ತಮ ಗುಣಮಟ್ಟದ ಬೆಳೆ ಬೆಳೆಯಬಹುದು ಎಂದರು.

ರೈತರು ಹೊಲದ ಬದುವಿನಲ್ಲಿ ಬಾರ್ಡರ್ ಬೆಳೆಗಳಾದ ಅಲಸಂದಿ, ಮೆಕ್ಕೆಜೋಳ, ಸಜ್ಜೆ, ತೆ-ಣಗರಿ, ಅಲ್ಲಲ್ಲಿ ಚೆಂಡು ಹೂವು ನೆಡುವುದರ ಮೂಲಕ ಕೀಟಗಳನ್ನು ಹತೋಟಿಗೆ ತರಬಹುದು ಎಂದು ಮಾಹಿತಿ ನೀಡಿದರು.

ಮಣ್ಣು ವಿಜ್ಞಾನಿ ಡಾ.ರವಿ ಅವರು ಮಾತನಾಡಿ, ರೈತಾಪಿ ವರ್ಗ ಮಣ್ಣಿನ ಗುಣಮಟ್ಟವನ್ನು ಹೆಚ್ಚಿಸುವ ಕುರಿತು ಮಾಹಿತಿ ನೀಡುವ ಮೂಲಕ ಮಣ್ಣಿನಲ್ಲಿ ಅದರದೇ ಆದ ಲವಣ ಪೋಷಕಾಂಶಗಳ ಗುಣ ಹೊಂದಿರುತ್ತದೆ ಎಂದರು.

ರೈತರು ರಾಸಾಯನಿಕ ಗೊಬ್ಬರಗಳನ್ನು ಕಡಿಮೆ ಮಾಡಿ ಸಾವಯವ ಕೃಷಿಗೆ ಮಹತ್ವವನ್ನು ನೀಡಬೇಕು. ಮಣ್ಣಿನ ಗುಣಮಟ್ಟ ಹೆಚ್ಚಿಸಲು ರೈತರು ಮಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು. ಇದರಿಂದ ಯಾವ ಪೋಷಕಾಂಶಗಳು ಕಡಿಮೆಯಾಗಿದೆ. ಅದನ್ನು ಮಾತ್ರ ಬಳಸಿಕೊಂಡು ಉತ್ತಮ ರೀತಿಯ ಬೆಳೆ ಬೆಳೆಯಲು ಸಾಧ್ಯ ಎಂದು ತಿಳಿಸಿದರು.

ಒಮ್ಮೆ ಮಣ್ಣಿನ ಪರೀಕ್ಷೆ ಮಾಡಿದರೆ ಮೂರು ವರ್ಷಗಳವರೆಗೆ ಸಕ್ರಿಯರಾಗಿ ರಾಸಾಯನಿಕ ಗೊಬ್ಬರಗಳನ್ನು ಕಡಿಮೆ ಮಾಡಬಹುದು ಎಂದು ಮಾಹಿತಿ ನೀಡಿದರು.

ಡಾ.ಗೋವಿಂದಪ್ಪ ಅವರು ಮಾತನಾಡಿ, ಶೀಲಿಂಧ್ರ ಹಾಗೂ ಕೀಟಗಳನ್ನು ಗುರುತಿಸಿ ರೋಗಕ್ಕೆ ತಕ್ಕ ಔಷಧಿಗಳು ಮಾತ್ರ ಸಿಂಪರಣೆ ಮಾಡಬೇಕು. ರೋಗ ಮತ್ತು ಕೀಟಗಳನ್ನು ನರ್ಸರಿ ಹಂತದಿಂದಲೇ ಹತೋಟಿಗೆ ತರಬೇಕು ಹಾಗೂ ಬೆಳೆಯನ್ನು ಸಂರಕ್ಷಿಸಿಕೊಳಬೇಕು ಎಂದರು.

ನಾಟಿ ಮಾಡಿದ 30 ದಿನಗಳ ನಂತರ ಪ್ರತಿ ಎಕರೆಗೆ 10 ರಿಂದ 15 ರವರೆಗೆ ಅಂಟು ಬಲೆಗಳನ್ನು ಹಾಕಿಕೊಳ್ಳಬೇಕು. ಬಯೋ ಜೀವಿಗಳಾದ ಸುಡೋಮೋನಾಸ್,ಟ್ರೈಕೋಡರ್ಮ,ವರ್ಟಿಸಿಲಿಯಮ್ ಲೇಖನಿ, ಬೆವೇರಿಯಾ ಬಸ್ವಿಯಾನಗಳನ್ನು ಸಿಂಪರಣೆ ಮಾಡುವುದರ ಮೂಲಕ ಮೆಣಸಿನಕಾಯಿ ಬೆಳೆಯ ರೋಗಗಳನ್ನು ಹತೋಟಿಗೆ ತರಬಹುದು ಎಂದು ವಿವರಿಸಿದರು.ಬಳ್ಳಾರಿ ತಾಲ್ಲೂಕು ತೋಟಗಾರಿಕೆ ನಿರ್ದೇಶಕ ಹಾಗೂ ಕಾರ್ಯಕ್ರಮ ಸಂಯೋಜಕ ಜಾಡ್ರ ಶಂಕ್ರಪ್ಪ ಅವರು ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ತೋಟಗಾರಿಕೆ ಇಲಾಖೆಯ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ರಾಘವೇಂದ್ರ.ಕೆ., ಪ್ರವೀಣ್ ಕುಮಾರ್ ಎನ್., ರೈತರಾದ ಇಬ್ರಾಹಿಂ, ವೀರಭದ್ರಗೌಡ, ಹನುಮಂತ ರಾವ್, ಸೀತಾರಾಮ್ ರೆಡ್ಡಿ, ಮಲ್ಲನಗೌಡ.ಎಸ್., ಬಲರಾಮ್ ಹಾಗೂ ಇತರರು ಇದ್ದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಿಗೆ ಸನ್ಮಾನ ಮಾಡಲಾಯಿತು.

# ಮಾನವೀಯತೆಗಾಗಿ ಕೆಲಸ ಮಾಡುವ ರೈತ ಸೇನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ರಾಯಚೂರು ಜಿಲ್ಲಾ ಘಟಕದ ವತಿಯಿಂದ ರಾಜ್ಯ ಉಪಾಧ್ಯಕ್ಷರಾದ ಲಕ್ಷ್ಮಿಕಾಂತ ಪಾಟಿಲ್ ಮದ್ದರಿಕಿ ಇವರ ಶಿಫಾರಸ್ಸಿನ ಮೆರೆಗೆ ಜಿಲ್ಲಾಧ್ಯಕ್ಷರಾದ ಇಂದ್ರಜಿತ ಯಾದವ್ ಆವರ ಆದೇಶದ ನೀಡಿ ತಿಪ್ಪಣ್ಣ ಮಡ್ಡಿ, ಯಂಕಪ್ಪ ಗಜ್ಜೆಳ್, ಅಡಿವೆಪ್ಪ ಬೋಳಬಂಡಿ, ಗಂಗಪ್ಪ ಪುಜಾರಿ, ನಾಗರಾಜ ಕೋಲಿ, ಎಮ್.ಡಿ.ಬಾಷ, ನಾಗಪ್ಪ ಮಡಿವಾಳ, ಶಾಂತಪ್ಪ ಕರಿಕಾಳ, ತಿಮ್ಮಪ್ಪ ಕೊಂಡಿ, ಮಲ್ಲಿಕಾರ್ಜುನ ಸಚಿನ್, ಜನಾರ್ದನ ಸಕ್ರೆಪ್ಪ, ನವೀನ್ ಕುಮಾರ್ ಕೊಂಡಿ, ತಾಯಪ್ಪ ಪಿಡ್ಡಪ್ಪ, ಆಂಜಿನಯ್ಯ, ಮಲ್ಲೇಶ್, ಹುಸೇನಪ್ಪ, ಮಲ್ಲೇಶ ಯಂಕಪ್ಪ, ಇವರುಗಳಿಗೆ ಇಂದು ರಾಯಚೂರು ತಾಲೂಕಿನ ಮರ್ಚೆಡ್ ಗ್ರಾಮದ ಕಾರ್ಯಲಯದಲ್ಲಿ ಜಿಲ್ಲಾ ಘಟಕದ ವಿವಿಧ ಪದಾಧಿಕಾರಿಗಳು, ರಾಯಚೂರು ತಾಲೂಕ ಘಟಕದ ವಿವಿಧ ಪದಾಧಿಕಾರಿಗಳು, ಮರ್ಚೆಡ್ ಗ್ರಾಮ ಘಟಕದ



ವಿವಿಧ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಈ ಸಂಧರ್ಭದಲ್ಲಿ ಜಿಲ್ಲಾ ಉಪಾದ್ಯಕ್ಷರಾದ ಮುಜಾಹಿದ್ ಮರ್ಚೆಡ್ ಇವರು ಮಾತನಾಡಿ ರೈತ ಸಂಘಟನೆ ಯಾವ ಜಾತಿ, ಧರ್ಮ, ಪಕ್ಷಕ್ಕಾಗಿ ಅಥವಾ ಯಾವೂದೇ ಗುಂಪಿಗಾಗಿ ಅಲ್ಲ ಇದು ಕೇವಲ ಮಾನವ ಜಾತಿ ಮಾನವಿಯತೆಗಾಗಿ ಮಾತ್ರ ಕೆಲಸ ನಿರ್ವಹಿಸುತ್ತದೆ. ಇಲ್ಲಿ ಭೇಧ ಭಾವ ಇಲ್ಲ, ಇಲ್ಲಿ ಮೇಲು ಕೀಳು ಇಲ್ಲ, ಇಲ್ಲಿ ಒಂದೇ ವಿಷಯ ಮಾತ್ರ ಇಲ್ಲ ಇದು ಇಡೀ ಸಮಾಜಕ್ಕಾಗಿ ಕಾರ್ಯನಿರ್ಹಿಸುತ್ತದೆ. ಇಲ್ಲಿ ರೈತರು ತಮ್ಮ ಸ್ವಾರ್ಥಕ್ಕಾಗಿ ಏನು ಮಾಡಲ್ಲ ರೈತ ಎಂದು ಹೇಳಿದರು.

# ಭಕ್ತರ ಪಾಲಿನ ಕುಂಭಮೇಳ ಗವಿಮಠ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆ ಹಾಗೂ ರಾಜ್ಯ ಮಾತ್ರವಲ್ಲದೆ ದೇಶ ವಿದೇಶದಲ್ಲಿ ಹೆಸರು ಮಾಡಿದ ರ್‍ನಾಟಕದ ಕುಂಭಮೇಳ ಎನ್ನುವ ಖ್ಯಾತಿ ಪಡೆದ ಸ್ಥಳ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಎಂದು ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಶೀವಪ್ರೀಯಾ ಕಾನೂನು ಮಹಾವಿದ್ಯಾಲಯದಿಂದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ಪ್ರಸಾದ ಸೇವೆ ಮಾಡಿ ಅವರು ಮಾತನಾಡಿದರು.

ಇಡಿ ಜಗತ್ತು ಇಂದು ಕೊಪ್ಪಳವನ್ನು ಗುರುತಿಸುತ್ತಿದೆ ಅದರಂತೆ ಸಾಮಜಿಕ ನ್ಯಾಯ, ಬಡವ ಬಲ್ಲಿದ ಎಂಬ ಬೇದಭಾವವಿಲ್ಲದ ಹಾಗೂ ಎಲ್ಲರೂ ಸರಿ ಸಮಾನರು ಎಂಬ ಮನಸ್ಸಿನಿಂದ ಜರುಗುವ ಎಲ್ಲಾ ಜಾತಿ ರ್‍ಮ ಮೀರಿದ ಏಕೈಕ ಜಾತ್ರೆ ಇದಾಗಿದೆ ಇದರಲ್ಲಿ ಜಿಲ್ಲೆಯ ಎಲ್ಲಾ ಶಾಲಾ , ಕಾಲೇಜುಗಳ ವಿದ್ಯರ್ಥಿಗಳು,ಹಿರಿಯರು ಯುವಕರು ಸೇರಿದಂತೆ ಅನೇಕರು ತಮ್ಮ ಭಕ್ತಿ ಸೇವೆ ಮಾಡುವದು ಸಾಮಾನ್ಯವಾಗಿದೆ ಅದರಂತೆ ನಮ್ಮ ಕಾನೂನು ಮಹಾವಿದ್ಯಾಲಯದ ವಿದ್ಯರ್ಥಿಗಳು ಇಂದು ಅಜ್ಜನ ಸೇವೆ ಮಾಡಲು ಮುಂದಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ರಜೀಯಾ, ಸರಸ್ವತಿ ಸೇರಿದಂತೆ ಇನ್ನೀತರರು ಹಾಜರಿದ್ದರು.

# ಸಿದ್ದೇಶ್ವರ ಶ್ರೀಗಳ ಜೀವನವೇ ವಿಶೇಷ ಸಂದೇಶ

• ಪರಶುರಾಮ ಕರಣಂ ಭಾಲ್ಕಿ

ಸಂತರಲ್ಲಿಯೇ ಶ್ರೇಷ್ಠರಾದ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಮಹಾ ಸ್ವಾಮೀಜಿಗಳು. ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸಿದ ನಡೆದಾಡುವ ದೇವರು ಎಂದು ಸಂಗಮೇಶ್ವರ ಸ್ವಾಮೀಜಿಗಳು ಅಭಿಪ್ರಾಯಪಟ್ಟರು. ಪಟ್ಟಣದ ಮಹಾ ಮನೆಯಲ್ಲಿ ಆಯೋಜಿಸಲಾದ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಮೂರನೇ ವರ್ಷದ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಮಾನವನು ಗುರಿಯ ಕಡೆಗೆ ಓಡಬೇಕು ಎಂಬುದನ್ನು ಅರಿಯಬೇಕು. ಸಿದ್ದೇಶ್ವರ ಸ್ವಾಮೀಜಿಗಳು ಸಂಪತ್ತು, ಅಧಿಕಾರ ,ಕೀರ್ತಿಗಾಗಿ ಅಲ್ಲ ಜ್ಞಾನಕ್ಕಾಗಿ ಓಡಿದವರು. ನಹೀ ಜ್ಞಾನೇನ ಸದೃಶಂ ಜ್ಞಾನಕಿಂತ ಶ್ರೇಷ್ಠವಾದದ್ದು ಯಾವುದು ಇಲ್ಲ ಎಂಬುದನ್ನು ಅವರು ತಮ್ಮ ಬದುಕಿನಿಂದಲೇ ಸಾರಿದರು. ಚನ್ನಬಸವಣ್ಣ ಬಳತೆ ಅವರು ಶ್ರೀಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಿಸ್ವಾರ್ಥ ಸೇವೆ ದಾಸೋಹ ಮತ್ತು ಸಮಾಜಮುಖಿ ಚಟುವಟಿಕೆಗಳ ಮೂಲಕ ಶ್ರೀಗಳ ಸಂದೇಶದಂತೆ ಬದುಕುತ್ತಿದ್ದಾರೆ. ಅವರು ನಿಜ ಅರ್ಥದಲ್ಲಿ ಶ್ರೀಗಳ ಬದುಕಿನ ಪ್ರತಿಬಿಂಬವಾಗಿದ್ದಾರೆ ಎಂದು ಹೇಳಿದರು. ಶ್ರೀ ಮಹಾಲಿಂಗ ದೇವರು ಮಾತನಾಡಿ ಸಿದ್ದೇಶ್ವರ



ಸ್ವಾಮಿಗಳು ತಮ್ಮ ದೀರ್ಘಕಾಲದ ಪ್ರವಚನಗಳನ್ನು ನಡೆಸಿದ ಪವಿತ್ರ ಭೂಮಿ ಇದಾಗಿದೆ. ಮಹಾಮನೆ ಶ್ರೀಗಳ ಕೃಪೆಯಿಂದ ಆಧ್ಯಾತ್ಮಿಕ ಶಕ್ತಿಯ ಕೇಂದ್ರವಾಗಿ ರೂಪುಗೊಂಡಿದೆ ಎಂದು ತಿಳಿಸಿದರು. ಶ್ರೀ ಶಿವಯೋಗಿಸ್ವರ ಸ್ವಾಮಿಗಳು ಕಲ್ಯಾಣ ಕಾ ಖಂಡಕಿ ಮಾತನಾಡಿ ಬದುಕು ಭಗವಂತ ನೀಡಿದ ಅಮೂಲ್ಯ ಅವಕಾಶಗಳನ್ನು ಸಾರ್ಥಕವಾಗಿ ಬಳಸಿಕೊಳ್ಳಬೇಕು. ಜಗತ್ತಿಗೆ ಅತ್ಯಂತ ಅಗತ್ಯವಾದ ಪ್ರೇಮ, ಕರುಣೆ ಮತ್ತು ಸಾಮರ್ಥ್ಯವನ್ನು ಈ ಸಿದ್ಧೇಶ್ವರ ಅಪ್ಪಾಜಿಗಳು ವಿಶ್ವಕ್ಕೆ ನೀಡಿದ್ದಾರೆ. ಅವರ ಜ್ಞಾನ ವಾಣಿ ಬದುಕಿಗೆ ದಾರಿ ದೀಪವಾಗಿದೆ ಅವರು ಈ ಶತಮಾನ ಕಂಡ ಶ್ರೇಷ್ಠ ಸಂತ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಚನ್ನಬಸವಣ್ಣ ಬಳತೆ ಪ್ರಾಸ್ತಾವಿಕವಾಗಿ ಮಾತನಾಡಿ ಶ್ರೀ ಸಿದ್ದೇಶ್ವರ ಅಪ್ಪಾಜಿಗಳು ಜ್ಞಾನದ ಭಂಡಾರವಾಗಿದ್ದು ಸರಳ ಜೀವನ ಹಾಗೂ ಉದಾತ್ತ ಚಿಂತನೆಗಳ ಮೂಲಕ ಸಮಾಜಕ್ಕೆ ದಾರಿ ತೋರಿದ ಮಹಾನ್ ಸಂತರು ಎಂದು ಶ್ಲಾಘಿಸಿದರು. ಈ ಕಾರ್ಯಕ್ರಮದಲ್ಲಿ ಶುಭಾಂಗಿ ಚನ್ನಬಸವಣ್ಣ ಬಳತೆ, ಸಮೃದ್ಧಿ, ಬ್ರಹ್ಮಾನಂದ ಸ್ವಾಮೀಜಿಗಳು, ಸೋಮನಾಥಪ್ಪ ಅಷ್ಟೂರೆ, ಶಂಭುಲಿಂಗ ಕಾಮಣ್ಣ, ಅಶೋಕ್ ರಾಜೋಳೆ, ಸತೀಶ್ ಪಾಟೀಲ್, ವಿಜಯ್ ಕುಮಾರ್ ಸುಲುಗುಂಟೆ, ನಿತಿನ್ ಪಂಡಿತ್ ಪಾಟೀಲ್, ಸಂತೋಷ್ ಬಾವಗೆ, ಚಂದ್ರಕಾಂತ್. ಟಿ . ಮಡೋಳಪ್ಪ, ಕಿರಣ್ ನೀಲಂಗೆ, ನರೇಂದ್ರ ,ಚಂದ್ರಕಾಂತ್ ತಳವಾಡೆ ,ಪ್ರಶಾಂತ್ ಕಾಕನಾಳೆ ಇನ್ನಿತರರು ಉಪಸ್ಥಿತರಿದ್ದರು. ವಚನ ಗಾಯನವನ್ನು ಸಂಜು ಕುಮಾರ್, ಮಲ್ಲಿಕಾರ್ಜುನ್ ನಾಗಮಾರಪಳ್ಳಿ ಅನುಸೂಯ ರೆಡ್ಡಿ ಮಾಡಿದರು. ನಿರೂಪಣೆಯನ್ನು ಕರಣಂ ವಂದನಾರ್ಪಣೆಯನ್ನು ಕುಮಾರಸ್ವಾಮಿಜೀ ಮಾಡಿದರು.

**ಶ್ರೀ ಸಿದ್ದೇಶ್ವರ ಅಪ್ಪಾಜಿಗಳು ನನ್ನ ಬದುಕಿನ ದಿಕ್ಕನ್ನೇ ಬದಲಿಸಿದವರು. ಅವರ ಜ್ಞಾನ ವಾಣಿ, ಸರಳ ಜೀವನ ಮತ್ತು ನಿಸ್ವಾರ್ಥ ಸೇವೆಯೇ ನನಗೆ ಮಾರ್ಗದರ್ಶನವಾಗಿದೆ. ಇಂದು ನಾನು ಸಮಾಜಕ್ಕಾಗಿ ಏನಾದರೂ ಮಾಡುತ್ತಿದ್ದರೆ ಅದಕ್ಕೆ ಶ್ರೀಗಳೇ ಪ್ರೇರಣೆ.**

**–ಚನ್ನಬಸವಣ್ಣ ಬಳತೆ, ಭಾಲ್ಕಿ.**

# ಪತ್ರಕರ್ತೆಯ ಪರಿಶ್ರಮಕ್ಕೆ ಸಂದ ಡಾಕ್ಟರೇಟ್

• ಮಲ್ಲಮ್ಮ ನುಡಿ ವಾರ್ತೆ ಮೈಸೂರು

ಪತ್ರಕರ್ತೆ ಹಾಗೂ ತಮ್ಮದೇ ಡಿಜಿಟಲ್ ಮಾಧ್ಯಮ ಸಂಸ್ಥೆ ಮುನ್ನೆಡೆಸುತ್ತಿರುವ ಕೆ.ಎಲ್ ನಂದಿನಿ ಅವರಿಗೆ ಮೈಸೂರು ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ದೊರೆತಿದೆ.

ಸಿನಿಮಾ ಮತ್ತು ರಾಜಕೀಯ ರಂಗಕ್ಕೆ ಖ್ಯಾತ ನಟ ಡಾ.ಅಂಬರೀಶ್ ಅವರ ಕೊಡುಗೆ ಒಂದು ಅಧ್ಯಯನ' ವಿಷಯದ ಬಗ್ಗೆ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಡಾ. ಎನ್ ಮಮತಾ ಅವರ ಮಾರ್ಗದರ್ಶನದಲ್ಲಿ ನಂದಿನಿ ಸಲ್ಲಿಸಿದ ಮಹಾಪ್ರಬಂಧಕ್ಕೆ ಈ ಡಾ-ಕ್ಟರೇಟ್ ಸಿಕ್ಕಿದೆ.

ಮೈಸೂರು ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ 106ನೇ ಘಟಿಕೋತ್ಸವದಲ್ಲಿ ಕುಲಾಧಿಪತಿಗಳಾದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹಾಗೂ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ ಸುಧಾ-ಕರ್ ಪಿ.ಹೆಚ್ ಡಿ ಪದವಿ ಪ್ರದಾನ ಮಾಡಿದರು.

ವಿಜಯ ಕರ್ನಾಟಕದ ಮೂಲಕ ಪತ್ರಿಕೋದ್ಯಮಕ್ಕೆ ಕಾಲಿಟ್ಟ ನಂದಿನಿ ಕೆ.ಎಲ್, ವೃತ್ತಿಯ ಜೊತೆ ಜೊತೆಗೆ ಸಂಶೋಧನೆಯನ್ನೂ ಕೈಗೊಂಡಿದ್ದರು. ನಂತರ ತಮ್ಮದೇ ಆದ ಡಿಜಿಟಲ್ ಮಾಧ್ಯಮ ಸಂಸ್ಥೆಯನ್ನು



ಶುರು ಮಾಡಿ, ಅಪರೂಪದ ಸಂಚಿಕೆಗಳನ್ನು ನಾಡಿಗೆ ಪರಿಚಯಿಸಿದ್ದಾರೆ. ಅನೇಕ ಸಾಧಕರ ಸಂದರ್ಶನಗಳನ್ನೂ ಮಾಡಿದ್ದಾರೆ. ರಾಜ್ಯಾದ್ಯಂತ ಪ್ರವಾಸ ಮಾಡಿ, ನಾಡಿನ ಅಚ್ಚರಿಗಳನ್ನು ಜನರಿಗೆ ಪರಿಚಯಿಸಿದ ಕೀರ್ತಿ ನಂದಿನಿ ಅವರದ್ದು.

**ವಿವರ:** ಹಾಸನದ ಆಲೂರಿನ ಕಿತಬೂರಿನ ಪುಟ್ಟ ಗ್ರಾಮದ ಅಪ್ಪಟ ಮಲೆನಾಡಿನ ಹಳ್ಳಿ ಪ್ರತಿಭೆ ನಂದಿನಿ. ಪ್ರಾಥಮಿಕ ಹಂತದಿಂದ ಉನ್ನತ ಶಿಕ್ಷಣದವರೆಗೂ ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ಓದಿ ಸೈನಿಸಿಕೊಂಡ ಹೆಣ್ಣು ಮಗಳು. ಕಾಲೇಜಿನ ದಿನಗಳಿಂದಲೇ ಓದಿನ ಜೊತೆ ಜೊತೆಗೆ ಹಲವಾರು ಪತ್ರಿಕೆಗಳಲ್ಲಿ ಲೇಖನಗಳನ್ನು ಬರೆಯುತ್ತ ಪತ್ರಿಕೋದ್ಯಮದ ಗೀಳು ಹೆಚ್ಚಿಸಿಕೊಂಡವರು.

ಹೆಸರಾಂತ ಪತ್ರಿಕೆಯಲ್ಲಿ ಸಿನಿಮಾ ಪತ್ರಕರ್ತೆಯಾಗಿ ಹಲವು ವರ್ಷಗಳ ಕಾರ್ಯ ನಿರ್ವಹಿಸುತ್ತಾ ಜೊತೆ ಜೊತೆಗೆ ಸಂಶೋಧನೆಯನ್ನು ಕೈಗೊಂಡರು. ವಿದ್ಯಾಭ್ಯಾಸ ಜೊತೆಗೆ ಹೊಸ ತನ್ನದೇ ಆದಂತ ಡಿಜಿಟಲ್ ಮಾಧ್ಯಮ ಸಂಸ್ಥೆಯನ್ನು ಸ್ಥಾಪಿಸಿ, ಕರ್ನಾಟಕದ ಅತ್ಯಂತ ಪ್ರವಾಸ ಕೈಗೊಂಡು ಇತಿಹಾಸ ವ್ಯಕ್ತಿ ವಸ್ತು ಸ್ಥಳ ಸ್ಮಾರಕ ಜನಜೀವನಶೈಲಿಗಳ ಪರಿಚಯವನ್ನು ಕರುನಾಡಿಗೆ ಪರಿಚಯಿಸುತ್ತಾ ಸಾಕಷ್ಟು ಜನ ಮನ್ನಣೆಯನ್ನು ಗಳಿಸಿ ಕೊಂಡಿದ್ದಾರೆ.

**ಅಭಿನಂದನೆ:** ಹಾಸನ ಜಿಲ್ಲೆ ಆಲೂರು ತಾಲೂಕಿನ ಕುಗ್ರಾಮದಿಂದ ಬೆಳೆದು ಬಂದ ನಂದಿನಿ, ವಿಜಯ ಕರ್ನಾಟಕ ಪತ್ರಿಕೆಯಲ್ಲಿ ಸೇವೆ ಸಲ್ಲಿಸಿ ಸದ್ಯ ಅವರದೇ ಸಂಸ್ಥೆ ಕಟ್ಟಿಕೊಂಡಿದ್ದಾರೆ. ಅವರು ಮಂಡಿಸಿದ ಪ್ರಬಂಧಕ್ಕೆ ಮೈಸೂರು ವಿವಿ ಡಾಕ್ಟ-ರೇಟ್ ದೊರೆತಿರುವುದಕ್ಕಾಗಿ ನಂದಿನಿ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಅಭಿನಂದಿಸಿದ್ದಾರೆ.

ಈ ಸಂದರ್ಭದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಗಳು ಮತ್ತು ಉಪಕುಲಪತಿಗಳು ರಿಜಿಸ್ಟರ್ ಹಾಗೂ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರು ಹಾಜರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)